ಸಂಪುಟ: 06 ಸಂಚಿಕೆ: 84 ಪುಟಗಳು: 08 ಭಾನುವಾರ 07 ಜೂನ್ 2026
www.udayavahini.in epaper.udayavahini.in Udaya vahini news Udaya vahini news Udayavahini news you tube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

**ಮುಂಜಾನೆ ಮಾತು**
ಗೆಲುವಿಗೆ ಮೊದಲ ಮೆಟ್ಟಿಲೆಂದರೆ ನಾವು ಮಾಡಬೇಕಾದ ಕೆಲಸವನ್ನು ಪ್ರೀತಿಸಬೇಕು. ಶ್ರದ್ಧೆಯೇ ಎರಡನೇ ಹಂತ. ಅಲ್ಲಿಂದ ಗೆಲುವು ದೂರವಿಲ್ಲ.

ಉದಯ UV ವಾಹಿನಿ
ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ರಾಜ್ಯಸಭಾ, ಮೇಲ್ಮನೆ ಚುನಾವಣೆಗಳ ಅಭ್ಯರ್ಥಿಗಳಿಂದ ನಾಮಪತ್ರ ಸಲ್ಲಿಕೆ

• ಉದಯವಾಹಿನಿ, ಬೆಂಗಳೂರು

ವಿಧಾನ ಪರಿಷತ್ ಹಾಗೂ ರಾಜ್ಯಸಭಾ ಚುನಾವಣೆಗಳಿಗೆ ಕಾಂಗ್ರೆಸ್ ಪಕ್ಷದಿಂದ ಕಣಕ್ಕೆ ಇಳಿದಿರುವ ಅಭ್ಯರ್ಥಿಗಳು ಇಂದು ವಿಧಾನಸೌಧದ ಚುನಾವಣಾ ಅಧಿಕಾರಿಗಳಿಗೆ ನಾಮಪತ್ರ ಸಲ್ಲಿಸಿದರು. ನಾಮಪತ್ರ ಸಲ್ಲಿಕೆಗೆ ಜೂನ್ 8 ಕೊನೆಯ ದಿನವಾಗಿದೆ. ರಾಜ್ಯಸಭಾ ಚುನಾವಣೆ ಹಿನ್ನೆಲೆ ಮಲ್ಲಿಕಾರ್ಜುನ ಖರ್ಗೆ ಅವರು ನಾಮಪತ್ರ ಸಲ್ಲಿಸಿದ್ದರು.

ನಾಮಪತ್ರ ಸಲ್ಲಿಕೆ ವೇಳೆ ಲೋಕಸಭೆಯ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ, ಸಿಎಂ ಡಿ.ಕೆ.ಶಿವಕುಮಾರ್, ಮಾಜಿ ಸಿಎಂ ಸಿದ್ದರಾಮಯ್ಯ, ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ.ವೇಣುಗೋಪಾಲ್, ಕಾಂಗ್ರೆಸ್ ಕರ್ನಾಟಕ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲಾ, ಜಯರಾಂ ರಮೇಶ್ ಸೇರಿದಂತೆ ರಾಜ್ಯದ ಸಚಿವರು ಉಪಸ್ಥಿತರಿದ್ದರು.

## ರಾಮಲಿಂಗಾರೆಡ್ಡಿ ಮನವೊಲಿಸುವಲ್ಲಿ ಬಹುತೇಕ ಯಶಸ್ವಿಯಾದ ಹೈಕಮಾಂಡ್

• ಉದಯವಾಹಿನಿ, ಬೆಂಗಳೂರು

ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿದ್ದ ರಾಮಲಿಂಗಾರೆಡ್ಡಿ ಅವರನ್ನು ಹೈಕಮಾಂಡ್ ಮನವೊಲಿಸುವಲ್ಲಿ ಬಹುತೇಕ ಯಶಸ್ವಿಯಾಗಿದೆ. ಬೆಂಗಳೂರು ನಗರಾಭಿವೃದ್ಧಿ ಖಾತೆ ನೀಡುವಂತೆ ಕ್ಯಾತೆ ತೆಗೆದಿದ್ದ ರಾಮಲಿಂಗಾರೆಡ್ಡಿ ಅವರಿಗೆ ಜಲಸಂಪನ್ಮೂಲ ಇಲಾಖೆ ಜೊತೆಗೆ ಹೆಚ್ಚುವರಿ ಖಾತೆ ನೀಡುವುದಾಗಿ ಹೈಕಮಾಂಡ್ ಭರವಸೆ ನೀಡಿದೆ. ಈ ಹಿನ್ನೆಲೆ ರಾಮಲಿಂಗಾರೆಡ್ಡಿ ಇಂದೇ ಅಧಿಕೃತವಾಗಿ ರಾಜೀನಾಮೆ ಹಿಂಪಡೆಯಲಿದ್ದಾರೆ ಎಂಬ ಮಾಹಿತಿ ಲಭ್ಯವಾಗಿದೆ.

ರಾಮಲಿಂಗಾರೆಡ್ಡಿ ಅವರು ನನ್ನ ಸ್ನೇಹಿತ. ಅವರು ನೀಡಿದ ರಾಜೀನಾಮೆ ಪತ್ರವನ್ನ ಅಂಗೀಕರಿಸುವುದಿಲ್ಲ ಸಿಎಂ ಡಿ.ಕೆ. ಶಿವಕುಮಾರ್ ಅವರು ಪುನರುಚ್ಚಿಸಿದ್ದರು. ಈ ಬೆನ್ನಲೇ ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್ ಅವರು ಭೇಟಿಯಾಗಿ ರೆಡ್ಡಿಯೊಂದಿಗೆ ಚರ್ಚೆ ನಡೆಸಿದರು. ಖಾಸಗಿ ಹೊಟೇಲ್ ತಂಗಿರುವ ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸುರ್ಜೇವಾಲಾ ಅವರು ಕೂಡ ಮಾತುಕತೆ ನಡೆಸಿದರು. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಸುರ್ಜೇವಾಲಾ, ರಾಮಲಿಂಗಾರೆಡ್ಡಿ ಅವರು ಹಿರಿಯ ನಾಯಕರಾಗಿದ್ದು, ಪಕ್ಷದ ಆಸ್ತಿಯಾಗಿದ್ದಾರೆ. ತಪ್ಪು ತಿಳುವಳಿಕೆಯಿಂದ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿದ್ದರು. ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಸಿಎಂ ಡಿ.ಕೆ.ಶಿವಕುಮಾರ್, ಹರಿಪ್ರಸಾದ್ ಹಾಗೂ ನಾನು ಸಹ ರೆಡ್ಡಿಯೊಂದಿಗೆ ಮಾತುಕತೆ ನಡೆಸಿದ್ದೇನೆ. ಅಧಿಕೃತವಾಗಿ ರಾಜೀನಾಮೆ ಹಿಂಪಡೆಯಲಿದ್ದಾರೆ.

## ರಾಮಲಿಂಗಾರೆಡ್ಡಿ ರೆಡ್ಡಿ, ಮುನಿಯಪ್ಪ ಬಳಿಕ ಈಗ ಸತೀಶ್ ಜಾರಕಿಹೊಳಿ ತಗಾದೆ

• ಉದಯವಾಹಿನಿ,ಬೆಂಗಳೂರು

ಖಾತೆಗಾಗಿ ರಾಮಲಿಂಗಾರೆಡ್ಡಿ, ಕೆ.ಎಚ್.ಮುನಿಯಪ್ಪ ಅವರ ತಗಾದೆ ಬಳಿಕ ಮತ್ತೊಬ್ಬ ಸಚಿವರು ಸಿಡಿಮಿಡಿಗೊಳ್ಳುತ್ತಿದ್ದು, ಸಮಾಜ ಕಲ್ಯಾಣ ಖಾತೆಗಾಗಿ ಪಟ್ಟುಹಿಡಿದಿದ್ದಾರೆ. ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪರಮಾಪ್ತರಾಗಿರುವ ಸತೀಶ್ ಜಾರಕಿಹೊಳಿ ಲೋಕೋಪಯೋಗಿ ಖಾತೆ ಜೊತೆಗೆ ಅಥವಾ ಬದಲಾಗಿ ಸಮಾಜಕಲ್ಯಾಣ ಖಾತೆ ನೀಡುವಂತೆ ಒತ್ತಡ ಹೇರಿದ್ದು, ಕಾಂಗ್ರೆಸ್‌ಗೆ ಬಿಸಿ ತುಪ್ಪವಾಗಿ ಪರಿಣಮಿಸಿದೆ.

ಸಮಾಜ ಕಲ್ಯಾಣ ಖಾತೆಯ ಮೇಲೆ ಸಚಿವ ಕೆ.ಎಚ್. ಮುನಿಯಪ್ಪ ಕೂಡ ಕಣ್ಣಿಟ್ಟಿದ್ದಾರೆ. ನಮಗೂ ಅದೇ ಖಾತೆ ಬೇಕೆಂದು ಸತೀಶ್ ಜಾರಕಿಹೊಳಿ, ಹೈಕಮಾಂಡ್ ಅವರ ಮುಂದೆ ವಕಾಲತ್ತು ಹಾಕಿರುವುದಾಗಿ ಮೂಲಗಳು ತಿಳಿಸಿವೆ. ಸಮಾಜ ಕಲ್ಯಾಣ ಇಲಾಖೆ ಕರ್ನಾಟಕದಲ್ಲಿ ಅತ್ಯಂತ ಪ್ರಭಾವಿ ಖಾತೆಯಾಗಿದೆ. ಸುಮಾರು 42 ಸಾವಿರ ಕೋಟಿ ರೂ.ಗಳಷ್ಟು ಅನುದಾನ ಬೇರೆ ಬೇರೆ ಇಲಾಖೆಗಳ ಮೂಲಕ ಖರ್ಚಾಗುತ್ತಿದೆ. ಎಸ್‌ಇಪಿ–ಟಿಎಸ್‌ಪಿ ಹಿನ್ನೆಲೆಯಲ್ಲಿ ಶೋಷಿತ ಸಮುದಾಯಗಳ ಅಭಿವೃದ್ಧಿಗೆ ಹೆಚ್ಚಿನ ಹಣಕಾಸು ನೆರವು ದೊರೆಯುತ್ತಿದೆ. ಜೊತೆಗೆ ಅತ್ಯಂತ ಪ್ರಭಾವ ಶಾಲಿಯಾಗಿ ಕೆಲಸ ಮಾಡಲು ಅವಕಾಶಗಳಿವೆ.

ಇದಕ್ಕಾಗಿಯೇ ಕೆ.ಎಚ್.ಮುನಿಯಪ್ಪ ಸೇರಿದಂತೆ ಹಲವಾರು ಮಂದಿ ಸಮಾಜ ಕಲ್ಯಾಣ ಇಲಾಖೆ ಮೇಲೆ ಕಣ್ಣಿಟ್ಟಿದ್ದಾರೆ.

## ಪ್ರಧಾನಿ ಮೋದಿ ಕರೆಗೆ ಕಾಂಗ್ರೆಸ್ ಶಾಸಕ ಕೆ.ಎನ್. ರಾಜಣ್ಣ ಸಾಥ್

• ಉದಯವಾಹಿನಿ, ಬೆಂಗಳೂರು

ಪ್ರಧಾನಿ ನರೇಂದ್ರ ಮೋದಿ ಅವರು ನೀಡಿರುವ ತಾಯಿಯ ಹೆಸರಿನಲ್ಲಿ ಒಂದು ಮರ ಬೆಳೆಸಿ ಎಂಬ ಪರಿಸರ ಕಾಳಜಿಯ ಕರೆಗೆ ಶಾಸಕ ಕೆ.ಎನ. ರಾಜಣ್ಣ ಬೆಂಬಲ ವ್ಯಕ್ತಪಡಿಸಿದ್ದಾರೆ. ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಆಯೋಜಿಸಿದ್ದ ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭದಲ್ಲಿ ಮಾತನಾಡಿದ ಅವರು, ಪರಿಸರ ಸಂರಕ್ಷಣೆಗಾಗಿ ಪ್ರಧಾನಿ ಮೋದಿ ನೀಡಿರುವ ಈ ಸಲಹೆ ಅತ್ಯಂತ ಅರ್ಥಪೂರ್ಣವಾಗಿದೆ ಎಂದು ಶ್ಲಾಘಿಸಿದರು. ನಾವು ವಿರೋಧ ಪಕ್ಷದವರು ಎಂದ ಮಾತ್ರಕ್ಕೆ ಎಲ್ಲವನ್ನೂ ವಿರೋಧಿಸಬೇಕಾಗಿಲ್ಲ. ಸಮಾಜದ ಹಿತದೃಷ್ಟಿಯಿಂದ ಯಾರೇ ಒಳ್ಳೆಯ ಸಲಹೆ ನೀಡಿದರೂ ಅದನ್ನು ಸ್ವೀಕರಿಸಿ ಅನುಷ್ಠಾನಗೊಳಿಸಬೇಕು ಎಂದು ಹೇಳಿದರು. ವಿದ್ಯಾರ್ಥಿಗಳು ಪಕ್ಷ ರಾಜಕಾರಣವನ್ನು ಮರೆತು ಪರಿಸರ ಸಂರಕ್ಷಣೆಯಂತಹ ಸಮಾಜಮುಖಿ ಕಾರ್ಯಗಳಲ್ಲಿ ಸಕ್ರಿಯವಾಗಿ ಭಾಗವಹಿಸಬೇಕು. ಒಂದು ಮರವನ್ನು ನೆಟ್ಟು ಬೆಳೆಸುವ ಮೂಲಕ ಪರಿಸರ ರಕ್ಷಣೆಗೆ ಕೊಡುಗೆ ನೀಡಬೇಕು ಎಂದು ಕರೆ ನೀಡಿದರು.

# ಭಾರತ ಯಾರಿಗೂ ಬಗ್ಗಲ್ಲ ಹಸ್ತಕ್ಷೇಪ ಮಾಡಲ್ಲ

**ಟ್ರಂಪ್‌ರನ್ನು ಹೊಗಳಿ ಝೆಲೆನ್ಸ್ಕಿ ಕಾಲೆಳೆದ ಪುಟಿನ್**

• ಉದಯವಾಹಿನಿ,ನವದೆಹಲಿ

ರಷ್ಯಾದ ಜೊತೆಗಿನ ಸಹಕಾರವನ್ನು ಕಡಿಮೆ ಮಾಡುವಂತೆ ಭಾರತದ ಮೇಲೆ ನಿರಂತರ ಒತ್ತಡ ಹೇರುತ್ತಿರುವ ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರಿಗೆ ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ತೀಕ್ಷ್ಣ ಸಂದೇಶ ರವಾನಿಸಿದ್ದಾರೆ. ''ಭಾರತ ಎಂದಿಗೂ ಯಾವುದೇ ವಿದೇಶಿ ಶಕ್ತಿಯ ಆದೇಶಗಳಿಗೆ ಬಗ್ಗುವುದಿಲ್ಲ. ಭಾರತ ಸಾರ್ವಭೌಮ ರಾಷ್ಟ್ರವಾಗಿಯೇ ತನ್ನ ನಿರ್ಧಾರಗಳನ್ನು ತೆಗೆದುಕೊಳ್ಳಲಿದೆ'' ಎಂದು ಪುಟಿನ್ ಭಾರತದ ಪರ ಬ್ಯಾಟಿಂಗ್ ಮಾಡಿದ್ದಾರೆ.

ಸೇಂಟ್ ಪೀಟರ್ಸ್‌ಬರ್ಗ್ ಅಂತಾರಾಷ್ಟ್ರೀಯ ಆರ್ಥಿಕ ವೇದಿಕೆಯಲ್ಲಿ ಮಾತನಾಡಿದ ಪುಟಿನ್ ಭಾರತದ ಪ್ರಧಾನಿ ನರೇಂದ್ರ ಮೋದಿ ಅವರ ನಾಯಕತ್ವವನ್ನು ಮುಕ್ತಕಂಠದಿಂದ ಶ್ಲಾಘಿಸಿದರು. ಇದೇ ವೇಳೆ, ಭಾರತದ ಮೇಲೆ ಟ್ರಂಪ್ ಹೇರಿದ್ದ ನಿರ್ಬಂಧಗಳು ಅಮೆರಿಕಕ್ಕೇ ತಿರುಗುಬಾಣ ಆಗಲಿವೆ ಎಂದು ಎಚ್ಚರಿಸಿದರು. ''ಭಾರತವು ಯಾವಾಗಲೂ ತನ್ನ ರಾಷ್ಟ್ರೀಯ ಹಿತಾಸಕ್ತಿ, ಸೂಕ್ತ ಬೆಲೆ ಮತ್ತು ತಂತ್ರಜ್ಞಾನದ ಲಾಭವನ್ನು ಆಧರಿಸಿಯೇ ತನ್ನ ಪಾಲುದಾರರನ್ನು ಆಯ್ಕೆ ಮಾಡಿಕೊಳ್ಳುತ್ತದೆ'' ಎಂದು ಅವರು ಅಭಿಪ್ರಾಯವ್ಯಕ್ತಪಡಿಸಿದರು.

ಸೇಂಟ್ ಪೀಟರ್ಸ್‌ಬರ್ಗ್ ಅಂತಾರಾಷ್ಟ್ರೀಯ ಆರ್ಥಿಕ ವೇದಿಕೆಯಲ್ಲಿ ಮಾತನಾಡಿದ ಪುಟಿನ್ ಭಾರತದ ಪ್ರಧಾನಿ ನರೇಂದ್ರ ಮೋದಿ ಅವರ ನಾಯಕತ್ವವನ್ನು ಮುಕ್ತಕಂಠದಿಂದ ಶ್ಲಾಘಿಸಿದರು. ಇದೇ ವೇಳೆ, ಭಾರತದ ಮೇಲೆ ಟ್ರಂಪ್ ಹೇರಿದ್ದ ನಿರ್ಬಂಧಗಳು ಅಮೆರಿಕಕ್ಕೇ ತಿರುಗುಬಾಣ ಆಗಲಿವೆ ಎಂದು ಎಚ್ಚರಿಸಿದರು. ''ಭಾರತವು ಯಾವಾಗಲೂ ತನ್ನ ರಾಷ್ಟ್ರೀಯ ಹಿತಾಸಕ್ತಿ, ಸೂಕ್ತ ಬೆಲೆ ಮತ್ತು ತಂತ್ರಜ್ಞಾನದ ಲಾಭವನ್ನು ಆಧರಿಸಿಯೇ ತನ್ನ ಪಾಲುದಾರರನ್ನು ಆಯ್ಕೆ ಮಾಡಿಕೊಳ್ಳುತ್ತದೆ'' ಎಂದು ಅವರು ಅಭಿಪ್ರಾಯವ್ಯಕ್ತಪಡಿಸಿದರು. ರಷ್ಯಾ ಜೊತೆಗಿನ ಸಹಕಾರ ಸೇರಿದಂತೆ ಕೆಲವು ವಿಷಯಗಳಲ್ಲಿ ಅಮೆರಿಕವು ಭಾರತದ ಮೇಲೆ ಒತ್ತಡ ಹೇರಲು ಪ್ರಯತ್ನಿಸುತ್ತಿದೆ. ಆದರೆ ,150 ಕೋಟಿ ಜನಸಂಖ್ಯೆ ಹೊಂದಿರುವ ದೇಶವನ್ನು ಮುನ್ನಡೆಸುತ್ತಿರುವ ಪ್ರಧಾನಿ ನರೇಂದ್ರ ಮೋದಿ ಅವರ ಮೇಲೆ ಒತ್ತಡ ಹೇರಲು ಯತ್ನಿಸುವುದು ಸಂಪೂರ್ಣ ವ್ಯರ್ಥ ಶ್ರಮ ಎಂಬುದು ಈಗಲಾದರೂ ಎಲ್ಲರಿಗೂ ಅರ್ಥವಾಗಬೇಕು ಎಂದು ಪುಟಿನ್ ಹೇಳಿದ್ದಾರೆ.

ರಷ್ಯಾದಿಂದ ಕಚ್ಚಾ ತೈಲವನ್ನು ಖರೀದಿಸುತ್ತಿರುವುದಕ್ಕಾಗಿ ಭಾರತದ ಮೇಲೆ ಟ್ರಂಪ್ ಸರ್ಕಾರ ವಿಧಿಸಿದ್ದ ನಿರ್ಬಂಧಗಳಿಗೆ ಪ್ರತಿಕ್ರಿಯೆಯಾಗಿ ಪುಟಿನ್ ಈ ಕಠಿಣ ಹೇಳಿಕೆಗಳನ್ನು ನೀಡಿದ್ದಾರೆ. ಭಾರತವು ರಷ್ಯಾದ ತೈಲವನ್ನು ಖರೀದಿಸುವ ಮೂಲಕ ಉಕ್ರೇನ್ ಯುದ್ಧಕ್ಕೆ ಧನಸಹಾಯ ನೀಡುತ್ತಿದೆ ಎಂದು ಆರೋಪಿಸಿದ್ದ ಟ್ರಂಪ್, ಭಾರತದ ಉತ್ಪನ್ನಗಳ ಮೇಲೆ ಶೇ. 25ರಷ್ಟು ಸುಂಕವನ್ನು ಹೇರಿದ್ದರು.

ಆದರೆ, ಭಾರತವು ಈ ಆರೋಪವನ್ನು ಮೊದಲಿನಿಂದಲೂ ನಿರಾಕರಿಸುತ್ತಾ ಬಂದಿದೆ ಹಾಗೂ ಪಾಶ್ಚಿಮಾತ್ಯ ದೇಶಗಳೇ ಸ್ವತಃ ರಷ್ಯಾದಿಂದ ಗ್ಯಾಸ್ ಮತ್ತು ತೈಲವನ್ನು ಖರೀದಿಸುತ್ತಿರುವುದನ್ನು ಭಾರತ ಹಲವು ಬಾರಿ ಜಾಗತಿಕ ವೇದಿಕೆಯಲ್ಲಿ ಎತ್ತಿ ತೋರಿಸಿದೆ.

ಜಾಗತಿಕ ಒತ್ತಡಗಳ ನಡುವೆಯೂ ಭಾರತದ ವಿದೇಶಾಂಗ ಸಚಿವಾಲಯವು ತನ್ನ ನಿಲುವನ್ನು ಸ್ಪಷ್ಟಪಡಿಸಿದ್ದು, ಭಾರತದ ಇಂಧನ ಭದ್ರತೆ ಮತ್ತು ದೇಶದ ಜನರಿಗೆ ಕೈಗೆಟುಕುವ ದರದಲ್ಲಿ ಇಂಧನ ನೀಡುವುದು ಭಾರತದ ಮೊದಲ ಆದ್ಯತೆಯಾಗಿದೆ ಎಂದಿದೆ.

ಇದೇ ವೇಳೆ, ಈ ಪತ್ರದಲ್ಲಿ ತಮ್ಮ ವಯಸ್ಸು ಮತ್ತು ಅಧಿಕಾರದಲ್ಲಿ ದೀರ್ಘಕಾಲ ಇದ್ದ ಬಗ್ಗೆ ಝೆಲೆನ್ಸ್ಕಿಯವರ ವಾಗ್ದಾಳಿಗಳಿಗೆ ಪ್ರತಿಕ್ರಿಯೆಯಾಗಿ, 73 ವರ್ಷದ ಪುಟಿನ್, ವಯಸ್ಸಾದ ಇತರ ಜಾಗತಿಕ ನಾಯಕರ ಕಡೆಗೆ ಗಮನ ಸೆಳೆದರು, ಇಲ್ಲಿ ಮುಖ್ಯ ವಿಷಯವೆಂದರೆ ವಯಸ್ಸು ಅಲ್ಲ, ಮುಖ್ಯ ವಿಷಯವೆಂದರೆ ಕೆಲಸ ಮಾಡುವ ಸಾಮರ್ಥ್ಯ ಎಂದರು.

ಅಲ್ಲದೆ, ಶ್ವೇತಭವನದ ಓವಲ್ ಆಫೀಸ್‌ನಲ್ಲಿ ಇಡೀ ಪ್ರಪಂಚದ ಕಣ್ಣೆದುರೇ ಶಿಕ್ಷಣ ನೀಡಿದ ಮತ್ತು ಸರಿಯಾದ ಡ್ರೆಸ್ ಕೋಡ್ ಕಲಿಸಿದ್ದಕ್ಕಾಗಿ ಅಮೆರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್‌ಗೆ ಧನ್ಯವಾದ ತಿಳಿಸಿದ್ದು, ಇನ್ನೂ ಮಾಡಬೇಕಿದ್ದು, ಹೆಚ್ಚಾಗಿದೆ ಎಂದು ಹೇಳಿದ್ದಾರೆ.

### ರಷ್ಯಾವನ್ನು ಒಂಟಿಯಾಗಿಸುವ ಜಾಗತಿಕ ತಂತ್ರ ವಿಫಲ

ರಷ್ಯಾವನ್ನು ಜಾಗತಿಕವಾಗಿ ಆರ್ಥಿಕವಾಗಿ ಪ್ರತ್ಯೇಕಿಸಲಾಗಿದೆಯೇ ಎಂಬ ಪ್ರಶ್ನೆಗೆ ಉತ್ತರಿಸಿದ ಪುಟಿನ್, ಅಂತಹ ಎಲ್ಲಾ ಪ್ರಯತ್ನಗಳು ಸಂಪೂರ್ಣವಾಗಿ ವಿಫಲವಾಗಿವೆ ಮತ್ತು ಮಾಸ್ಕೋ ಪ್ರಪಂಚದಾದ್ಯಂತದ ದೇಶಗಳೊಂದಿಗೆ ಬಲವಾದ ಸಂಬಂಧವನ್ನು ಮುಂದುವರಿಸಿದೆ ಎಂದು ಹೇಳಿದರು. ರಷ್ಯಾವನ್ನು ಜಾಗತಿಕವಾಗಿ ಬಹಿಷ್ಕರಿಸುವ ಮತ್ತು ಒಂಟಿಯಾಗಿಸುವ ಈ ನೀತಿಯನ್ನು ಹಿಂದಿನ ಅಮೆರಿಕ ಸರ್ಕಾರವು ಪ್ರಾರಂಭಿಸಿತು ಮತ್ತು ನಂತರ ಯುರೋಪಿಯನ್ ದೇಶಗಳು ಅದನ್ನು ಬೆಂಬಲಿಸಿದವು. ಆದರೆ ಈ ತಂತ್ರವು ಸಂಪೂರ್ಣವಾಗಿ ತಲೆಕೆಳಗಾಗಿದೆ ಎಂದು ಪುಟಿನ್ ವಾದಿಸಿದರು. ರಷ್ಯಾ ಎಂದಿಗೂ ಜಾಗತಿಕವಾಗಿ ಒಂಟಿಯಾಗಿಲ್ಲ ಎಂದು ರಷ್ಯಾದ ನಾಯಕ ಸ್ಪಷ್ಟಪಡಿಸಿದರು.

### ರಷ್ಯಾ ಅಧ್ಯಕ್ಷ ಪುಟಿನ್ ಪ್ರತಿಜ್ಞೆ



1 ನೇರ ಮಾತುಕತೆಗೆ ಪ್ರಸ್ತಾಪಿಸಿದ್ದ ಉಕ್ರೇನ್ ಅಧ್ಯಕ್ಷ ಝೆಲೆನ್ಸ್ಕಿ ಆಫರ್ ತಿರಸ್ಕರಿಸಿದ ಪುಟಿನ್, ಒಂದೆಡೆ ಯುದ್ಧ ನಡೆಯುತ್ತಿರುವಾಗ ಇದಕ್ಕೆ ಯಾವುದೇ ಅರ್ಥವಿಲ್ಲ ಎಂದು ಹೇಳಿಕೆ

2 ಉಕ್ರೇನ್‌ಗೆ ಮಿಲಿಟರಿ ಸಾಮರ್ಥ್ಯ ಬೇಕು, ಆದ್ರೆ ಶಾಂತಿ ಒಪ್ಪಂದ ಖಾತರಿ ಪಡಿಸಲು ಬೇಡ ಎಂದು ಕೀವ್ ದ್ವಂದ್ವ ನೀತಿಯನ್ನು ಟೀಕಿಸಿದ ಪುಟಿನ್

3 ಪತ್ರದಲ್ಲಿ ಪುಟಿನ್ ಬಗ್ಗೆ ಆಕ್ಷೇಪಾರ್ಹ ಉಲ್ಲೇಖಗಳನ್ನು ಮಾಡಿದ ಝೆಲೆನ್ಸ್ಕಿಗೆ ಪುಟಿನ್ ಕೊಟ್ಟ ಖಡಕ್ ತಿರುಗೇಟು

### ಪ್ರಾಯೋಗಿಕ ರಾಜಕಾರಣದ ಹಿನೋಟ

ಪ್ರಸ್ತುತ ಉದ್ವಿಗ್ನತೆಯ ನಡುವೆಯೂ ರಷ್ಯಾ ಮತ್ತು ಪಾಶ್ಚಿಮಾತ್ಯ ದೇಶಗಳ ನಡುವಿನ ಆರ್ಥಿಕ ಸಹಕಾರವು ಹಲವಾರು ಕ್ಷೇತ್ರಗಳಲ್ಲಿ ಮುಂದುವರಿದಿದೆ ಎಂಬ ವಿರೋಧಾಭಾಸವನ್ನು ಪುಟಿನ್ ಇದೇ ವೇಳೆ ಎತ್ತಿ ತೋರಿಸಿದರು. ಅಮೆರಿಕಕ್ಕೆ ರಷ್ಯಾ ಮಾಡುತ್ತಿರುವ ಯುರೇನಿಯಂ ರಫ್ತು ಮತ್ತು ವಿವಿಧ ಇಂಧನ ಯೋಜನೆಗಳನ್ನು ಅವರು ಇದಕ್ಕೆ ಉದಾಹರಣೆಯಾಗಿ ನೀಡಿದರು.ಅಮೆರಿಕನ್ನರು ಅತ್ಯಂತ ಪ್ರಾಯೋಗಿಕ ಸ್ವಭಾವದವರು. ಅವರಿಗೆ ಎಲ್ಲಿ ಲಾಭವಿದೆಯೋ, ಅಲ್ಲಿ ಸಹಕಾರ ಮುಂದುವರಿಯುತ್ತದೆ' ಎಂದು ಪುಟಿನ್ ಲೇವಡಿ ಮಾಡಿದರು. ಅಲ್ಲದೆ, ಅಧಿಕೃತವಾಗಿ ರಷ್ಯಾದ ಯೋಜನೆಗಳಿಂದ ಹಿಂದೆ ಸರಿಯುವುದಾಗಿ ಘೋಷಿಸಿದ ಕೆಲವು ದೇಶಗಳು, ಇಂದಿಗೂ ರಷ್ಯಾದ ದೂರದ ಪೂರ್ವ ಪ್ರದೇಶಗಳಲ್ಲಿನ ಇಂಧನ ಉದ್ಯಮಗಳಲ್ಲಿ ರಹಸ್ಯವಾಗಿ ತೊಡಗಿಸಿಕೊಂಡಿವೆ ಎಂದು ಅವರು ಪ್ರತಿಪಾದಿಸಿದರು. ತಮ್ಮ ಭಾಷಣದ ಕೊನೆಯಲ್ಲಿ, ನಮಗೆ ಇದರಿಂದ ಯಾವುದೇ ದೊಡ್ಡ ಹಾನಿಯಾಗಿಲ್ಲ... ನಾವು ಎಂದಿಗೂ ಯಾರಿಂದಲೂ ನಮ್ಮನ್ನು ಪ್ರತ್ಯೇಕಿಸಿಕೊಂಡಿಲ್ಲ ಎಂದು ಹೇಳಿದ ಪುಟಿನ್, ರಷ್ಯಾ ತನ್ನ ನೆರೆಹೊರೆಯವರು, ಪಾಲುದಾರರು ಮತ್ತು ಅಂತರರಾಷ್ಟ್ರೀಯ ಸಂಸ್ಥೆಗಳೊಂದಿಗೆ ನಿಕಟವಾಗಿ ಕೆಲಸ ಮಾಡುವುದನ್ನು ಮುಂದುವರಿಸುತ್ತದೆ ಎಂದು ಸಾರಿದರು.



### ಪುಟಿನ್ ಟೀಕಾಸ್ತ್ರ

ಅಮೆರಿಕಾದ ಮಿಲಿಟರಿಯ ಮೇಲೆ ಅವಲಂಬಿತವಾಗಿರುವ ಉಕ್ರೇನ್ ಶಾಂತಿ ಒಪ್ಪಂದವನ್ನು ಖಾತರಿಪಡಿಸುವಲ್ಲಿ ಮಾತ್ರ ಪಾತ್ರವನ್ನು ವಿರೋಧಿಸುತ್ತಿರುವ ದ್ವಂದ್ವ ನಡೆಯನ್ನು ಪುಟಿನ್ ಟೀಕಿಸಿದ್ದು,, ಶಾಂತಿ ಒಪ್ಪಂದಕ್ಕೆ ವಿಶ್ವಾಸಾರ್ಹ ಖಾತರಿದಾರರು ಸ್ವಾಗತಾರ್ಹ. ಆದರೆ ಉಕ್ರೇನ್ ಈ ಪಾತ್ರದಲ್ಲಿ ಅಮೆರಿಕಾದ ಆಡಳಿತ ಮತ್ತು ವಿಶೇಷವಾಗಿ ಡೊನಾಲ್ಡ್ ಟ್ರಂಪ್‌ಗೆ ಏಕೆ ನಿರಾಕರಿಸಬೇಕು ನನಗೆ ಅದು ಅರ್ಥವಾಗುತ್ತಿಲ್ಲ. ಉಕ್ರೇನ್ ಅಮೆರಿಕಾದಿಂದ ಶಸ್ತ್ರಾಸ್ತ್ರಗಳನ್ನು ಪಡೆಯಲು ಬಯಸುತ್ತಾರೆ, ಆದರೆ ಅವರು ಅಮೆರಿಕಾ ಆಡಳಿತ ಮತ್ತು ಅಧ್ಯಕ್ಷ ಟ್ರಂಪ್ ಅವರನ್ನು ಖಾತರಿದಾರರಾಗಿ ನೋಡಲು ಬಯಸುವುದಿಲ್ಲ.

### ಪುಟಿನ್‌ಗೆ ಬಹಿರಂಗ ಪತ್ರ ಬರೆದಿದ್ದ ಝೆಲೆನ್ಸ್ಕಿ

ಇನ್ನು, ಇದಕ್ಕೂ ಮೊದಲು ಪುಟಿನ್‌ಗೆ ಬಹಿರಂಗ ಪತ್ರ ಬರೆದಿದ್ದ ಉಕ್ರೇನ್ ಅಧ್ಯಕ್ಷ ಝೆಲೆನ್ಸ್ಕಿ ಪುಟಿನ್ ಅಧಿಕಾರವಧಿಯ ಆರಂಭದಿಂದ ಹಿಡಿದು ಇಲ್ಲಿಯವರೆಗಿನ ಉಭಯದೇಶಗಳ ಸಂಬಂಧದಲ್ಲಿನ ಬದಲಾವಣೆ ಕುರಿತು ಉಲ್ಲೇಖಿಸಿದ್ದು, ಯುದ್ಧವನ್ನು ಸಂಪೂರ್ಣವಾಗಿ ಅಂತ್ಯಗೊಳಿಸಲು ನೇರಮಾತುಕತೆ ಅಗತ್ಯವಿದ್ದು, ಅದಕ್ಕೆ ದಿನವನ್ನು ನಿಗದಿ ಮಾಡಿ ಮಾತುಕತೆ ನಡೆಸೋಣ ಎಂದು ಪ್ರಸ್ತಾಪಿಸಿದ್ದರು. ಅಲ್ಲದೆ, ಇದು ಯುರೋಪ್‌ನಲ್ಲಿನ ಯುದ್ಧವಾಗಿರುವುದರಿಂದ ಶಾಂತಿ ಒಪ್ಪಂದವನ್ನು ಯುರೋಪಿಯನ್ ದೇಶಗಳು ಖಾತರಿ ಪಡಿಸುವ ಸಹಿ ಹಾಕಬೇಕು ಎಂದು ತಿಳಿಸಿದ್ದರು.

ಅಲ್ಲದೆ, ಈ ಪತ್ರದಲ್ಲಿ ಪುಟಿನ್ ಕುರಿತು ಕೆಲ ಟೀಕೆಗಳನ್ನು ಮಾಡಿದ್ದರು. ಸದ್ಯ ಇದಕ್ಕೆ ಪುಡಿನ್ ಖಾರವಾಗಿ ಪ್ರತಿಕ್ರಿಯೆ ನೀಡಿದ್ದು, ಮಾತುಕತೆಯ ಅಗತ್ಯವಿಲ್ಲ ಎಂದು ಕುಟುಕಿದ್ದಾರೆ.

### ಭಾರತದೊಂದಿಗೆ ಒಟ್ಟಾಗಿ ಕೆಲಸ ಮಾಡಲು ಸಿದ್ದ ಎಂದು ಘೋಷಣೆ

### ಭಾರತ ಪ್ರಭಾವಶಾಲಿ ದೇಶ ಪುಟೀನ್ ಭಾರತ ಪರ ಬ್ಯಾಟಿಂಗ್



### ಭಾರತ - ರಷ್ಯಾ ರಕ್ಷಣಾ ವಿಮಾನ ಪ್ರಸ್ತಾಪ

ರಷ್ಯಾದ ಅಧ್ಯಕ್ಷರು ಭಾರತದೊಂದಿಗಿನ ರಷ್ಯಾದ ರಕ್ಷಣಾ ಮತ್ತು ಮಿಲಿಟರಿ ಸಂಬಂಧಗಳ ಬಗ್ಗೆಯೂ ಮಾತನಾಡಿದರು. ಬ್ರಹ್ಮೋಸ್ ಸೂಪರ್‌ಸಾನಿಕ್ ಕ್ರೂಸ್ ಕ್ಷಿಪಣಿಗಳ ಸಹ - ಅಭಿವೃದ್ಧಿ ಮತ್ತು ಸಹ - ಉತ್ಪಾದನೆಯನ್ನು ಅವರು ಸಂವಾದದ ವೇಳೆ ಉಲ್ಲೇಖಿಸಿದರು.

ಐದನೇ ತಲೆಮಾರಿನ-57 ಫೈಟರ್ ಜೆಟ್ ತಯಾರಿಕೆಯಲ್ಲಿ ಜಂಟಿಯಾಗಿ ಕೆಲಸ ಮಾಡುವ ವಿಚಾರದ ಬಗ್ಗೆ ರಷ್ಯಾ ಭಾರತದೊಂದಿಗೆ ಪ್ರಸ್ತಾಪಿಸಿದೆ ಎಂದು ಪುಟಿನ್ ಇದೇ ವೇಳೆ ತಿಳಿಸಿದರು. ಭಾರತ ಐದನೇ ತಲೆಮಾರಿನ ಫೈಟರ್ ಜೆಟ್‌ಗಳನ್ನು ಖರೀದಿಸುವ ಪ್ರಕ್ರಿಯೆಯಲ್ಲಿದೆ. ಐದನೇ ತಲೆಮಾರಿನ ತಂತ್ರಜ್ಞಾನದಲ್ಲಿ ಭಾರತೀಯ ಸ್ನೇಹಿತರು ನಮ್ಮೊಂದಿಗೆ ಒಟ್ಟಾಗಿ ಕೆಲಸ ಮಾಡಬೇಕು ಎಂಬ ಬಗ್ಗೆ ನಾವು ಪ್ರಸ್ತಾಪಿಸಿದ್ದೇವೆ. ಯುದ್ಧ ವಿಮಾನಗಳನ್ನು ಪೂರೈಸಲು ಈ ಕ್ಷೇತ್ರದಲ್ಲಿ ಭಾರತದೊಂದಿಗೆ ಕೆಲಸ ಮಾಡಲು ನಾವು ಸಿದ್ಧರಿದ್ದೇವೆ ಎಂದು ಇದೇ ವೇಳೆ ಅವರು ಘೋಷಿಸಿದರು.ಪ್ರಮುಖ ರಕ್ಷಣಾ ವೇದಿಕೆಗಳು ಮತ್ತು ಶಸ್ತ್ರಾಸ್ತ್ರಗಳಿಗೆ ಅಗತ್ಯವಾದ ನಿರ್ಣಾಯಕ ತಂತ್ರಜ್ಞಾನಗಳನ್ನು ಭಾರತಕ್ಕೆ ಒದಗಿಸಲು ತಮ್ಮ ದೇಶ ಸಿದ್ಧವಾಗಿದೆ ಎಂದು ರಷ್ಯಾ ಅಧ್ಯಕ್ಷರು ಇದೇ ವೇಳೆ ಸ್ಪಷ್ಟಪಡಿಸಿದರು.



## ಸಚಿವ ಸ್ಥಾನಕ್ಕೆ ನೀಡಿದ್ದ ರಾಜೀನಾಮೆ ವಾಪಸ್ ಪಡೆದ ರಾಮಲಿಂಗಾರೆಡ್ಡಿ

• ಉದಯವಾಹಿನಿ,ಬೆಂಗಳೂರು

ಕಾಂಗ್ರೆಸ್ ಹೈಕಮಾಂಡ್ ಮನವೊಲಿಕೆ ಬಳಿಕ ಸಚಿವ ಸ್ಥಾನಕ್ಕೆ ನೀಡಿದ್ದ ರಾಜೀನಾಮೆಯನ್ನು ರಾಮಲಿಂಗಾರೆಡ್ಡಿ ಅವರು ವಾಪಸ್ ಪಡೆದುಕೊಂಡಿದ್ದಾರೆ. ರಾಜೀನಾಮೆ ವಾಪಸ್ ಕುರಿತು ಮಾತನಾಡಿದ ಅವರು, ನಿನ್ನೆ ಸಿಎಂ ಜೊತೆ ಎಲ್ಲಾ ಮಾತನಾಡಿದ್ದೇನೆ.

ಸದ್ಯಕ್ಕೆ ಯಾವ ಗೊಂದಲವೂ ಇಲ್ಲ ಎಂದು ತಿಳಿಸಿದರು. ನಾನಾಗಿ ಯಾವ ಖಾತೆಯನ್ನೂ ಕೇಳಿಲ್ಲ. ನೋಡೋಣ ಯಾವ ಖಾತೆ ಕೊಡ್ತಾರೆ ಅಂತ. ಮುಂದೆ ಅವಕಾಶ ಮಾಡಿಕೊಡ್ತೇವೆ ಅಂದಿದ್ದಾರೆ. ಮುಂದೆ ಏನಾಗುತ್ತೆ ನೋಡೋಣ ಎಂದು ಹೇಳಿದರು. ಖಾಸಗಿ ಹೋಟೆಲ್‌ನಲ್ಲಿ ಸಿಎಂ ಡಿ.ಕೆ.ಶಿವಕುಮಾರ್, ರಾಮಲಿಂಗಾರೆಡ್ಡಿ, ಬಿ.ಕೆ. ಹರಿಪ್ರಸಾದ್ ಜೊತೆ ರಣದೀಪ್ ಸುರ್ಜೇವಾಲ ಇಂದು ಸಭೆ ನಡೆಸಿದರು. ಬೆಂಗಳೂರು ಅಭಿವೃದ್ಧಿ ಖಾತೆ ಕೊಡಲು ಸಾಧ್ಯವಿಲ್ಲ. ಇರುವ ಖಾತೆ ಜೊತೆಗೆ ಮತ್ತೊಂದು ಖಾತೆ ನೀಡಲಾಗುವುದು ಎಂದು ರೆಡ್ಡಿಗೆ ಭರವಸೆ ನೀಡಿದರು.



ನೀವು ಸಚಿವ ಸ್ಥಾನಕ್ಕೆ ನೀಡಿದ ರಾಜೀನಾಮೆ ವಾಪಾಸ್ ಪಡೆಯಿರಿ. ಈ ವಿಚಾರ ರಾಹುಲ್ ಗಾಂಧಿ ಜೊತೆ ಚರ್ಚೆ ನಡೆಸಿ ನಿಮಗೆ ತಿಳಿಸುತ್ತೇನೆ. ಹೈಕಮಾಂಡ್ ಹೇಳುವ ಖಾತೆಯಲ್ಲಿ ನೀವು ಮುಂದುವರಿಯಬೇಕಾಗುತ್ತದೆ ಎಂದು ತಿಳಿಸಿದರು. ಸುರ್ಜೇವಾಲ ಸೂಚನೆ ಮೇರೆಗೆ ರಾಮಲಿಂಗಾರೆಡ್ಡಿ ರಾಜೀನಾಮೆ ಹಿಂಪಡೆದಿದ್ದಾರೆ.

## ಸಿಲಿಕಾನ್ ಸಿಟಿಯಲ್ಲಿ ದಿಢೀರ್ ಮಳೆರಾಯನ ಆರ್ಭಟ!: ಮಲ್ಲೇಶ್ವರಂ, ವಿಜಯನಗರದಲ್ಲಿ ಧಾರಾಕಾರ ಮಳೆ: ಜೂನ್ 11ರವರೆಗೆ ಈ ಭಾಗದಲ್ಲೂ ಭಾರಿ ಮಳೆ

• ಉದಯವಾಹಿನಿ, ಬೆಂಗಳೂರು

ರಾಜಧಾನಿ ಬೆಂಗಳೂರಿನ ಸಾರ್ವಜನಿಕರಿಗೆ ಮಳೆರಾಯ ಶನಿವಾರ ಮಧ್ಯಾಹ್ನ ಬಿಗ್ ಶಾಕ್ ನೀಡಿದ್ದಾನೆ. ನಗರದ ಕೇಂದ್ರ ಭಾಗ ಸೇರಿದಂತೆ ಪ್ರಮುಖ ಬಡಾವಣೆಗಳಲ್ಲಿ ಹಠಾತ್ ಧಾರಾಕಾರ ಮಳೆ ಸುರಿದಿದ್ದು, ವಾರಾಂತ್ಯದ ಮೂಡ್‌ನಲ್ಲಿದ್ದ ಐಟಿ ಸಿಟಿ ಜನರಿಗೆ ಬಿಗ್ ಶಾಕ್ ನೀಡಿದೆ. ಮುಂಗಾರು ಮಾರುತಗಳ ಆರ್ಭಟದ ಹಿನ್ನೆಲೆಯಲ್ಲಿ ನಗರದಲ್ಲಿ ಮಳೆಯ ತೀವ್ರತೆ ಹೆಚ್ಚಾಗಿದೆ. ನಗರದ ಹೃದಯಭಾಗವಾದ ಮೆಜೆಸ್ಟಿಕ್, ಮಲ್ಲೇಶ್ವರಂ, ರಾಜಾಜಿನಗರ, ವಿಜಯನಗರ, ವಸಂತನಗರ, ಪ್ಯಾಲೇಸ್ ಗುಟ್ಟಹಳ್ಳಿ, ಕಾಟನ್‌ಪೇಟೆ, ಕಾರ್ಪೊರೇಷನ್, ಚಿಕ್ಕಪೇಟೆ ಮತ್ತು ಗಾಂಧಿನಗರ ಸೇರಿದಂತೆ ಸುತ್ತಮುತ್ತಲಿನ ಬಹುತೇಕ ರಸ್ತೆಗಳಲ್ಲಿ ಮಳೆ ಸುರಿದಿದೆ. ದಿಢೀರ್ ಆಗಿ ಬಂದ ಮಳೆಯಿಂದಾಗಿ ರಸ್ತೆಗಳೆಲ್ಲಾ ಜಲಾವೃತಗೊಂಡಿದ್ದು, ವಾಹನ ಸಂಚಾರಕ್ಕೆ ತೀವ್ರ ಅಡಚಣೆ ಉಂಟಾಗಿದೆ.

ದಿಢೀರ್ ಆಗಿ ಮಳೆ ಸುರಿದಿದ್ದರಿಂದ ರಸ್ತೆಯಲ್ಲಿದ್ದ ದ್ವಿಚಕ್ರ ವಾಹನ ಸವಾರರು ಹಾಗೂ ಪಾದಚಾರಿಗಳು



ಆಶ್ರಯ ಪಡೆಯಲು ಜಾಗವಿಲ್ಲದೆ ತೀವ್ರ ತೊಂದರೆ ಅನುಭವಿಸಿದರು. ಮೇಲ್ಸೇತುವೆಗಳು, ನಮ್ಮ ಮೆಟ್ರೋ ನಿಲ್ದಾಣಗಳು ಮತ್ತು ಬಸ್ ತಂಗುದಾಣಗಳ ಅಡಿಯಲ್ಲಿ ಸವಾರರು ಬೈಕ್ ನಿಲ್ಲಿಸಿದ್ದರಿಂದ ನಗರದ ಪ್ರಮುಖ ರಸ್ತೆಗಳಲ್ಲಿ ಭಾರಿ ಟ್ರಾಫಿಕ್ ಜಾಮ್ ಉಂಟಾಗಿದೆ. ವ್ಯಾಪಾರ ವಹಿವಾಟಿಗೆ ಹೆಸರಾದ ಚಿಕ್ಕಪೇಟೆ, ಮೆಜೆಸ್ಟಿಕ್ ಮಾರುಕಟ್ಟೆ ಭಾಗದಲ್ಲಿ ರಸ್ತೆ ಬದಿಯ ವ್ಯಾಪಾರಿಗಳು ಮಳೆಯಿಂದ ತಮ್ಮ ಸಾಮಗ್ರಿಗಳನ್ನು ರಕ್ಷಿಸಿಕೊಳ್ಳಲು ಹರಸಾಹಸ ಪಡಬೇಕಾಯಿತು.

ಕರ್ನಾಟಕದಲ್ಲಿ ನೈಋತ್ಯ ಮುಂಗಾರು ಮಾರುತಗಳು ಮತ್ತಷ್ಟು ತೀವ್ರಗೊಂಡಿದ್ದು, ಇಡೀ ರಾಜ್ಯವನ್ನು ಆವರಿಸಿಕೊಳ್ಳುತ್ತಿವೆ. ಜೂನ್ 5 ರಂದೇ ಮುಂಗಾರು ಮಾರುತಗಳು ಕರಾವಳಿ, ಮಲೆನಾಡು ಹಾಗೂ ದಕ್ಷಿಣ ಒಳನಾಡಿನ ಹಲವು ಭಾಗಗಳಿಗೆ ಯಶಸ್ವಿಯಾಗಿ ಪ್ರವೇಶಿಸಿವೆ ಎಂದು ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರ ಮತ್ತು ಹವಾಮಾನ ಇಲಾಖೆ ಜಂಟಿ ಪ್ರಕಟಣೆಯಲ್ಲಿ ತಿಳಿಸಿವೆ.

ಮುಂದಿನ 2 ರಿಂದ 3 ದಿನಗಳಲ್ಲಿ ರಾಜ್ಯದ ಇನ್ನುಳಿದ ಭಾಗಗಳಿಗೂ ಮುಂಗಾರು ವ್ಯಾಪಿಸಲು ವಾತಾವರಣ ಪೂರಕವಾಗಿದೆ. ಹವಾಮಾನ ಇಲಾಖೆಯ ಮುನ್ಸೂಚನೆಯಂತೆ ಜೂನ್ 6 ರಿಂದ ಜೂನ್ 11 ರವರೆಗೆ ರಾಜ್ಯದ ವಿವಿಧ ವಲಯಗಳಲ್ಲಿ ಮಳೆಯ ಆರ್ಭಟ ಹೆಚ್ಚಾಗಲಿದೆ.

# ಜಿಪಂ,ತಾಪಂ ಚುನಾವಣೆ ವಿಳಂಬ ರಾಜ್ಯ ಸರ್ಕಾರ ಕ್ಷಮೆಯಾಚನೆ

• ಉದಯವಾಹಿನಿ,ಬೆಂಗಳೂರು

ಕಳೆದ ಐದು ವರ್ಷಗಳಿಂದ ನೆನೆಗುದಿಗೆ ಬಿದ್ದಿರುವ ರಾಜ್ಯದ ಜಿ.ಪಂ ಹಾಗೂ ತಾ.ಪಂಗಳ ಚುನಾವಣೆ ನಡೆಸಲು ವಿಳಂಬ ಆಗಿರುವುದಕ್ಕೆ ಹೈಕೋರ್ಟ್ ಮುಂದೆ ಕ್ಷಮೆಯಾಚಿಸಿರುವ ರಾಜ್ಯ ಸರ್ಕಾರ, ಜಿ.ಪಂ ಹಾಗೂ ತಾ.ಪಂ ಕ್ಷೇತ್ರಗಳಿಗೆ ಮೀಸಲಾತಿ ನಿಗದಿ ಪ್ರಕ್ರಿಯೆ ಪೂರ್ಣಗೊಳಿಸಲು ಮತ್ತೆ 8 ವಾರಗಳ ಕಾಲಾವಕಾಶ ಕೇಳಿದೆ. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯಿತಿ ಹಾಗೂ ತಾಲ್ಲೂಕು ಪಂಚಾಯಿತಿಗಳಿಗೆ 12 ವಾರಗಳಲ್ಲಿ ಮೀಸಲಾತಿ ಅಂತಿಮಗೊಳಿಸಲಾಗುವುದು ಎಂದು 2023ರ ಡಿಸೆಂಬರ್ 19ಕ್ಕೆ ರಾಜ್ಯ ಸರ್ಕಾರ ಹೈಕೋರ್ಟೆಗೆ ಲಿಖಿತ ಭರವಸೆ ನೀಡಿತ್ತು. ಆದರೆ, ನ್ಯಾಯಾಲಯಕ್ಕೆ ಕೊಟ್ಟ ಭರವಸೆಯಂತೆ ಸರ್ಕಾರ ನಡೆದುಕೊಂಡಿಲ್ಲ ಎಂದು ಆಕ್ಷೇಪಿಸಿ, ಸ್ವತಃ ರಾಜ್ಯ ಚುನಾವಣಾ ಆಯೋಗವು ಸರ್ಕಾರದ ವಿರುದ್ಧ 2024ರಲ್ಲಿ ಹೂಡಿರುವ ನ್ಯಾಯಾಂಗ ನಿಂದನೆ ಅರ್ಜಿಯ ವಿಚಾರಣೆ ನಡೆಸಿದ ಮುಖ್ಯ ನ್ಯಾಯಮೂರ್ತಿ ವಿಭು ಬಖ್ರು ಹಾಗೂ ನ್ಯಾಯಮೂರ್ತಿ ಎಂ.ಐ.ಅರುಣ್ ಅವರಿದ್ದ ವಿಭಾಗೀಯ ನ್ಯಾಯಪೀಠ ಈ




ಆದೇಶ ನೀಡಿದೆ. ವಿಚಾರಣೆ ವೇಳೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಕಾರ್ಯದರ್ಶಿ ಡಿ.ರಂದೀಪ್, ನ್ಯಾಯಾಲಯಕ್ಕೆ ಪ್ರಮಾಣಪತ್ರ ಸಲ್ಲಿಸಿದ್ದು, ಮೀಸಲಾತಿ ನಿಗದಿ ಪ್ರಕ್ರಿಯೆಗೆ ವಿಳಂಬವಾದ ಕಾರಣಗಳನ್ನು ವಿವರಿಸಿದ್ದಾರೆ. ಸರ್ಕಾರದಿಂದ ಉದ್ದೇಶಪೂರ್ವಕವಾಗಿ ವಿಳಂಬವಾಗಿಲ್ಲ, ನ್ಯಾಯಾಲಯದ ಆದೇಶ ಪಾಲನೆಯಲ್ಲೂ ವಿಳಂಬ ಆಗಿಲ್ಲ. ಆದರೆ, ಆಗಿರುವ ವಿಳಂಬಕ್ಕೆ ಕ್ಷಮೆಯಾಚಿಸುವುದಾಗಿ ಪ್ರಮಾಣಪತ್ರದಲ್ಲಿ ಹೇಳಿದ್ದಾರೆ.

ಕಂದಾಯ ಇಲಾಖೆಯು ವಿಜಯಪುರ ಜಿಲ್ಲೆಯ ನಾಲ್ಕು ಹಾಗೂ ಬಾಗಲಕೋಟೆ ಜಿಲ್ಲೆಯ ತಾಲ್ಲೂಕುಗಳ ಗಡಿಗಳನ್ನು ಬದಲಾಯಿಸಿ ಅಧಿಸೂಚನೆ ಹೊರಡಿಸಿತ್ತು. ಹಾಗಾಗಿ ಈ ಎರಡು ಜಿಲ್ಲೆಗಳ ತಾ.ಪಂ ಹಾಗೂ ಜಿ.ಪಂ ಕ್ಷೇತ್ರಗಳ ಗಡಿಗಳನ್ನು ಮರುನಿಗದಿಪಡಿಸಬೇಕಾಯಿತು. ವಿಜಯಪುರ ಜಿಲ್ಲೆಯ ನಾಲ್ಕು ತಾಲ್ಲೂಕುಗಳ ತಾ.ಪಂ, ಜಿ.ಪಂ ಕ್ಷೇತ್ರಗಳ ಗಡಿಗಳನ್ನು ಮರುನಿಗದಿಪಡಿಸಲಾಗಿದೆ.

ಉಳಿದಂತೆ ಬಾಗಲಕೋಟೆ ಜಿಲ್ಲೆಯ ತಾಲ್ಲೂಕುಗಳ ತಾ.ಪಂ, ಜಿ.ಪಂ ಕ್ಷೇತ್ರಗಳ ಗಡಿಗಳ ಮರುನಿಗದಿ ಹಾಗೂ ಮೀಸಲಾತಿ ನಿಗದಿಗೆ 12 ವಾರಗಳ ಕಾಲಾವಕಾಶ ಬೇಕಾಗಿದೆ.

ಇದನ್ನು ಹೊರತುಪಡಿಸಿ ಉಳಿದ ಜಿಲ್ಲೆಗಳ ತಾ.ಪಂ, ಜಿ.ಪಂ ಕ್ಷೇತ್ರ ಮರುವಿಂಗಡಣೆ ಪೂರ್ಣಗೊಂಡಿದ್ದು, ಅವುಗಳಿಗೆ ಮೀಸಲಾತಿ ನಿಗದಿಪಡಿಸಲು 8 ವಾರ ಕಾಲಾವಕಾಶ ಬೇಕು ಎಂದು ಪ್ರಮಾಣಪತ್ರದಲ್ಲಿ ವಿವರಿಸಲಾಗಿದೆ.

### ನಿಗದಿಗೆ 30 ದಿನ ಕಾಲಾವಾಕಾಶ

ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳ ಸದಸ್ಯ ಸ್ಥಾನಗಳಿಗೆ ವರ್ಗವಾರು ಮೀಸಲಾತಿ ನಿಗದಿಪಡಿಸಲು ಎಲ್ಲಾ ಜಿಲ್ಲಾಧಿಕಾರಿಗಳಿಗೆ 30 ದಿನಗಳ ಕಾಲಾವಕಾಶ ನೀಡಲಾಗಿದೆ ಎಂದು ರಾಜ್ಯ ಸರ್ಕಾರ ಹೈಕೋರ್ಟ್‌ಗೆ ತಿಳಿಸಿದೆ.ಅವಧಿ ಮುಗಿದ ರಾಜ್ಯದ 5,950 ಗ್ರಾಮ ಪಂಚಾಯಿತಿಗಳಿಗೆ ಸಕಾಲದಲ್ಲಿ ಚುನಾವಣೆ ನಡೆಸಲು ಪೂರಕವಾಗಿ ಅಂತಿಮ ಮೀಸಲಾತಿ ಅಧಿಸೂಚನೆ ಹೊರಡಿಸಲು ರಾಜ್ಯ ಸರ್ಕಾರಕ್ಕೆ ನಿರ್ದೇಶನ ನೀಡಬೇಕು ಎಂದು ಕೋರಿ ರಾಜ್ಯ ಚುನಾವಣಾ ಆಯೋಗ ಸಲ್ಲಿಸಿರುವ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ಮುಖ್ಯ ನ್ಯಾಯಮೂರ್ತಿ ವಿಭು ಬಖ್ರು ಹಾಗೂ ನ್ಯಾ.ಕೆ.ಎಸ್.ಹೇಮಲೇಖಾ ಅವರಿದ್ದ ವಿಭಾಗೀಯ ನ್ಯಾಯಪೀಠ ವಿಚಾರಣೆ ನಡೆಸಿತು. ವಿಚಾರಣೆ ವೇಳೆ ರಾಜ್ಯ ಸರ್ಕಾರದ ಪರ ಹೆಚ್ಚುವರಿ ಅಡ್ವಕೇಟ್ ಜನರಲ್ ಪ್ರತಿಮಾ ಹೊನ್ನಾಪುರ, ಗ್ರಾ.ಪಂ ಚುನಾವಣೆಗೆ ಸಂಬಂಧಿಸಿದಂತೆ ಸರ್ಕಾರದಿಂದ ಈವರೆಗೆ ಆಗಿರುವ ಪ್ರಗತಿಯ ಬಗ್ಗೆ ನ್ಯಾಯಾಲಯಕ್ಕೆ ವರದಿ ಸಲ್ಲಿಸಿ, ರಾಜ್ಯದ ಎಲ್ಲಾ ಗ್ರಾ.ಪಂ.ಗಳಿಗೆ ಸದಸ್ಯ ಸ್ಥಾನಗಳನ್ನು ನಿಗದಿಪಡಿಸಿ ಅಂತಿಮ ಅಧಿಸೂಚನೆ ಹೊರಡಿಸಲಾಗಿದೆ.

**ಈ ದಿನದ ದರ** ಪೆಟ್ರೋಲ್: 110.89 ₹/L | ಡೀಸೆಲ್ : 98.80₹/L | ಬಂಗಾರ: ₹ 15,273/Gram 24ct ₹14,000 /Gram 22ct | ಬೆಳ್ಳಿ: ₹265.00/

# ಡಿ.ಸಿ.ಎಂ ಡಾ. ಪರಮೇಶ್ವರ್ ಕೂಡಲೇ ರಾಜೀನಾಮೆಗೆ ಅನಂತರಾಯಪ್ಪ ಆಗ್ರಹ

• ಉದಯವಾಹಿನಿ, ಬೆಂಗಳೂರು

ಉಪ ಮುಖ್ಯಮಂತ್ರಿ ಸ್ಥಾನ ಒಪ್ಪಿಕೊಳ್ಳುವ ಮೂಲಕ ಎಸ್.ಸಿ. /ಎಸ್.ಟಿ ಸಮುದಾಯದ ಸ್ವಾಭಿಮಾನಕ್ಕೆ ಧಕ್ಕೆ ತಂದಿರುವ ಡಾ. ಪರಮೇಶ್ವರ್ ಕೂಡಲೇ ರಾಜೀನಾಮೆ ನೀಡಿ ಸಚಿವ ಸಂಪುಟದಿಂದ ಹೊರಬರಬೇಕೆಂದು ಹಿರಿಯ ದಲಿತ ಮುಖಂಡ, ವಕೀಲ ಅನಂತರಾಯಪ್ಪ ಆಗ್ರಹಿಸಿದರು.

ಈ ಹಿಂದೆ ಮೂರು ಸಾರಿ ಅವಕಾಶ ವಂಚಿತರಾಗಿದ್ದ ಡಾ. ಪರಮೇಶ್ವರ್‌ರವರು ಈ ಸಾರಿಯಾದರೂ ಮುಖ್ಯಮಂತ್ರಿ ಆಗುತ್ತಾರೆಂದು, ಪರಿಶಿಷ್ಟ ಸಮುದಾಯಕ್ಕೆ ಘನತೆ ಗೌರವ ತರುತ್ತಾರೆಂದು ನಿರೀಕ್ಷಿಸಲಾಗಿತ್ತು. ಅವರಿಗೆ ಈಗ ನೀಡಲಾಗಿರುವ


ಉದಯವಾಹಿನಿ ಚಿತ್ರ

ಉಪಮುಖ್ಯಮಂತ್ರಿ ಸ್ಥಾನವನ್ನು ನಿರಾಕರಿಸಿದ್ದರೆ ಸಮಾಜದ ದೃಷ್ಟಿಯಲ್ಲಿ ವಿಶೇಷವಾಗಿ ದಲಿತರ ದೃಷ್ಟಿಯಲ್ಲಿ ಹಿರೋ ಆಗುತ್ತಿದ್ದರು.

ಆದರೆ ಈ ಸ್ಥಾನವನ್ನು ಒಪ್ಪಿಕೊಂಡು ಸಚಿವ ಸಂಪುಟ ಸೇರಿರುವುದು ತೀವ್ರ ಮುಜುಗರದಿಂದ ಪರಿಶಿಷ್ಟರು ತಲೆ ತಗ್ಗಿಸುವಂತೆ ಆಗಿದೆ ಎಂದು ಅವರು ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.

**ಸಚಿವ ಸಂಪುಟದಿಂದ ಹೊರಗೆ ಬನ್ನಿ**

ಇದು ಡಾ. ಪರಮೇಶ್ವರ್ ರವರ ವೈಯಕ್ತಿಕ ವಿಚಾರವಲ್ಲ. ದಲಿತ ಸಮುದಾಯದ ಘನತೆ ಗೌರವ ಹಾಗೂ ಸ್ವಾಭಿಮಾನದ ಪ್ರಶ್ನೆ ಡಾ. ಪರಮೇಶ್ವರ್‌ರವರ ಈಗಿನ ನಡೆಯಿಂದ ದಲಿತರು ಸ್ವಾಭಿಮಾನ ಹೀನರು, ತಮ್ಮ ಅರ್ಹತೆಗೆ, ಯೋಗ್ಯತೆಗೆ ತಕ್ಕದ್ದನ್ನು ಪಡೆದುಕೊಳ್ಳುವ ಛಲ ಇಲ್ಲದವರು, ಕೊಟ್ಟದ್ದಕ್ಕೆ ಕೈ ಒಡ್ಡುವ ನಿಕೃಷ್ಟ ಜನಾಂಗ ಎಂಬ ಸದರದ ಭಾವನೆ ಸಮಾಜದಲ್ಲಿ ಮೂಡುವಂತಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

### ದಲಿತರ ಆತ್ಮಗೌರವ ಎತ್ತಿಹಿಡಿಯಲಿ

ದಲಿತ ಸಮುದಾಯ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ರವರ ವಿರುದ್ಧ ಇಲ್ಲ. ಡಿ.ಕೆ.ಶಿವಕುಮಾರ್ ರವರು ನಿರಂತರ ಪ್ರಯತ್ನ ಹಾಗೂ ಪರಿಶ್ರಮದಿಂದ ತಮ್ಮ ಗುರಿಸಾಧಿಸಿದ್ದಾರೆ. ಅವರಿಗೂ ಅವರ ಸರ್ಕಾರಕ್ಕೂ ಶುಭ ಹಾರೈಸುತ್ತೇವೆ ಎಂದು ತಿಳಿಸಿರುವ ಅನಂತರಾಯಪ್ಪ ಉಪಮುಖ್ಯಮಂತ್ರಿ ಸ್ಥಾನ ಒಪ್ಪಿಕೊಂಡಿರುವ ಡಾ. ಪರಮೇಶ್ವರ್‌ರವರು ಕೂಡಲೇ ರಾಜೀನಾಮೆ ನೀಡುವ ಮೂಲಕ ದಲಿತರ ಆತ್ಮಗೌರವ ಹಾಗೂ ಸ್ವಾಭಿಮಾನವನ್ನು ಎತಿ ಹಿಡಿಯಬೇಕೆಂದು ಒತ್ತಾಯಿಸಿದ್ದಾರೆ.

## ಕೆಂಪೇಗೌಡ ಜಯಂತಿಯಂದು ರಾಜ್ಯದಲ್ಲಿ 15 ಲಕ್ಷ ಸಸಿ ನೆಡುವ ಕಾರ್ಯಕ್ರಮ: ಡಿಕೆ ಶಿವಕುಮಾರ್


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಕೆಂಪೇಗೌಡ ಜಯಂತಿ ಅಂಗವಾಗಿ 15 ಲಕ್ಷ ಸಸಿ ನೆಡುವ ಕಾರ್ಯಕ್ರಮ ಜೂನ್ 27 ರಂದು ಕೆಂಪೇಗೌಡ ದಿನಾಚರಣೆಯನ್ನು ಬಿಡಿಎ ವತಿಯಿಂದ ಆಚರಿಸುತ್ತಿದ್ದು, 15 ಲಕ್ಷ ಸಸಿ ನೆಡಲಾಗುವುದು ಎಂದು ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಹೇಳಿದ್ದಾರೆ.

ನಗರದಲ್ಲಿ ವಿಶ್ವ ಪರಿಸರ ದಿನವನ್ನು, ಸಸಿ ನೆಡುವ ಅಭಿಯಾನ ಮತ್ತು ಪರಿಸರ ಜಾಗೃತಿ ಮತ್ತು ರಕ್ಷಣೆಗೆ ಕರೆ ನೀಡುವ ಮೂಲಕ ಆಚರಿಸಲಾಯಿತು. ವಿಧಾನಸೌಧದಲ್ಲಿರುವ ಕೆಂಗಲ್ ಹನುಮಂತಯ್ಯ ಪ್ರತಿಮೆಯ ಬಳಿ ಸಸಿ ನೆಟ್ಟ ನಂತರ ಮಾತನಾಡಿದ ಅವರು, ಎಲ್ಲರೂ ಪರಿಸರವನ್ನು ಕಾಪಾಡುವ ಮೂಲಕ ರಾಜ್ಯವನ್ನು ಹಸಿರಾಗಿಸಬೇಕು. ಪ್ರತಿ ಮನೆಯಲ್ಲಿ ಗಿಡಗಳನ್ನು ಬೆಳೆಸಬೇಕು ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಕರೆ ನೀಡಿದರು.

ವಿಶ್ವ ಪರಿಸರದ ದಿನದ ಅಂಗವಾಗಿ ಇಂದು ವಿಮಾನ ನಿಲ್ದಾಣದಲ್ಲಿ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿಯವರೊಂದಿಗೆ ಕೂಡಾ ಸಸಿ ನೆಡಲಾಗಿದೆ ಎಂದು ತಿಳಿಸಿದರು.

ಕರ್ನಾಟಕ ಹೈಕೋರ್ಟ್, ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಅರಣ್ಯ ಇಲಾಖೆ, ಪ್ರಾಣಿ ಮತ್ತು ಮೀನುಗಾರಿಕೆ ವಿಜ್ಞಾನ ವಿಶ್ವವಿದ್ಯಾಲಯ ಮತ್ತು ಕರ್ನಾಟಕ ಪಶುವೈದ್ಯಕೀಯ ಮಂಡಳಿಯು ರಾಜ್ಯಾದ್ಯಂತ ಐದು ಕೋಟಿ ಸಸಿಗಳನ್ನು ನೆಡುವ ಮತ್ತು ನೀರಿನ ಮೂಲಗಳನ್ನು ಪುನರುಜ್ಜೀವನಗೊಳಿಸುವ ಗುರಿ ಹೊಂದಿರುವ ದೊಡ್ಡ ಪ್ರಮಾಣದ ಪರಿಸರ ಯೋಜನೆ ಪ್ರಾರಂಭಿಸಿದೆ.

# ಮಂತ್ರಿಗಿರಿ ಎಂದಿಗೂ ಆಸೆ ಪಟ್ಟವನಲ್ಲ

• ಉದಯವಾಹಿನಿ, ಬೆಂಗಳೂರು

ತಮ್ಮ ರಾಜೀನಾಮೆ ಕುರಿತಂತೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಕಾಂಗ್ರೆಸ್ ಹೈಕಮಾಂಡ್ ಖಾತೆ ಹಂಚಿಕೆ ವಿಚಾರವಾಗಿ ಬಹಿರಂಗವಾಗಿಯೇ ಬಂಡಾಯವೆದ್ದಿದ್ದ ರಾಮಲಿಂಗಾ ರೆಡ್ಡಿ ತಮ್ಮ ಮಂತ್ರಿ ಸ್ಥಾನಕ್ಕೆ ರಾಜಿನಾಮೆ ನೀಡಿದ್ದರು. ಆದರೆ ಈ ರಾಜಿನಾಮೆಯನ್ನು ಸಿಎಂ ಡಿಕೆ ಶಿವಕುಮಾರ್ ಇನ್ನೂ ಅಂಗೀಕರಿಸಿಲ್ಲ. ಈ ನಡುವೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಕಾಂಗ್ರೆಸ್ ಹೈಕಮಾಂಡ್ ಕೈಗೊಳ್ಳುವ ನಿರ್ಧಾರಕ್ಕಾಗಿ ಕಾಯುತ್ತೇನೆ ಎಂದು ಅವರು ಹೇಳಿದ್ದಾರೆ.

ಬೆಂಗಳೂರಿನ ಅಭಿವೃದ್ಧಿ ಖಾತೆ ಬದಲಿಗೆ ಬೃಹತ್ ಮತ್ತು ಮಧ್ಯಮ ನೀರಾವರಿ ಖಾತೆ ನೀಡಿದ್ದನ್ನು ವಿರೋಧಿಸಿ ಶುಕ್ರವಾರ ಸಚಿವ ಸ್ಥಾನಕ್ಕೆ ರಾಜೀನಾಮೆ ಘೋಷಿಸಿದ್ದ ಹಿರಿಯ ಕಾಂಗ್ರೆಸ್ ನಾಯಕ, ಸಮಸ್ಯೆ ಬಗೆಹರಿಸಲು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲಾ ಸೇರಿದಂತೆ ಹಿರಿಯ ನಾಯಕರು ಪ್ರಯತ್ನಿಸುತ್ತಿದ್ದಾರೆ ಎಂದು ಹೇಳಿದರು.

ತಾವು ಯಾವುದೇ ನಿರ್ದಿಷ್ಟ ಖಾತೆಯನ್ನು ಕೇಳಿಕೊಂಡಿರಲಿಲ್ಲ. ಆದರೆ, ಪಕ್ಷದ ನಾಯಕತ್ವ ನೀಡಿದ್ದ ಭರವಸೆ ಈಡೇರದ ಕಾರಣ ಬೇಸರಗೊಂಡಿದ್ದೇನೆ ಎಂದು ಅವರು ಸ್ಪಷ್ಟಪಡಿಸಿದರು.


ಸುರ್ಜೇವಾಲಾ ಅವರು ನನ್ನ ರಾಜೀನಾಮೆಯನ್ನು ಹಿಂಪಡೆಯುವಂತೆ ಮನವಿ ಮಾಡಿದ್ದಾರೆ. ಪಕ್ಷದ ನಾಯಕತ್ವವೂ ನನ್ನ ರಾಜೀನಾಮೆಯನ್ನು ಅಂಗೀಕರಿಸುವುದಿಲ್ಲ ಎಂದು ತಿಳಿಸಿದೆ. ಶುಕ್ರವಾರ ಮುಖ್ಯಮಂತ್ರಿ ಶಿವಕುಮಾರ್ ಅವರೊಂದಿಗೆ ಹೋಟೆಲ್‌ನಲ್ಲಿ ಸುದೀರ್ಘವಾಗಿ ಚರ್ಚೆ ನಡೆಸಿರುವುದಾಗಿ ಅವರು ಹೇಳಿದರು.

ನೀರಾವರಿ ಖಾತೆಯ ಜೊತೆಗೆ ಹೆಚ್ಚುವರಿ ಖಾತೆ ನೀಡುವ ಸಾಧ್ಯತೆ ಇದೆ ಎಂಬ ವರದಿಗಳ ಕುರಿತು ಪ್ರತಿಕ್ರಿಯಿಸಲು ಅವರು ನಿರಾಕರಿಸಿದರು. ಆ ವಿಷಯದ ಬಗ್ಗೆ ನಾನು ಮಾತನಾಡಲು ಇಷ್ಟಪಡುವುದಿಲ್ಲ, ಎಂದು ಪುನಃ ಪುನಃ ಕೇಳಿದ ಪ್ರಶ್ನೆಗೆ ಉತ್ತರಿಸಿದರು.

ಅಂತೆಯೇ ತಮಗೆ ಯಾವುದೇ ಪರ್ಯಾಯ ಪ್ರಸ್ತಾವನೆ ನೀಡಲಾಗಿದೆಯೇ ಎಂಬ ಪ್ರಶ್ನೆಗೆ ಉತ್ತರಿಸಿದ ಅವರು, ತಮ್ಮ ಅಭಿಪ್ರಾಯವನ್ನು ಈಗಾಗಲೇ ಪಕ್ಷದ ನಾಯಕತ್ವಕ್ಕೆ ತಿಳಿಸಿರುವುದಾಗಿ ಹೇಳಿದರು. 'ನಿನ್ನೆ ನಡೆದ ಮಾತುಕತೆಯಲ್ಲಿ ನನ್ನ ಅಭಿಪ್ರಾಯವನ್ನು ಸ್ಪಷ್ಟವಾಗಿ ತಿಳಿಸಿದ್ದೇನೆ. ನಾನು ಯಾವುದೇ ಹುದ್ದೆ ಅಥವಾ ಖಾತೆಗಾಗಿ ಕೇಳಿಕೊಂಡಿಲ್ಲ. ಅವರೇ ನನಗೆ ಆಫರ್ ಮಾಡಿದ್ದರು. ನಂತರ ಅನಿವಾರ್ಯ ಕಾರಣಗಳಿಂದ ಪರಿಸ್ಥಿತಿ ಬದಲಾಯಿತು, ಎಂದು ಹೇಳಿದರು.

### ಖಾತೆಗಾಗಿ ಲಾಬಿ ನಡೆಸಿಲ್ಲ

ತಾವು ಎಂದಿಗೂ ಸಚಿವ ಸ್ಥಾನ ಅಥವಾ ನಿರ್ದಿಷ್ಟ ಖಾತೆಗಾಗಿ ಲಾಬಿ ನಡೆಸಿಲ್ಲ ಎಂದು ಪುನರುಚ್ಚರಿಸಿದ ಅವರು, ಈಗ ಮಾತ್ರವಲ್ಲ, 1993ರಲ್ಲಿ ಮೊದಲ ಬಾರಿಗೆ ಸಚಿವನಾದಾಗಲೂ ನಾನು ಯಾವುದೇ ಮುಖ್ಯಮಂತ್ರಿಯನ್ನು ಸಂಪರ್ಕಿಸಿ ಖಾತೆ ಕೇಳಿಕೊಂಡಿರಲಿಲ್ಲ, ಎಂದರು.ಮುಖ್ಯಮಂತ್ರಿ ಹಾಗೂ ಸುರ್ಜೇವಾಲಾ ನಡುವಿನ ಮಾತುಕತೆಯಿಂದ ಸಕಾರಾತ್ಮಕ ಫಲಿತಾಂಶ ನಿರೀಕ್ಷಿಸುತ್ತೀರಾ ಎಂಬ ಪ್ರಶ್ನೆಗೆ, ಗೊತ್ತಿಲ್ಲ. ನಂತರ ಕರೆ ಮಾಡಿ ವಿಚಾರಿಸುತ್ತೇನೆ, ಎಂದು ಉತ್ತರಿಸಿದರು. ತಾವು ಇನ್ನೂ ರಾಜೀನಾಮೆ ನಿರ್ಧಾರದಲ್ಲಿ ದೃಢವಾಗಿದ್ದೀರಾ ಎಂಬ ಪ್ರಶ್ನೆಗೆ ನೇರ ಉತ್ತರ ನೀಡದೆ, ಹಿರಿಯ ನಾಯಕರ ನಡುವಿನ ಚರ್ಚೆಗಳತ್ತ ಗಮನ ಸೆಳೆದರು.


ಉದಯವಾಹಿನಿ ಚಿತ್ರ

> ಇಬ್ಬರೂ ನಾಯಕರು ತಮ್ಮ ರಾಜೀನಾಮೆಯನ್ನು ಮುಂದುವರಿಸದಂತೆ ಮನವಿ ಮಾಡಿದ್ದಾರೆ. ಇಬ್ಬರೂ ನನ್ನ ರಾಜೀನಾಮೆಯನ್ನು ಅಂಗೀಕರಿಸಲು ಸಾಧ್ಯವಿಲ್ಲ ಎಂದು ಸ್ಪಷ್ಟವಾಗಿ ಹೇಳಿದ್ದಾರೆ. ನನ್ನ ಅಭಿಪ್ರಾಯವನ್ನು ಅವರಿಗೆ ತಿಳಿಸಿ ನಾನು ಹಿಂದಿರುಗಿದ್ದೇನೆ .-ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್

> ಈ ಬೆಳವಣಿಗೆಗಳಿಂದ ತಾಳ್ಮೆ ಕಳೆದುಕೊಂಡಿದ್ದೀರಾ ಎಂಬ ಪ್ರಶ್ನೆಗೆ, ಈಗಲೂ ನಾನು ತಾಳ್ಮೆ ಕಳೆದುಕೊಂಡಿಲ್ಲ. ತಾಳ್ಮೆ ಕಳೆದುಕೊಂಡಿದ್ದರೆ ನಿಮ್ಮೊಂದಿಗೆ ಇಷ್ಟು ಶಾಂತವಾಗಿ ಮಾತನಾಡುತ್ತಿದ್ದೇನಾ?. ಸಮಸ್ಯೆಯನ್ನು ಪರಿಹರಿಸುವಲ್ಲಿ ಕಾಂಗ್ರೆಸ್ ಹಿರಿಯ ನಾಯಕ ಸಿದ್ದರಾಮಯ್ಯ ಯಶಸ್ವಿಯಾಗುತ್ತಾರೆ ಎಂಬ ವಿಶ್ವಾಸವನ್ನೂ ಅವರು ವ್ಯಕ್ತಪಡಿಸಿದರು.-ರಾಮಲಿಂಗಾ ರೆಡ್ಡಿ

### ಆತಂಕ ಶುರು

ಸಚಿವ ಖಾತೆ ಹಂಚಿಕೆ ವಿಚಾರದಲ್ಲಿ ಅಸಮಾಧಾನಗೊಂಡು ಹಿರಿಯ ಕಾಂಗ್ರೆಸ್ ನಾಯಕ ಹಾಗೂ ಬಿಟಿಎಂ ಲೇಔಟ್ ಶಾಸಕ ರಾಮಲಿಂಗಾ ರೆಡ್ಡಿ ಅವರು ರಾಜೀನಾಮೆ ನೀಡಿರುವುದು ಕಾಂಗ್ರೆಸ್ ಪಕ್ಷಕ್ಕೆ ದೊಡ್ಡ ತಲೆನೋವಾಗಿ ಪರಿಣಮಿಸಿದೆ. ವಿಶೇಷವಾಗಿ ಮುಂಬರುವ ಗ್ರೇಟರ್ ಬೆಂಗಳೂರು ಪ್ರಾಧಿಕಾರ ವ್ಯಾಪ್ತಿಯ ಐದು ನಗರ ಪಾಲಿಕೆಗಳ ಚುನಾವಣೆಯ ಮೇಲೆ ಈ ಬೆಳವಣಿಗೆ ಪರಿಣಾಮ ಬೀರಬಹುದೆಂಬ ಆತಂಕ ಶುರುವಾಗಿದೆ. ಎಂಟು ಬಾರಿ ಶಾಸಕರಾಗಿ ಆಯ್ಕೆಯಾಗಿರುವ ರಾಮಲಿಂಗಾ ರೆಡ್ಡಿ, ಬೆಂಗಳೂರು ಅಭಿವೃದ್ಧಿ ಖಾತೆಯ ಮೇಲೆ ಕಣ್ಣಿಟ್ಟಿದ್ದರು. ಆದರೆ, ಆ ಖಾತೆಯನ್ನು ಕೃಷ್ಣ ಬೈರೇಗೌಡ ಅವರಿಗೆ ನೀಡಿದ ಹಿನ್ನೆಲೆಯಲ್ಲಿ ಅಸಮಾಧಾನಗೊಂಡು ಸಚಿವ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಿದ್ದಾರೆ. ರೆಡ್ಡಿಯವರ ರಾಜೀನಾಮೆ ಬೆನ್ನಲ್ಲೇ ಮತದಾರರನ್ನು ಗೆಲ್ಲುವ ಮತ್ತು ಒಲೈಸುವ ಸಾಮರ್ಥ್ಯವಿರುವ ಅನೇಕ ನಾಯಕರು ಪಕ್ಷವನ್ನು ತೊರೆಯಬಹುದಾದ್ದರಿಂದ ಸ್ಥಳೀಯ ಚುನಾವಣೆ ಮೇಲಿನ ಕಾಂಗ್ರೆಸ್‌ನ ನಿರೀಕ್ಷೆಗಳಿಗೆ ಹಾನಿ ಮಾಡುವ ಸಾಧ್ಯತೆಯಿದೆ ಎಂದು ಹೇಳಲಾಗುತ್ತಿದೆ.

## ನಾಟಕದ ಪುಸ್ತಕವನ್ನು ಪ್ರತಿಯೊಬ್ಬರುಕೊಂಡು ಓದಿ: ವನ್ಯಜೀವಿ ಸಂರಕ್ಷಕಎಂ.ಎನ್. ಸಿಂಹಾದ್ರಿ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಕೆಆರ್‌ಪುರ

ವೃಕ್ಷಗಳ ಮಹತ್ವದ ಬಗ್ಗೆ ಅರಿವು ಮೂಡಿಸುವ ವೃಕ್ಷಪುರದ ಮಂಜಣ್ಣ ನಾಟಕದ ಪುಸ್ತಕವನ್ನು ಪ್ರತಿಯೊಬ್ಬರುಕೊಂಡು ಓದುವಂತಾಗಲ್ಲಿ ಎಂದು ಹಿರಿಯ ವನ್ಯಜೀವಿ ಸಂರಕ್ಷಕರಾದ ಎಂ.ಎನ್. ಸಿಂಹಾದ್ರಿ ತಿಳಿಸಿದರು.

ಇಲ್ಲಿನ ಎನ್.ಆರ್.ಐ ಕಾಲೋನಿಯ ಅವರ ನಿವಾಸದಲ್ಲಿ ವಿಶ್ವ ಪರಿಸರ ದಿನಾಚರಣೆ ಪ್ರಯುಕ್ತ ಸಸಿ ನೆಟ್ಟು ಪರಿಸರ ಮಂಜುರವರು ರಚಿಸಿರುವ ನಾಟಕ ಕೃತಿಯ ಮುಖಪುಟ ಬಿಡುಗಡೆ ಮಾಡಿ ಮತನಾಡಿದರು.

ವೃಕ್ಷಪುರದ ಮಂಜಣ್ಣ ಎಂಬ ನಾಟಕದ ಕೃತಿಯು ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ, ನಾಟಕ ನಿರ್ದೇಶನಗಾರರಿಂದ ಅದ್ಭುತವಾದ ಸಿನಿಮಾ ಮೂಡಿಬರವಂತಾಗಲ್ಲಿ. ವೃಕ್ಷಗಳ ಉಳಿವಿನ ಬಗ್ಗೆ ಇಂದಿನ ಯುವ ಪೀಳಿಗೆಗೆ ಪರಿಸರದ ಬಗ್ಗೆ ಹೆಚ್ಚಿನ ಕಾಳಜಿ ಮೂಡಿಸವಂತೆ ಮಾಡಲಿ ಎಂದು ನುಡಿದರು. ಆನೆ ಸಂರಕ್ಷಕ ವಿನಯ್ ಮತನಾಡಿ ವೃಕ್ಷಗಳನ್ನು ರಕ್ಷಣೆ, ಮರ ಕಡಿಯುವವರ ವಿರುದ್ಧ ಹೋರಾಟದ ಕಥೆಯಾಗಿದೆ ಎಂಬ ವಿಷಯವನ್ನು ಜನಜಾಗೃತಿ ಮೂಡಿಸುವ ಉದ್ದೇಶಕ್ಕೆ ರಚಿಸಿರುವ ಪುಸ್ತಕ ಜನಮನ ಗೆಲುವಂತಾಗಲ್ಲಿ ಎಂದರು. ಬರಹಗಾರ, ವೃಕ್ಷ ಬಚಾವೋ ಆಂದೋಲನ ಸಮಿತಿಯ ಮುಖ್ಯಸ್ಥ, ಪರಿಸರ ಸಾಹಿತಿ ಪರಿಸರ ಮಂಜು, ವನ್ಯಜೀವಿ ತಜ್ಞ ಯಶಸ್ವಿ ಭಾರದ್ವಜ್ ಮತ್ತಿತರರ ಉಪಸ್ಥಿತರಿದ್ದರು.

## ಪಾರ್ಶ್ವವಾಯು ಗುಣಪಡಿಸುವ ನೆಪದಲ್ಲಿ ವಂಚನೆ: ಒಂದು ಲೋಟ ಜೀರಿಗೆ ಕಷಾಯ ಕೊಟ್ಟು 70 ಸಾವಿರ ಪೀಕಿದ್ರು!

• ಉದಯವಾಹಿನಿ, ಬೆಂಗಳೂರು

ಪಾರ್ಶ್ವವಾಯು ಕಾಯಿಲೆ ಗುಣಪಡಿಸುವುದಾಗಿ ನಂಬಿಸಿ ವ್ಯಕ್ತಿಯಿಂದ 70 ಸಾವಿರ ರೂ ಪಡೆದು ವಂಚಿಸಿದ್ದು, ಈ ಸಂಬಂಧ ಚಂದ್ರಾಲೇಔಟ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಲಕ್ಷ್ಮಣ್ ವಂಚನೆಗೊಳಗಾದವರು. ಚಂದ್ರಾಲೇಔಟ್ ಬಳಿಯ ಕಲ್ಯಾಣನಗರ ನಿವಾಸಿಯಾಗಿದ್ದು, ಹಲವು ವರ್ಷಗಳಿಂದ ಪಾರ್ಶ್ವವಾಯುಗೆ ತುತ್ತಾಗಿ ಚಿಕಿತ್ಸೆ ಪಡೆಯುತ್ತಿದ್ದರು.


ಉದಯವಾಹಿನಿ ಚಿತ್ರ

ಹಲವು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದರೂ ಏನೂ ಪ್ರಯೋಜನ ಆಗಿರಲಿಲ್ಲ. ಹೀಗಿರುವಾಗ ಅದೊಂದು ವಂಚನೆಯ ಗ್ಯಾಂಗ್ ಇವರ ಬೆನ್ನು ಬಿದ್ದಿತ್ತು. ಲಕ್ಷ್ಮಣ್ ಅವರ ಮಾಹಿತಿ ಪಡೆದು ಸಂಪರ್ಕಿಸಿದ್ದ ಆರೋಪಿಗಳು ಪಾಶ್ವವಾಯುಗೆ ಚಿಕಿತ್ಸೆ ಕೊಡ್ತೀವಿ ಎಂದು ಹೇಳಿದ್ದರು. ಇವರ ಮಾತನ್ನು ನಂಬಿದ್ದ ಲಕ್ಷ್ಮಣ್ ಅವರನ್ನು ಮನೆಗೆ ಕರೆಸಿಕೊಂಡಿದ್ದರು. ಪಾಶ್ವವಾಯುಗೆ ಗುಣಪಡಿಸುವುದಾಗಿ ಲಕ್ಷ್ಮಣ್ ಮನೆಗೆ ಬಂದಿದ್ದ ಇಬ್ಬರು ಅಪರಿಚಿತರು, ಮೊದಲಿಗೆ ಮಲ್ಲೇಶ್ವರಂನ ಸಿದ್ದಾಶ್ರಮದಿಂದ ಬಂದಿರೋದಾಗಿ ಹೇಳಿ ಚಿಕಿತ್ಸಾ ವಿಧಾನದ ಬಗ್ಗೆ ಹೇಳಿದ್ದಾರೆ. ನಂತರ ಲಕ್ಷಣ್ ಮನೆಯಲ್ಲೆ ಜೀರಿಗೆ ಕಷಾಯ ರೆಡಿ ಮಾಡಿದ್ದಾರೆ. ಇದನ್ನು ಕುಡಿಯಿರಿ ಅಂತ ಒಂದು ಗ್ಲಾಸ್‌ನಲ್ಲಿ ಕೊಟ್ಟು ಕುಡಿಸಿದ್ದಾರೆ. ಕಷಾಯ ಕುಡಿದ ನಂತರ ಇನ್ನು 20 ದಿನಗಳಲ್ಲಿ ನೀವು ಎದ್ದು ಓಡಾಡ್ತೀರಿ ಎಂದು ಕಿಡಿಗೇಡಿಗಳು ಹೇಳಿದ್ದಾರೆ.

## ಬಿಡಿಎಗೂ ರೇರಾ ಅನ್ವಯ ಆದೇಶಕ್ಕೆ ಮಧ್ಯಂತರ ತಡೆ ನೀಡಿದ ಹೈಕೋರ್ಟ್

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ಬಿಡಿಎ)ದ ವ್ಯಾಪ್ತಿಯಲ್ಲಿ 2016ಕ್ಕೂ ಮೊದಲು ರಚನೆಯಾಗಿರುವ ವಸತಿ ಬಡಾವಣೆ ಮತ್ತು ಯೋಜನೆಗಳಿಗೆ ರಿಯಲ್ ಎಸ್ಟೇಟ್ ನಿಯಂತ್ರಣ ಮತ್ತು ಅಭಿವೃದ್ಧಿ ಕಾಯಿದೆ 2016(ರೇರಾ) ಅಡಿ ಬರಲಿವೆ ಎಂದು ರೇರಾ ಮೇಲ್ಮನವಿ ಪ್ರಾಧಿಕಾರ ಹೊರಡಿಸಿದ್ದ ಆದೇಶಕ್ಕೆ ಹೈಕೋರ್ಟ್ ಮಧ್ಯಂತರ ತಡೆ ನೀಡಿದೆ. ಬಿಡಿಎ ಸಹ ರೇರಾ ಕಾಯಿದೆಯಡಿ ಬರಲಿದೆ ಎಂಬುದಾಗಿ ರೇರಾ ಮೇಲ್ಮನವಿ ಪ್ರಾಧಿಕಾರ ಹೊರಡಿಸಿದ್ದ ಆದೇಶವನ್ನು ಪ್ರಶ್ನಿಸಿ ಬಿಡಿಎ ವಕೀಲರಾದ ಬಿ.ವಚನ್ ಎಂಬವರು ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಸೂರಜ್ ಗೋವಿಂದರಾಜ್ ಅವರಿದ್ದ ಏಕಸದಸ್ಯ ಪೀಠ ಈ ಆದೇಶ ನೀಡಿದೆ.

ರೇರಾ ಕಾಯಿದೆಯು ಬಿಡಿಎದ ಯಾವ ರೀತಿಯ ಹಂಚಿಕೆಗಳಿಗೆ ಅನ್ವಯಿಸುತ್ತದೆ ಮತ್ತು ಯಾವ ರೀತಿಯ ಹಂಚಿಕೆಗಳಿಗೆ ಅನ್ವಯಿಸುವುದಿಲ್ಲ ಎಂಬುದನ್ನು ನಿರ್ಧರಿಸುವ ಅವಶ್ಯಕತೆ ಇದೆ. ಬಿಡಿಎ ರೇರಾ ಕಾಯಿದೆಯನ್ನು ಅನ್ವಯಿಸುವ ಕ್ರಮದ ಬಗ್ಗೆ ಸಮಗ್ರ ಪರಿಶೀಲನೆ ನಡೆಸಬೇಕಿದೆ.

ಆದ್ದರಿಂದ ರೇರಾ ಕಾಯಿದೆಯ ಕಾರ್ಯಾಚರಣೆ ಮತ್ತು ಅನ್ವಯವನ್ನು ಬಿಡಿಎಗೆ ಮುಂದುವರೆಸಬಾರದು ಎಂದು ನ್ಯಾಯಾಲಯ ಆದೇಶಿಸಿದೆ. ಅಂತೆಯೇ, ರೇರಾ ಕಾರ್ಯದರ್ಶಿಗೆ ನೋಟಿಸ್ ಜಾರಿ ಮಾಡಿ ವಿಚಾರಣೆಯನ್ನು ಜುಲೈ 6ಕ್ಕೆ ಮುಂದೂಡಿದೆ. ವಿಚಾರಣೆ ವೇಳೆ ಬಿಡಿಎ ಪರ ವಕೀಲರು, ಬಿಡಿಎ ಎಂಬುದು ಒಂದು ಸ್ವತಂತ್ರ ಮತ್ತು ಶಾಸನಬದ್ಧ ಸಂಸ್ಥೆಯಾಗಿದ್ದು, ಬಿಡಿಎ-1976ರ ಕಾಯಿದೆ ಅಡಿ ಕಾರ್ಯನಿರ್ವಹಿಸುತ್ತಿದೆ. ಇದು ಬೆಂಗಳೂರು ನಗರದ ಅಭಿವೃದ್ಧಿಗೆ ಯೋಜನೆ ರೂಪಿಸುವ ಜವಾಬ್ದಾರಿಗಳನ್ನು ಕಾಲಕಾಲಕ್ಕೆ ನಿಭಾಯಿಸುತ್ತದೆ. ಅಲ್ಲದೇ, ಬಿಡಿಎ ಜನರ ಸೇವೆಗಾಗಿ ಇರುವ ಸಂಸ್ಥೆಯಾಗಿದ್ದು, ಲಾಭರಹಿತವಾಗಿದೆ. ಆದರೆ, ನಿವಾಸಿಗಳ ಲೇಔಟ್ ಅಥವಾ ಯೋಜನೆಗಳಿಗೆ ಅನ್ವಯವಾಗುವಂತೆ ರೂಪಿಸಲಾಗಿರುವ ರಿಯಲ್ ಎಸ್ಟೇಟ್ ನಿಯಂತ್ರಣ ಮತ್ತು ಅಭಿವೃದ್ಧಿ (ರೇರಾ) ಕಾಯಿದೆ-2016 ಬಿಡಿಎಗೂ ಅನ್ವಯಿಸಲು ಅವಕಾಶ ನೀಡುವುದು ತರವಲ್ಲ.

ಈ ಮೂಲಕ ಬಿಡಿಎ ಕಾರ್ಯನಿರ್ವಹಣೆಯ ಮೇಲೆ ನಿಯಂತ್ರಣ ಹೊಂದುವ ಅಥವಾ ಮೇಲ್ವಿಚಾರಣೆ ನಡೆಸುವ ಪ್ರಯತ್ನ ಬಿಡಿಎಗೆ ಅನಪೇಕ್ಷಿತ ಹಾನಿ ಉಂಟು ಮಾಡುತ್ತದೆ ಎಂದು ಪೀಠಕ್ಕೆ ವಿವರಿಸಿದರು. ಸರ್ಕಾರ ರೈತರಿಂದ ಭೂಸ್ವಾಧೀನಕ್ಕೆ ಪಡೆದು ನಂತರ ಅದನ್ನು ಬಿಡಿಎಗೆ ನೀಡುತ್ತದೆ.

ಬಹಳಷ್ಟು ಸಂದರ್ಭಗಳಲ್ಲಿ ಸರ್ಕಾರ ರೈತರಿಂದ ಜಮೀನನ್ನು ಸ್ವಾಧೀನಕ್ಕೆ ಪಡೆಯುವಾಗ ರೈತರು ತಮ್ಮ ಹಕ್ಕುಗಳನ್ನು ಪ್ರಶ್ನಿಸಿ ಕೋರ್ಟ್‌ಗೆ ಹೋಗುತ್ತಾರೆ ಅಥವಾ ಪರಿಹಾರ ಸಾಲದು ಎಂಬ ಆಕ್ಷೇಪ ಎತ್ತುತ್ತಾರೆ.

## ವೋಲ್ಟೇಜ್ ಟ್ರಾನ್ಸ್‌ಫಾರ್ಮರ್‌ಗಳಿಗೆ ಮಿನರಲ್ ಆಯಿಲ್ ಬದಲಿಗೆ ನ್ಯಾಚುರಲ್ ಎಸ್ಟರ್ ಆಯಿಲ್ ಬಳಸಲು ತೀರ್ಮಾನ

• ಉದಯವಾಹಿನಿ, ಬೆಂಗಳೂರು

ಪರಿಸರ ಸಂರಕ್ಷಣೆ ಮತ್ತು ವಿದ್ಯುತ್ ಜಾಲದ ಆಧುನೀಕರಣದತ್ತ ಮಹತ್ವದ ಹೆಜ್ಜೆಯನ್ನಿಟ್ಟಿರುವ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ(ಕೆಪಿಟಿಸಿಎಲ್), ತನ್ನ ಹೈವೋಲ್ಟೇಜ್ ಟ್ರಾನ್ಸ್‌ಫಾರ್ಮರ್‌ಗಳ ಜಾಲದಲ್ಲಿ ಬಳಕೆಯಲ್ಲಿದ್ದ ಸಾಂಪ್ರದಾಯಿಕ ಮತ್ತು ಹಾನಿಕಾರಕ ಮಿನರಲ್ ಆಯಿಲ್ (ಖನಿಜ ತೈಲ)ಗೆ ಪರ್ಯಾಯವಾಗಿ ಪರಿಸರ ಸ್ನೇಹಿ ಹಾಗೂ ಬಯೋಡಿಗ್ರೇಡಬಲ್ ನ್ಯಾಚುರಲ್ ಎಸ್ಟರ್ ಆಯಿಲ್‌ಗೆ ಬದಲಾಯಿಸುವ ಕಾರ್ಯಕ್ಕೆ ಮುಂದಾಗಿದೆ.

ರಾಜ್ಯದಾದ್ಯಂತ ಲಕ್ಷಾಂತರ ಗ್ರಾಹಕರಿಗೆ ಸುರಕ್ಷಿತ ಮತ್ತು ಪರಿಸರ ಸ್ನೇಹಿ ವಿದ್ಯುತ್ ಪೂರೈಕೆಯನ್ನು ಖಚಿತಪಡಿಸಿಕೊಳ್ಳುವ ನಿಟ್ಟಿನಲ್ಲಿ, ಕೆಪಿಟಿಸಿಎಲ್ ಕೈಗೊಂಡಿರುವ ಈ ಪರಿಸರ ಸ್ನೇಹಿ ಉಪಕ್ರಮವು, ಮೂಲಸೌಕರ್ಯ ನಿರ್ವಹಣೆಯಲ್ಲಿ ಒಂದು ನಿರ್ಣಾಯಕ ಮೈಲಿಗಲ್ಲಾಗಿದೆ. ರಾಜ್ಯದಾದ್ಯಂತ ವಿದ್ಯುತ್ ಜಾಲದಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ 3,754 ಟ್ರಾನ್ಸ್‌ಫಾರ್ಮರ್‌ಗಳ ಪೈಕಿ, ಕೆಪಿಟಿಸಿಎಲ್ ಕಾರ್ಯತಂತ್ರದ ಭಾಗವಾಗಿ 45 ಹೈಕೆಪಾಸಿಟಿ ಟ್ರಾನ್ಸ್‌ಫಾರ್ಮರ್‌ಗಳನ್ನು ಸಸ್ಯ ಆಧಾರಿತ ನ್ಯಾಚುರಲ್ ಎಸ್ಟರ್ ಆಯಿಲ್‌ನೊಂದಿಗೆ ಬದಲಾಯಿಸಲಾಗಿದೆ.

ಹೊಸ ಟ್ರಾನ್ಸ್‌ಫಾರ್ಮರ್‌ಗಳನ್ನು ಅಳವಡಿಸುವ ಆರ್ಥಿಕ ಹೊರೆಯ ಬದಲಿಗೆ, 15 ವರ್ಷಗಳಿಗಿಂತಲೂ ಹಳೆಯ ಟ್ರಾನ್ಸ್‌ಫಾರ್ಮರ್‌ಗಳನ್ನು ಗುರುತಿಸಿ, ಅವುಗಳ ಜೀವಿತಾವಧಿ ಮತ್ತು ಕಾರ್ಯಕ್ಷಮತೆಯನ್ನು ಹೆಚ್ಚಿಸುವ ಉದ್ದೇಶದಿಂದ ಈ ಯೋಜನೆ ಜಾರಿಗೊಳಿಸಲಾಗುತ್ತಿದೆ. ಸಾಂಪ್ರದಾಯಿಕ ಪೆಟ್ರೋಲಿಯಂ ಆಧಾರಿತ ತೈಲಗಳ ಬಳಕೆಯಿಂದ ಉಂಟಾಗುವ ಪರಿಸರ ಮಾಲಿನ್ಯದ ಅಪಾಯಗಳನ್ನು ತಡೆಯುತ್ತದೆ. ಸಾಮಾನ್ಯ ಮಿನರಲ್ ಆಯಿಲ್‌ಗಳಿಗೆ ಹೋಲಿಸಿದರೆ, ಸಸ್ಯ ಆಧಾರಿತ ಎಸ್ಟರ್ ತೈಲಗಳು ಬಯೋಡಿಗ್ರೇಡಬಲ್ ಆಗಿದ್ದು, ಹೆಚ್ಚಿನ ಉಷ್ಣ ಸಹಿಷ್ಣುತೆ ಯನ್ನು ಹೊಂದಿವೆ. ಇದರಿಂದಾಗಿ ಹೆಚ್ಚು ಜನನಿಬಿಡ ನಗರ ಪ್ರದೇಶಗಳು ಹಾಗೂ ದೂರದ ಉಪಕೇಂದ್ರಗಳಲ್ಲಿ ಕಾರ್ಯಾಚರಣೆಯ ಸುರಕ್ಷತೆ ಹೆಚ್ಚಾಗಲಿದೆ. ಈಗಾಗಲೇ ಕೆಪಿಟಿಸಿಎಲ್ ವತಿಯಿಂದ ಪ್ರಾಯೋಗಿಕವಾಗಿ 45 ಟ್ರಾನ್ಸ್‌ಫಾರ್ಮರ್‌ಗಳಲ್ಲಿ ನ್ಯಾಚುರಲ್ ಎಸ್ಟರ್ ಆಯಿಲ್ ಅಳವಡಿಸಲಾಗಿದ್ದು, ಸುಮಾರು 1500 ಲೀಟರ್‌ಗಳಷ್ಟು ಮಿನರಲ್ ಆಯಿಲ್ ಬಳಕೆಯನ್ನು ತಪ್ಪಿಸಲಾಗಿದೆ.

## ಪ್ರಿಯಕರನೊಂದಿಗೆ ಸೇರಿ ಗಂಡನ ಕೊಲೆಗೈದ ಹೆಂಡತಿ; ಪತ್ನಿ ಸೇರಿ ಇಬ್ಬರ ಬಂಧನ

• ಉದಯವಾಹಿನಿ, ಬೆಂಗಳೂರು

ರಾಜಾನುಕುಂಟೆ ಪೊಲೀಸ್ ವ್ಯಾಪ್ತಿಯಲ್ಲಿ ಕಾಣೆಯಾದ 25 ವರ್ಷದ ಭದ್ರತಾ ಸಿಬ್ಬಂದಿ ಪ್ರಕರಣದ ತನಿಖೆಯಲ್ಲಿ ಪತ್ನಿಯೇ ಆರೋಪಿಯಾಗಿದ್ದಾಳೆ. ಕೊಲೆಯಾದ ದುರ್ದೈವಿಯನ್ನು ಪಶ್ಚಿಮ ಬಂಗಾಳ ಮೂಲದ ಅಭಿಜಿತ್ ಪಂಡಿತ್ (25) ಎಂದು ಗುರುತಿಸಲಾಗಿದೆ. ಈತ ಬೆಂಗಳೂರಿನ ಹೆಸರಘಟ್ಟ ಬಳಿಯ ಲಿಂಗನಹಳ್ಳಿಯಲ್ಲಿ ವಾಸವಾಗಿದ್ದ. ಕಳೆದ ಮೂರು ವರ್ಷಗಳ ಹಿಂದೆ ಅಭಿಜಿತ್ ಹಾಗೂ ಅರ್ಚನಾ ಚೌಹಾನ್ (21) ಪ್ರೀತಿಸಿ ಮದುವೆಯಾಗಿದ್ದರು.

ಮೂವರೂ ಒಂದೇ ಪ್ರದೇಶದಲ್ಲಿ ಕೆಲಸ ಮಾಡುತ್ತಿದ್ದರು ಮತ್ತು ರಾಜಾನುಕುಂಟೆಯ ಇಟ್ಟಗಲ್ಲಪುರದಲ್ಲಿ ವಾಸಿಸುತ್ತಿದ್ದರು ಮದುವೆಯಾದ ಕೆಲವೇ ದಿನಗಳಲ್ಲಿ ಅರ್ಚನಾಳಿಗೆ ಪಾರುಲ್ ಪಾಲ್ (26) ಎಂಬಾತನೊಂದಿಗೆ ಅನೈತಿಕ ಸಂಬಂಧ ಬೆಳೆದಿತ್ತು. ಪತ್ನಿಯ ಈ ಅಕ್ರಮ ಸಂಬಂಧದ ವಿಷಯ ತಿಳಿದ ಅಭಿಜಿತ್ ತೀವ್ರ ಆಕ್ಷೇಪ ವ್ಯಕ್ತಪಡಿಸಿದ್ದು, ದಂಪತಿಗಳ ನಡುವೆ ಪ್ರತಿದಿನ ಗಲಾಟೆ ನಡೆಯುತ್ತಿತ್ತು. ಪ್ರಕರಣ ದಾಖಲಿಸಿಕೊಂಡು ತನಿಖೆ ಆರಂಭಿಸಿದ ಪೊಲೀಸರು, ಅಭಿಜಿತ್ ಮೊಬೈಲ್ ಕರೆಗಳ ವಿವರ ಹಾಗೂ ಅರ್ಚನಾಳ ವರ್ತನೆಯನ್ನು ಗಮನಿಸಿದಾಗ ಸಂಶಯ ಮೂಡಿದೆ.

## ತಾಲ್ಲೂಕಿಗೊಂದು ರೌಡಿಪಡೆ ಸಂಬಂಧ ಈಗಾಗಲೇ ಬ್ಲೂ ಪ್ರಿಂಟ್ ರೆಡಿ

• ಉದಯವಾಹಿನಿ, ಬೆಂಗಳೂರು

ಗೃಹ ಸಚಿವರಾದ ಬಳಿಕ ಮೊದಲ ಬಾರಿಗೆ ಹಿರಿಯ ಪೊಲೀಸ್ ಅಧಿಕಾರಿಗಳೊಂದಿಗೆ ಪ್ರಿಯಾಂಕ್ ಖರ್ಗೆ ಶುಕ್ರವಾರ ಸಭೆ ನಡೆಸಿದರು. ಹಾಲಿ ರಾಜ್ಯದ ಅಪರಾಧ ಪ್ರಮಾಣ, ಸೈಬರ್ ಕ್ರೈಂ, ಸಂಚಾರ ನಿಯಂತ್ರಣಕ್ಕೆ ಕೈಗೊಳ್ಳಲಾಗಿರುವ ಕ್ರಮಗಳ ಬಗ್ಗೆ ಅಧಿಕಾರಿಗಳಿಂದ ಸಚಿವರು ಮಾಹಿತಿ ಪಡೆದುಕೊಂಡರು. ಸಭೆ ಬಳಿಕ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಪ್ರಿಯಾಂಕ್ ಖರ್ಗೆ, ನನಗೆ ಗೃಹ ಇಲಾಖೆಯಂತಹ ದೊಡ್ಡ ಜವಾಬ್ದಾರಿ ವಹಿಸಲಾಗಿದೆ. ಪೊಲೀಸ್ ಇಲಾಖೆ ಬಗ್ಗೆ ಸಂಪೂರ್ಣ ಮಾಹಿತಿ ಪಡೆಯುತ್ತಿದ್ದೇನೆ. ಹಿಂದಿನ ಸಚಿವರಾಗಿದ್ದ ಜಿ.ಪರಮೇಶ್ವರ್ ಕೈಗೊಂಡ ಕಾರ್ಯಕ್ರಮಗಳು ಯಾವುವು? ಹೇಗೆ ಮುಂದುವರೆಸಬೇಕು ಎಂಬುದರ ಬಗ್ಗೆ ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡಿದ್ದೇನೆ ಎಂದರು. ಬೆಂಗಳೂರು ಸಿಟಿ, ಡ್ರಗ್ ಮಾಫಿಯಾ, ಮಹಿಳೆಯರ ಸುರಕ್ಷತೆ, ಟ್ರಾಫಿಕ್ ನಿಯಂತ್ರಣಕ್ಕೆ ಕೈಗೊಂಡ ಕ್ರಮಗಳ ಬಗ್ಗೆ ಹಾಗೂ ಕೆಲ ಸಲಹೆ, ಸೂಚನೆ ನೀಡಿದ್ದೇನೆ. ಕಾನೂನು ಎಲ್ಲರಿಗೂ ಒಂದೇ.

## ಪೋಕರ್ ವೆಬ್‌ಸೈಟ್ ಹ್ಯಾಕ್ ಮಾಡಿ ಕೋಟಿ ಕೋಟಿ ಸುಲಿಗೆ, ಸುನೀಶ್ ಹೆಗ್ಡೆ ವಿರುದ್ಧ ಗಂಭೀರ ಆರೋಪ

• ಉದಯವಾಹಿನಿ, ಬೆಂಗಳೂರು

ಕುಖ್ಯಾತ ಹ್ಯಾಕರ್ ಶ್ರೀಕೃಷ್ಣ ಅಲಿಯಾಸ್ ಶ್ರೀಕಿ ಪ್ರಕರಣದ ತನಿಖೆಯಲ್ಲಿ ಮತ್ತಷ್ಟು ಸ್ಫೋಟಕ ಮಾಹಿತಿಗಳು ಬಹಿರಂಗಗೊಂಡಿದೆ.

ನಗರದ ಉದ್ಯಮಿ ಸುನೀಶ್ ಹೆಗ್ಡೆ ಅವರು ಹ್ಯಾಕ್ ಮಾಡಲಾದ ಆನ್‌ಲೈನ್ ಪೋಕರ್ ವೆಬ್‌ಸೈಟ್‌ಗಳ ಮಾಹಿತಿಯನ್ನು ಬಳಸಿಕೊಂಡು ಕೋಟ್ಯಂತರ ರೂಪಾಯಿ ವಸೂಲಿ ನಡೆಸಿದ್ದರು ಎಂದು ಜಾರಿ ನಿರ್ದೇಶನಾಲಯ ಆರೋಪಿಸಿದೆ. 2017ರಿಂದಲೇ ಸುನೀಶ್ ಹೆಗ್ಡೆ ನಗದು, ಬ್ಯಾಂಕ್ ವರ್ಗಾವಣೆ ಮತ್ತು ಕ್ಯಾಸಿನೊ ಚಿಪ್‌ಗಳ ರೂಪದಲ್ಲಿ ಅಕ್ರಮ ಹಣ ಪಡೆದಿದ್ದಾರೆ.

ವಿಚಾರಣೆ ವೇಳೆ ಶ್ರೀಕಿ, ಪೋಕರ್‌ಸ್ಟೇಂಟ್ ಸೇರಿದಂತೆ ಹಲವು ಆನ್ ಲೈನ್ ಪೋಕರ್ ವೆಬ್‌ಸೈಟ್‌ಗಳನ್ನು ಹ್ಯಾಕ್ ಮಾಡಿದ್ದಾಗಿ ಹೇಳಿದ್ದಾನೆ. ಹ್ಯಾಕ್ ಮಾಡಿದ ಡೇಟಾಬೇಸ್‌ಗಳನ್ನು ಸುನೀಶ್ ಹೆಗ್ಡೆ ತನ್ನ ಪೋಕರ್ ವ್ಯವಹಾರಕ್ಕೆ ಬಳಸಿಕೊಂಡು ಸುಮಾರು 6 ಕೋಟಿ ರೂಪಾಯಿಗಳಿಕೆ ಮಾಡಿದ್ದಾನೆ ಎಂದು ನೀಡಿದ್ದಾನೆಂದು ಇಡಿ ತಿಳಿಸಿದೆ.

# ಆರು ವರ್ಷಗಳಲ್ಲಿ ದುಪ್ಪಟ್ಟಾಯ್ತು ಮಲ್ಲಿಕಾರ್ಜುನ ಖರ್ಗೆ ಆಸ್ತಿ

• ಉದಯವಾಹಿನಿ, ಬೆಂಗಳೂರು


ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಕರ್ನಾಟಕದಿಂದ ರಾಜ್ಯಸಭಾ ಚುನಾವಣೆಗಾಗಿ ನಾಮಪತ್ರ ಸಲ್ಲಿಕೆ ಮಾಡಿದ್ದಾರೆ. ಕರ್ನಾಟಕದಿಂದ ಮಲ್ಲಿಕಾರ್ಜುನ ಖರ್ಗೆ ಜೊತೆಗೆ ಪವನ್ ಖೇರಾ ಮತ್ತು ಮನ್ಸೂರ್ ಅಲಿ ಖಾನ್ ಸೇರಿದಂತೆ ಮೂವರು ಅಭ್ಯರ್ಥಿಗಳನ್ನು ಕಾಂಗ್ರೆಸ್ ಘೋಷಿಸಿದೆ.

ಜೂನ್ 18 ರಂದು ನಡೆಯಲಿರುವ ರಾಜ್ಯಸಭಾ ಚುನಾವಣೆಗೆ ಖರ್ಗೆ ಅವರು ನಾಮಪತ್ರ ಸಲ್ಲಿಕೆ ಮಾಡಿದ್ದು, ಈ ವೇಳೆ ಅವರು ಚುನಾವಣಾ ಅಧಿಕಾರಿಗೆ ತಮ್ಮ ಒಟ್ಟು ಆಸ್ತಿಯ ವಿವರವನ್ನು ನೀಡಿದ್ದಾರೆ. ಹಾಗಿದ್ರೆ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಒಟ್ಟು ಆಸ್ತಿ ಎಷ್ಟಿದೆ ಸಾಲ ಎಷ್ಟಿದೆ ಎಂಬ ವಿವರ ಇಲ್ಲಿದೆ.

ರಾಜ್ಯಸಭಾ ಚುನಾವಣೆ ಹಿನ್ನಲೆ ನಾಮಪತ್ರ ಸಲ್ಲಿಕೆ ಮಾಡಿರುವ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ್ ಖರ್ಗೆ ನಾಮಪತ್ರದ ಜತೆ ಆಸ್ತಿ ವಿವರ ಸಲ್ಲಿಕೆ ಮಾಡಿದ್ದಾರೆ. ಅಫಿಡೆವಿಟ್ ಮೂಲಕ ಖರ್ಗೆ ನಾಮಪತ್ರ ಸಲ್ಲಿಕೆ ವೇಳೆ ಚುನಾವಣಾ ಆಯೋಗಕ್ಕೆ ಆಸ್ತಿ ಮೌಲ್ಯದ ವಿವರ ಸಲ್ಲಿಸಿದ್ದಾರೆ. ಆ ಅಫಿಡವಿಟ್ ಪ್ರಕಾರ ಚರ ಮತ್ತು ಸ್ಥಿರ ಆಸ್ತಿ ಸೇರಿದಂತೆ ಅವರ ಒಟ್ಟು ಆಸ್ತಿ ಸುಮಾರು 38.80 ಕೋಟಿ ರೂಪಾಯಿ ಆಗಿದೆ.

ಮಲ್ಲಿಕಾರ್ಜುನ ಖರ್ಗೆ ಒಟ್ಟು ಸ್ಥಿರಾಸ್ತಿ 8.30 ಕೋಟಿ ರೂ. ಹೊಂದಿದ್ದಾರೆ. ಪತ್ನಿ ಹೆಸರಲ್ಲಿ ಒಟ್ಟು 9.85 ಕೋಟಿ ರೂ. ಸ್ಥಿರಾಸ್ತಿ ಇದೆ. ಮಲ್ಲಿಕಾರ್ಜುನ ಖರ್ಗೆ ಕುಟುಂಬದ ಹೆಸರಲ್ಲಿ ಸುಮಾರು 9.22 ಕೋಟಿ ರೂ. ಸ್ಥಿರಾಸ್ತಿ ಇದೆ. ಈ ಪೈಕಿ ಖರ್ಗೆ ಪತ್ನಿ ಹೆಸರಲ್ಲಿ 4 ಕೋಟಿ ರೂ.ಮೌಲ್ಯದ ವಾಣಿಜ್ಯ ಕಟ್ಟಡಗಳು ಇವೆ. ಮಲ್ಲಿಕಾರ್ಜುನ ಖರ್ಗೆ ಬೆಂಗಳೂರಿನ ಸದಾಶಿವನಗರ, ಕಲಬುರ್ಗಿಯಲ್ಲಿರುವ ಒಟ್ಟು ಮೂರು ಮನೆಗಳ ಆಸ್ತಿ ಮೌಲ್ಯ ಸುಮಾರು 7.82 ಕೋಟಿ ರೂ. ಇದೆ. ಅದೇ ರೀತಿ ಪತ್ನಿ ಹೆಸರಲ್ಲಿ ಸದಾಶಿವನಗ,

### ಅಧ್ಯಕ್ಷ ಎಷ್ಟು ಕೋಟಿಯ ಒಡೆಯ


ಉದಯವಾಹಿನಿ ಚಿತ್ರ

ಕಲಬುರ್ಗಿಯಲ್ಲಿರುವ ಒಟ್ಟು ಮನೆಗಳ ಮೌಲ್ಯ ಸುಮಾರು 3.32 ಕೋಟಿ ರೂ. ಆಗಿದೆ. 2020ರ ಜೂನ್‌ನಲ್ಲಿ ರಾಜ್ಯಸಭೆ ಚುನಾವಣೆಗೆ ನಾಮಪತ್ರ ಸಲ್ಲಿಸುವಾಗ ಮಲ್ಲಿಕಾರ್ಜುನ ಖರ್ಗೆ ಅವರು ಸಲ್ಲಿಸಿದ್ದ ಅಫಿಡವಿಟ್ ಪ್ರಕಾರ, ಅವರ ಒಟ್ಟು ಆಸ್ತಿಯ ಮೌಲ್ಯ 20.12 ಕೋಟಿಗಳಷ್ಟಿತ್ತು.

### 38.80 ಕೋಟಿ ಮೌಲ್ಯದ ಆಸ್ತಿ

ಮಲ್ಲಿಕಾರ್ಜುನ ಖರ್ಗೆ ಸುಮಾರು 10 ಲಕ್ಷ ಸಾಲ ಹೊಂದಿದ್ದಾರೆ. ಅವರ ಪತ್ನಿ ಹೆಸರಲ್ಲಿ 17.50 ಲಕ್ಷ ಸಾಲಗಳಿವೆ. ಮಲ್ಲಿಕಾರ್ಜುನ ಖರ್ಗೆ ಪತ್ನಿ, ಅವರ ಕುಟುಂಬದ್ದು ಸೇರಿ ಒಟ್ಟು ಚರಾಸ್ಥಿ ಹಾಗೂ ಸ್ಥಿರಾಸ್ತಿ ಮೌಲ್ಯ ಸುಮಾರು 38.80 ಕೋಟಿ ಮೌಲ್ಯದ ಆಸ್ತಿ ಹೊಂದಿದ್ದಾರೆ.

**ರಾಜ್ಯಸಭಾ ಚುನಾವಣೆ ಹಿನ್ನಲೆ ನಾಮಪತ್ರ ಸಲ್ಲಿಕೆ**

### 1.50 ಕೋಟಿ ಚಿನ್ನಾಭರಣ

ಮಲ್ಲಿಕಾರ್ಜುನ ಖರ್ಗೆ ಒಟ್ಟು ಚರಾಸ್ತಿ 6.59 ಕೋಟಿ ರೂ. ಹೊಂದಿದ್ದಾರೆ. ಪತ್ನಿ ಹೆಸರಲ್ಲಿ ಒಟ್ಟು 4.41 ಕೋಟಿ ರೂ. ಆಸ್ತಿ ಇದೆ. ಈ ಪೈಕಿ ಖರ್ಗೆ ಹೆಸರಲ್ಲಿ ವಿವಿಧ ಬ್ಯಾಂಕ್‌ಗಳಲ್ಲಿ ಒಟ್ಟು 5.25 ಕೋಟಿ ರೂ. ಠೇವಣಿಗಳನ್ನು ಹೊಂದಿದ್ದಾರೆ. ಪತ್ನಿ ಹೆಸರಲ್ಲಿ ಒಟ್ಟು 2.84 ಕೋಟಿ ರೂ. ಠೇವಣಿಗಳನ್ನು ಹೊಂದಿದ್ದಾರೆ. ಖರ್ಗೆ ಒಟ್ಟು 54.15 ಲಕ್ಷ ರೂ. ಮೊತ್ತದ ಚಿನ್ನಾಭರಣ ಹೊಂದಿದ್ದಾರೆ. ಇನ್ನು ಅವರ ಪತ್ನಿ ರಾಧಾ ಬಾಯ್ ಖರ್ಗೆ ಒಟ್ಟು 1.50 ಕೋಟಿ ಚಿನ್ನಾಭರಣ ಹೊಂದಿದ್ದಾರೆ.

**ಚುನಾವಣಾ ಆಯೋಗಕ್ಕೆ ಆಸ್ತಿ ಮೌಲ್ಯದ ವಿವರ ಸಲ್ಲಿಕೆ**

# ರಾಜ್ಯಸಭೆ ಟಿಕೆಟ್‌ಗೆ ಸುಮಲತಾ ಅಂಬರೀಶ್ ಕಸರತ್ತು

• ಉದಯವಾಹಿನಿ, ಮಂಡ್ಯ

ರಾಜಕೀಯದಲ್ಲಿ ಸದ್ಯ ಸೈಲೆಂಟ್ ಆಗಿದ್ದ ಮಂಡ್ಯದ ಮಾಜಿ ಸಂಸದೆ ಸುಮಲತಾ ಅಂಬರೀಶ್ ಅವರು ಮತ್ತೆ ಸಕ್ರಿಯ ರಾಜಕಾರಣಕ್ಕೆ ಎಂಟ್ರಿ ಕೊಡಲು ತೆರೆಮರೆಯಲ್ಲಿ ಭರ್ಜರಿ ಕಸರತ್ತು ನಡೆಸುತ್ತಿದ್ದಾರೆ. ಮುಂಬರುವ ರಾಜ್ಯಸಭಾ ಚುನಾವಣೆ ಹಿನ್ನೆಲೆಯಲ್ಲಿ ತಮಗೆ ಟಿಕೆಟ್ ಸಿಗಲೇಬೇಕು ಎಂದು ಬೆಂಬಲಿಗರ ಮೂಲಕ ಬಿಜೆಪಿ ವರಿಷ್ಠರ ಮೇಲೆ ತೀವ್ರ ಒತ್ತಡ ಹೇರಲು ಮುಂದಾಗಿದ್ದಾರೆ.


ಉದಯವಾಹಿನಿ ಚಿತ್ರ

ಕಳೆದ ಲೋಕಸಭಾ ಚುನಾವಣೆಯ ಸಂದರ್ಭದಲ್ಲಿ ಬಿಜೆಪಿ ಹೈಕಮಾಂಡ್ ಸೂಚನೆ ಹಾಗೂ ವರಿಷ್ಠರ ಮನವಿ ಮೇರೆಗೆ ಸುಮಲತಾ ಅವರು ಮಂಡ್ಯ ಕ್ಷೇತ್ರವನ್ನು ಹೆಚ್.ಡಿ ಕುಮಾರಸ್ವಾಮಿ ಅವರಿಗಾಗಿ ಬಿಟ್ಟುಕೊಟ್ಟಿದ್ದರು. ಆ ಸಮಯದಲ್ಲಿ ಬಿಜೆಪಿ ನಾಯಕರು ಸುಮಲತಾ ಅವರಿಗೆ ಮುಂದಿನ ದಿನಗಳಲ್ಲಿ ಸೂಕ್ತ ಗೌರವ ಹಾಗೂ ಉನ್ನತ ಸ್ಥಾನಮಾನ ನೀಡುವುದಾಗಿ ಭರವಸೆ ನೀಡಿದ್ದರು ಎನ್ನಲಾಗಿದೆ. ಆದರೆ ಕ್ಷೇತ್ರ ತ್ಯಾಗ ಮಾಡಿದ ಬಳಿಕ ಬಿಜೆಪಿ ಪಕ್ಷವು ಸುಮಲತಾ ಅವರನ್ನು ಸಂಪೂರ್ಣವಾಗಿ ಕಡೆಗಣಿಸಿದೆ ಎನ್ನುವುದು ಅವರ ಬೆಂಬಲಿಗರ ಆಕ್ರೋಶಕ್ಕೆ ಕಾರಣವಾಗಿದೆ.

ತಮಗೆ ನೀಡಿದ ಭರವಸೆಯನ್ನು ಬಿಜೆಪಿ ಈಡೇರಿಸಿಲ್ಲ ಎಂಬ ಅಸಮಾಧಾನ ಅವರ ವಲಯದಲ್ಲಿದೆ. ತಮ್ಮ ನಾಯಕಿಗೆ ನ್ಯಾಯ ಸಿಗಬೇಕು ಎಂದು ಪಟ್ಟು ಹಿಡಿದಿರುವ ಸುಮಲತಾ ಬೆಂಬಲಿಗರು, ಇದೀಗ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ಅವರನ್ನು ಭೇಟಿಯಾಗಿ ಅಧಿಕೃತ ಮನವಿ ಸಲ್ಲಿಸಿದ್ದಾರೆ.

ಇಷ್ಟು ದಿನ ರಾಜಕೀಯದಿಂದ ದೂರ ಉಳಿದಿದ್ದ ರೆಬಲ್ ಲೇಡಿ, ಈಗ ಬೆಂಬಲಿಗರ ಮೂಲಕ ಪದೇ ಪದೇ ಒತ್ತಾಯ ಮಾಡಿಸುವ ತಂತ್ರದೊಂದಿಗೆ ಮರಳಿ ರಾಜಕೀಯ ಅಸ್ತಿತ್ವ ಪಡೆಯಲು ಹರಸಾಹಸ ಪಡುತ್ತಿದ್ದಾರೆ. ಬಿಜೆಪಿ ವರಿಷ್ಠರು ಸುಮಲತಾ ಅವರ ಈ ರಾಜ್ಯಸಭೆ ಬೇಡಿಕೆಗೆ ಮಣಿಯುತ್ತಾರಾ ಎಂಬುದನ್ನು ಕಾದು ನೋಡಬೇಕಿದೆ. ಕಳೆದ ಎರಡು ವರ್ಷಗಳಿಂದ ಜಿಲ್ಲೆಯ ಒಂದೆರಡು ಸಣ್ಣ-ಪುಟ್ಟ ಕಾರ್ಯಕ್ರಮಗಳನ್ನು ಹೊರತುಪಡಿಸಿದರೆ, ಸುಮಲತಾ ಅವರು ಯಾವುದೇ ಪ್ರಮುಖ ರಾಜಕೀಯ ಅಥವಾ ಪಕ್ಷದ ಚಟುವಟಿಕೆಗಳಲ್ಲಿ ಕಾಣಿಸಿಕೊಂಡಿರಲಿಲ್ಲ.

# ಲೋಪ ಇಲ್ಲದಂತೆ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆಗೆ ಸೂಚನೆ

• ಉದಯವಾಹಿನಿ, ತುಮಕೂರು

ಮುಖ್ಯ ಚುನಾವಣಾ ಆಯೋಗದ ಆದೇಶದಂತೆ ಮತದಾರರ ಪಟ್ಟಿ ವಿಶೇಷ ಸಮಗ್ರ, ತೀವ್ರ, ಪರಿಷ್ಕರಣೆ-2026 (ಎಸ್ ಐಆರ್) ಕಾರ್ಯ ನಡೆಯುತ್ತಿದ್ದು, ಮತಗಟ್ಟೆ ಅಧಿಕಾರಿಗಳು (ಬಿಎಲ್‌ಓ) ಯಾವುದೇ ಲೋಪದೋಷ ಇಲ್ಲದಂತೆ ಮತದಾರರ ಪಟ್ಟಿಯ ವಿಶೇಷ ಸಮಗ್ರ, ತೀವ್ರ ಪರಿಷ್ಕರಣೆ (ಎಸ್‌ಐಆರ್) ಕಾರ್ಯವನ್ನು ಮಾಡಬೇಕು ಎಂದು ಉಪವಿಭಾಗಾಧಿಕಾರಿ ಹಾಗೂ ಮತದಾರರ ನೋಂದಣಾಧಿಕಾರಿ ನಹೀದಾ ಜಮ್ ಜಮ್ ಸೂಚನೆ ನೀಡಿದರು.

ತುಮಕೂರು ಗ್ರಾಮಾಂತರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಕಸಬಾ ಪೂರ್ವ, ಕಸಬಾ ಪಶ್ಚಿಮ, ಕಸಬಾ, ಉತ್ತರ, ಗೂಳೂರು ಹೋಬಳಿ, ಹೆಬ್ಬೂರು, ಊರ್ಡಿಗೆರೆ, ಬೆಳ್ಳಾವಿ ಹೋಬಳಿವಾರು ಮತಗಟ್ಟೆ ಅಧಿಕಾರಿಗಳು (ಬಿಎಲ್‌ಓ) ಹಾಗೂ ಮತಗಟ್ಟೆ ಅಧಿಕಾರಿಗಳ ಮೇಲ್ವಿಚಾರಕರಿಗೆ ಹಮ್ಮಿಕೊಂಡಿದ್ದ ತರಬೇತಿ ಕಾರ್ಯಾಗಾರದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಈ ಪ್ರಕ್ರಿಯೆ ದೇಶದಲ್ಲಿ ಇದೇ ಮೊದಲಲ್ಲ. ಕರ್ನಾಟಕದಲ್ಲಿ ಕೂಡ 2002ರಲ್ಲಿ ಸಮಗ್ರ ಪರಿಷ್ಕರಣೆ ಆಗಿದ್ದು, ಈಗ 2026ರಲ್ಲಿ ಮಾಡಲಾಗುತ್ತಿದೆ. ಇದು ಭಾರತ ಚುನಾವಣಾ ಆಯೋಗದ ಮಾರ್ಗಸೂಚಿಯಂತೆ ರಾಜ್ಯ ಮುಖ್ಯ ಚುನಾವಣಾಧಿಕಾರಿಗಳು ರಾಜ್ಯದ ಎಲ್ಲಾ ಜಿಲ್ಲಾ ಚುನಾವಣಾಧಿಕಾರಿಗಳಿಗೆ ತರಬೇತಿ ನೀಡಿದ್ದು, ಅದರಂತೆ ತುಮಕೂರು ಜಿಲ್ಲೆಯಲ್ಲಿ ಕೂಡ ಈ ಪ್ರಕ್ರಿಯೆ ನಡೆಯುತ್ತಿದೆ ಎಂದರು.

ಮತಗಟ್ಟೆ ಅಧಿಕಾರಿಗಳು ಪ್ರತಿ ಮನೆ ಮನೆಗೂ ಭೇಟಿ ನೀಡಿ ಗಣತಿ ನಮೂನೆಯನ್ನು ಕೊಟ್ಟು ಭರ್ತಿ ಮಾಡಿಸಬೇಕು. ನಂತರ ಆ ಮನೆಯವರು ಭರ್ತಿ ಮಾಡಿದ ಬಳಿಕ ನಮೂನೆಯನ್ನು ಪಡೆದು ಅಪ್‌ಲೋಡ್ ಮಾಡಬೇಕು ಎಂದು ತಿಳಿಸಿದರು.

ಯಾವುದೇ ಒಬ್ಬ ಅರ್ಹ ಮತದಾರರು ಮತಪಟ್ಟಿಯಿಂದ ಹೊರ ಗುಳಿಯಬಾರದು, ಅನರ್ಹರ ಹೆಸರು ಮತಪಟ್ಟಿಯಲ್ಲಿ ಸೇರಿರಬಾರದು ಎಂಬುದು ಎಸ್‌ಐಆರ್ ಪ್ರಮುಖ ಉದ್ದೇಶವಾಗಿದೆ ಎಂದು ಅವರು ಹೇಳಿದರು.

ಜನಸಾಮಾನ್ಯರಲ್ಲಿ ಎಸ್‌ಐಆರ್ ಮಾಡಿದರೆ ನಮ್ಮ ಮತದಾನದ ಹಕ್ಕು ಹೋಗುತ್ತದೆ ಎಂಬ ಭಯ ಇದೆ. ಅವರಿಗೆ ಎಸ್‌ಐಆರ್ ಉದ್ದೇಶವನ್ನು ಮನವರಿಕೆ ಮಾಡಿಕೊಟ್ಟು ಎಸ್‌ಐಆರ್ ಬಗ್ಗೆ ಇರುವ ಭಯವನ್ನು ಅವರ ಮನಸ್ಸಿನಿಂದ ತೆಗೆದು ಹಾಕಬೇಕು ಎಂದರು. 2026ರ ವಿಶೇಷ ಸಮಗ್ರ ತೀವ್ರ ಪರಿಷ್ಕರಣೆ ಕುರಿತು 2002ರ ಮತದಾರರ ಪಟ್ಟಿಯಲ್ಲಿರುವ ಮತದಾರರನ್ನು 2005ರ ಮತದಾರರ ಪಟ್ಟಿಗೆ ಮ್ಯಾಪಿಂಗ್ ಮಾಡಬೇಕು ಎಂದು ಅವರು ತಿಳಿಸಿದರು.2002ರ ಮತದಾರರ ಪಟ್ಟಿಗೆ ಮತದಾರರು ಮ್ಯಾಪಿಂಗ್ ಆಗಿದ್ದಾರೆ ಎಂಬುದನ್ನು ಮೊದಲು ಖಚಿತಪಡಿಸಿಕೊಳ್ಳಬೇಕು.

ಯಾರು ಮ್ಯಾಪಿಂಗ್ ಆಗಿಲ್ಲವೋ ಅಂತಹವರನ್ನು ಮೊದಲು ಮ್ಯಾಪಿಂಗ್ ಮಾಡುವುದು ಬಹಳ ಮುಖ್ಯವಾಗಿರುತ್ತದೆ ಎಂದು ತಿಳಿಸಿದರು. ಪ್ರತಿ ಮತಗಟ್ಟೆ ಅಧಿಕಾರಿಗಳು (ಬಿಎಲ್‌ಓ) ತಮ್ಮ ವ್ಯಾಪ್ತಿಯಲ್ಲಿ ಎಷ್ಟು ಮತದಾರರಿದ್ದಾರೆ. ಎಷ್ಟು ಮನೆಗಳು ಬರುತ್ತವೆ ಎಂಬ ಮಾಹಿತಿಗಳನ್ನು ಕಲೆ ಹಾಕಬೇಕು. ನಂತರ ಪ್ರತಿ ಮನೆಗಳಿಗೆ ಭೇಟಿ ನೀಡಿ ಅರ್ಜಿ ನಮೂನೆಯನ್ನು ನೀಡಿ ಭರ್ತಿ ಮಾಡಿಸಿ ಪಡೆದುಕೊಳ್ಳಬೇಕು ಎಂದು ಹೇಳಿದರು.


ಉದಯವಾಹಿನಿ ಚಿತ್ರ

ಮತದಾರರ ನೋಂದಣಾಧಿಕಾರಿ ನಹೀದಾ ಜಮ್ ಜಮ್ ಸೂಚನೆ

"ಒಂದು ಬಾರಿ ಮತದಾರರ ಮನೆಗೆ ಭೇಟಿ ನೀಡಿ ನಮೂನೆ ಕೊಟ್ಟ ನಂತರ ಮತ್ತೆ ಆ ಮನೆಗೆ ನಮೂನೆ ಕೊಡಲು ಅವಕಾಶ ಇರುವುದಿಲ್ಲ. ನಮೂನೆ ಕೊಡುವಾಗಲೇ ಮತದಾರರಿಗೆ ನಮೂನೆ ಕಳೆಯದಂತೆ ಅಥವಾ ಹರಿಯದಂತೆ ನೋಡಿಕೊಳ್ಳುವಂತೆ ತಿಳಿಸಬೇಕು.
-ನೋಂದಣಾಧಿಕಾರಿ ನಹೀದಾ ಜಮ್ ಜಮ್

## ಸಮಗ್ರ ಪರಿಷ್ಕರಣೆ ಕಾರ್ಯ

ಚುನಾವಣಾ ಆಯೋಗ ಎಲ್ಲಾ ಬಿಎಲ್‌ಓ ಗಳ ಮಾಹಿತಿಯನ್ನು ಪಡೆದುಕೊಂಡಿದೆ. ಆದ್ದರಿಂದ ಯಾರೂ ಸಹ ನಿರ್ಲಕ್ಷ್ಯ ವಹಿಸದೆ ಪ್ರಾಮಾಣಿಕವಾಗಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯ ಮಾಡಬೇಕು. ಒಂದು ವೇಳೆ ಏನಾದರೂ ಲೋಪವಾದರೆ ಅಂತಹ ಅಧಿಕಾರಿಗಳ ವಿರುದ್ಧ ಚುನಾವಣಾ ಆಯೋಗ ಕ್ರಮ ಕೈಗೊಳ್ಳಲಿದೆ ಎಂದು ಎಚ್ಚರಿಕೆ ನೀಡಿದರು.

"ತುಮಕೂರು ಗ್ರಾಮಾಂತರ ವಿಧಾನಸಭಾ ಕ್ಷೇತ್ರದಲ್ಲಿ 211799 ಮತದಾರರಿದ್ದು, ಇದುವರೆಗೂ 20,2658 ಮತದಾರರನ್ನು ಬಿಎಲ್‌ಓ ಆಪ್ ಮೂಲಕ ಮ್ಯಾಪಿಂಗ್ ಮಾಡಲಾಗಿದೆ. ಈವರೆವಿಗೆ ಶೇ. 95.68 ರಷ್ಟು ಪ್ರಗತಿಯಾಗಿದೆ. ಬಾಕಿ ಇರುವ ಮತದಾರರ ಹೆಸರುಗಳನ್ನು ಮ್ಯಾಪಿಂಗ್ ಮಾಡಬೇಕಾಗಿದೆ ಎಂದು ತಿಳಿಸಿದರು.
-ನೋಂದಣಾಧಿಕಾರಿ ನಹೀದಾ ಜಮ್ ಜಮ್



# ಉಪಮುಖ್ಯಮಂತ್ರಿ ಪರಮೇಶ್ವರ್ ಅಧಿಕಾರ ಸ್ವೀಕಾರ ಕೊರಟಗೆರೆಯಲ್ಲಿ ಕಾರ್ಯಕರ್ತರ ಸಂಭ್ರಮಾಚರಣೆ

• ಉದಯವಾಹಿನಿ, ಕೊರಟಗೆರೆ

ಡಾ.ಜಿ.ಪರಮೇಶ್ವರ್‌ರವರು ರಾಜ್ಯದ ಉಪಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಿದ ಹಿನ್ನೆಲೆಯಲ್ಲಿ ಕೊರಟಗೆರೆ ಪಟ್ಟಣದ ಎಸ್.ಎಸ್.ಆರ್ ವೃತ್ತದಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಹಾಗೂ ಅಭಿಮಾನಿಗಳು ಪಟಾಕಿ ಸಿಡಿಸಿ, ಸಿಹ ಹಂಚಿ ಸಂಭ್ರಮಿಸಿದರು. ಬೆಂಗಳೂರಿನ ರಾಜಭವನದಲ್ಲಿ ನಡೆದ ಸರಳ ಹಾಗೂ ಭವ್ಯ ಸಮಾರಂಭದಲ್ಲಿ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರು ಡಾ.ಜಿ.ಪರಮೇಶ್ವರ್‌ರವರಿಗೆ ನೂತನ ಉಪಮುಖ್ಯಮಂತ್ರಿಯಾಗಿ ಪ್ರತಿಜ್ಞಾವಿಧಿ ಬೋಧಿಸಿದ ತಕ್ಷಣ ಕೊರಟಗೆರೆಯ ಎಸ್ ಎಸ್ ಆರ್ ವೃತ್ತದಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಹಾಗೂ ಅಭಿಮಾನಿಗಳು ಪಟಾಕಿ ಸಿಡಿಸಿ, ಸಿಹಿ ಹಂಚಿ ಸಂಭ್ರಮಾಚರಣೆ ಮಾಡಿದರು.


ಉದಯವಾಹಿನಿ ಚಿತ್ರ

ಪಟಾಕಿ ಸಿಡಿಸಿ ಸಂಭ್ರಮ

ಈ ಸಂದರ್ಭದಲ್ಲಿ ಪ.ಪಂ. ಮಾಜಿ ಸದಸ್ಯ ಕೆ.ಆರ್. ಓಬಳರಾಜು ಮಾತನಾಡಿ, ಡಾ.ಜಿ.ಪರಮೇಶ್ವರ್‌ರವರು ಕಾಂಗ್ರೆಸ್ ಪಕ್ಷದ ನಿಷ್ಠಾವಂತ ನಾಯಕರಾಗಿದ್ದು ಕಳೆದ ದಿನಗಳಲ್ಲಿ ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷವನ್ನು ಸಂಘಟಿಸಿ ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬರಲು ಶ್ರಮಿಸಿದ್ದ ಡಾ.ಜಿ.ಪರಮೇಶ್ವರ್ ರವರು ರಾಜ್ಯದ ಉಪ ಮುಖ್ಯಮಂತ್ರಿಯಾಗಿ ಅಧಿಕಾರ ಸ್ವೀಕರಿಸಿದ್ದು ಅವರ ಅಧಿಕಾರಾವಧಿಯಲ್ಲಿ ಕೊರಟಗೆರೆ ವಿಧಾನಸಭಾ ಕ್ಷೇತ್ರ ಹಾಗೂ ರಾಜ್ಯಾದ್ಯಂತ ಹೆಚ್ಚಿನ ಜನಪರ ಅಭಿವೃದ್ಧಿ ಕಾರ್ಯಗಳನ್ನು ಮಾಡಿ, ತಾಲ್ಲೂಕಿನ ಜನರ ಪ್ರೀತಿ ಅವರ ಮೇಲೆ ಹೆಚ್ಚಿನ ಕಾಳಜಿ, ರಾಜ್ಯದ ಜನತೆಯ ವಿಶ್ವಾಸಗಳಿಸಿದ್ದಾರೆ. ಮುಂದಿನ ದಿನಗಳಲ್ಲಿ ಮುಖ್ಯಮಂತ್ರಿಯಾಗಲ್ಲಿ ಎಂದು ದೇವರಲ್ಲಿ ಪ್ರಾರ್ಥಿಸುವುದಾಗಿ ತಿಳಿಸಿದರು.

## ಪೊಲೀಸ್ ಇಲಾಖೆಯಲ್ಲಿ ಮೇಜರ್ ಸರ್ಜರಿ ಏಕಾಏಕಿ 50 ಸಿಬ್ಬಂದಿ ವರ್ಗಾವಣೆಗೆ ಆದೇಶ


• ಉದಯವಾಹಿನಿ, ಕೋಲಾರ

ಸಾರ್ವಜನಿಕ ಹಿತ ದೃಷ್ಟಿಯಿಂದ ಕೆಜಿಎಫ್ ಜಿಲ್ಲಾ ಪೊಲೀಸ್‌ನಲ್ಲಿ ಮೇಜರ್ ಸರ್ಜರಿ ಮಾಡಲಾಗಿದೆ. ಏಕಾಏಕಿ 50 ಸಿಬ್ಬಂದಿಯನ್ನ ಸಾರ್ವತ್ರಿಕ ಹಿತ ದೃಷ್ಟಿಯಿಂದ ವರ್ಗಾವಣೆ ಮಾಡಿ ಆದೇಶಿಸಲಾಗಿದೆ. 7 ಜನ ಸಹಾಯಕ ಸಬ್ ಇನ್ಸ್‌ಪೆಕ್ಟರ್ ಸೇರಿ 43 ಜನ ಮುಖ್ಯಪೇದೆಗಳನ್ನ ವರ್ಗಾವಣೆ ಮಾಡಲಾಗಿದೆ. ವರ್ಗಾವಣೆ ಮಾಡಿ ಆದೇಶ ಹೊರಡಿಸಿರುವ ಕೆಜಿಎಫ್ ಎಸ್ಪಿ ಶಿವಾಂಶು ರಜಪೂತ ಅವರು ಪೊಲೀಸ್ ಠಾಣೆಗಳಲ್ಲಿ ಪಾರದರ್ಶಕ, ಜನ ಸ್ನೇಹಿ ಮಾಡುವ ಉದ್ದೇಶ ಹೊಂದಿದ್ದಾರೆ. ಕೆಜಿಎಫ್ ಪೊಲೀಸ್ ಇಲಾಖೆ ಶಾಕ್ ಕೊಟ್ಟಿದೆ. ಕೆಲವರು 5 ರಿಂದ 8 ವರ್ಷಗಳ ಕಾಲ ಒಂದೇ ಠಾಣೆ, ಪಿಐ ಕಚೇರಿಗಳಲ್ಲಿ ಕಾರ್ಯ ನಿರ್ವಹಿಸುತ್ತಿದ್ದ ಸಿಬ್ಬಂದಿಯನ್ನ ಗಡಿಯಲ್ಲಿರುವ ಕ್ಯಾಸಂಬಳಿ, ಕಾಮಸಮುದ್ರ, ಬೂದಿಕೋಟೆ ಪೊಲೀಸ್ ಠಾಣೆಗಳಿಗೆ ವರ್ಗಾವಣೆ ಮಾಡಲಾಗಿದೆ.

## ನಾಲ್ವಡಿ ಆಡಳಿತಕ್ಕೆ ತಾಯಿಯ ಮಾರ್ಗದರ್ಶನ: ಸಾಲಿಗ್ರಾಮ ತಹಶೀಲ್ದಾರ ರುಕಿಯಾ ಬೇಗಂ

• ಉದಯವಾಹಿನಿ, ಕೆ.ಆರ್.ನಗರ

ಆರ್ಥಿಕ, ಸಾಮಾಜಿಕ ಹಾಗೂ ಸಾಂಸ್ಕೃತಿಕವಾಗಿ ಯಾವುದೇ ವರ್ಗ, ಸಮುದಾಯದ ನಡುವೆ ತಾರತಮ್ಯ ಇರಬಾರದು ಎಂದು ನಾಲ್ವಡಿ ಕೃಷ್ಣರಾಜ ಒಡೆಯರ್ ಅವರು ಅನೇಕ ಯೋಜನೆಗಳನ್ನು ಜಾರಿಗೆ ತಂದಿದ್ದಾರೆ ಎಂದು ಸಾಲಿಗ್ರಾಮ ತಹಶೀಲ್ದಾರ್ ರುಕಿಯಾ ಬೇಗಂ ಹೇಳಿದರು. ಇಲ್ಲಿನ ತಾಲ್ಲೂಕು ಆಡಳಿತ ಸೌಧ ಸಭಾಂಗಣದಲ್ಲಿ ಗುರುವಾರ ನಡೆದ ನಾಲ್ವಡಿ ಕೃಷ್ಣರಾಜ ಒಡೆಯರ್ ಜಯಂತ್ಯುತ್ಸವದ ಅವರು ಮಾತನಾಡಿದರು. ಒಡೆಯರ್ ಅವರನ್ನು ನೆನೆಯುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದ್ದು, ಪ್ರಜೆಗಳ ಶ್ರೇಯಸ್ಸಿಗೆ ಬೇಕಾದ ಎಲ್ಲ ರೀತಿಯ ಯೋಜನೆಗಳು ಜಾರಿಗೆ


ಉದಯವಾಹಿನಿ ಚಿತ್ರ

ತಂದಿದ್ದಾರೆ. ಆಡಳಿತ ಸುಧಾರಣೆಗಾಗಿ ಸ್ಥಳೀಯ ಸಂಸ್ಥೆಗಳನ್ನು ಸ್ಥಾಪಿಸುವುದು ಸೇರಿದಂತೆ ಪ್ರಜಾಪ್ರಾತಿನಿಧ್ಯ ಸಭೆಗಳನ್ನು ನಡೆಯುವಂತೆ ನೋಡಿಕೊಂಡಿದ್ದರು. ವರ್ಷಕ್ಕೆ ಎರಡು ಬಾರಿ ಕಲಾಪಗಳನ್ನು ನಡೆಸುತ್ತಿದ್ದರು. ಅವರಿಗೆ ಅವರ ತಾಯಿಯ ಮಾರ್ಗದರ್ಶನ ಸಿಕ್ಕಿದ್ದರಿಂದ ಉತ್ತಮ ಆಡಳಿತಾತ್ಮಕ ದೃಷ್ಟಿಕೋನ ಹೊಂದಲು ಸಾಧ್ಯವಾಯಿತು ಎಂದರು. ಮೈಸೂರಿನವರು ಎಂದರೆ ನಮ್ಮಲ್ಲಿರುವ ಸಂಸ್ಕೃತಿಯಿಂದ ಉತ್ತರ ಕರ್ನಾಟಕ ಭಾಗದಲ್ಲಿ ನಮ್ಮನ್ನು ಬಹಳ ಗೌರವದಿಂದ ನೋಡುತ್ತಾರೆ ಎಂದರು.

ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ತು ಅಧ್ಯಕ್ಷ ಜಿ.ಡಿಂಡಿಮ ಶಂಕರ್ ಮಾತನಾಡಿ, 'ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಜೊತೆಗಿನ ಬಾಂಧವ್ಯ ನಮ್ಮ ಭಾಗದಲ್ಲಿ ಭಾವನಾತ್ಮಕವಾಗಿ ಉಳಿದಿದ್ದು, ಮೈಸೂರಿನವರಾದ ನಾವು ಅವರ ಮನೆಯ ಮದುವೆ ನಮ್ಮ ಮನೆಯ ಸಂಭ್ರಮದಂತೆಯೇ ಕಾಣುತ್ತೇವೆ' ಎಂದರು.

ಮೈಸೂರು ಮಹಾರಾಜರ ಇತಿಹಾಸ ಅವಲೋಕಿಸಿದಾಗ ಕಡಿಮೆ ವಯಸ್ಸಿನಲ್ಲಿಯೇ ಅತಿ ಹೆಚ್ಚು ಅಭಿವೃದ್ಧಿ ಕೆಲಸಗಳನ್ನು ಮಾಡಿರುವವರಲ್ಲಿ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರು ದೇಶಕ್ಕೆ ಮಾದರಿಯಾಗಿ ನಿಲ್ಲುತ್ತಾರೆ. ಹಳೆ ಯಡತೊರೆಯನು ಕೃಷ್ಣರಾಜನಗರವನ್ನಾಗಿ ಮಾಡಿದ್ದಲ್ಲದೆ, ಜಾತಿ ಪದ್ಧತಿಯನ್ನು ವಿರೋಧಿಸಿದ್ದು, ವಯಸ್ಕರ ಶಿಕ್ಷಣ ಸಂಸ್ಥೆ, ಸಾಮಾಜಿಕ ಶಿಕ್ಷಣ ವ್ಯವಸ್ಥೆ, ಬೀದಿ ದೀಪಗಳು, ಕೈಗಾರಿಕೆಗಳು ಹೀಗೆ ಹತ್ತು ಹಲವಾರು ಕಾರ್ಯಕ್ರಮಗಳು ಜಾರಿಗೆ ತರುವ ಮೂಲಕ ಒಡೆಯರ್ ಅವರು ಜನಮಾನಸದಲ್ಲಿ ಚಿರಸ್ಥಾಯಿಯಾಗಿ ಉಳಿದಿದ್ದಾರೆ ಎಂದರು.

ಸಾಲಿಗ್ರಾಮ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಉದಯಶಂಕರ್, ಕಸಾಪ ನಗರ ಅಧ್ಯಕ್ಷ ಸಿ.ವಿ. ಮೋಹನಕುಮಾರ್, ಗೌರವ ಕಾರ್ಯದರ್ಶಿ ಸಿ.ಆರ್.ಉದಯಕುಮಾರ್, ತಿಮ್ಮಶೆಟ್ಟಿ, ನಿವೃತ್ತ ಪ್ರಾಂಶುಪಾಲ ಕೃಷ್ಣ, ನೇತ್ರಾವತಿ, ಯೋಗೇಶ್ ಭಾಗವಹಿಸಿದ್ದರು.

# ಪತ್ರಕರ್ತರ ಸಂಘದ ನಿಸ್ವಾರ್ಥ ಸೇವೆ ಬಡರೋಗಿಗಳಿಗೆ ಸಹಕಾರಿ : ಶಶಿಧರ್ ಮೆಚ್ಚುಗೆ

• ಉದಯವಾಹಿನಿ ,ಗುಂಡ್ಲುಪೇಟೆ

ಪತ್ರಕರ್ತರ ಸಂಘವು ಕಳೆದ ಎರಡು ವರ್ಷಗಳಿಂದಲೂ ದಾನಿಗಳ ನೆರವಿನೊಂದಿಗೆ ಉಚಿತ ಕಣ್ಣಿನ ತಪಾಸಣೆ ಶಿಬಿರವನ್ನ ಆಯೋಜಿಸುವ ನಿಸ್ವಾರ್ಥ ಸೇವೆಯಲ್ಲಿ ತೊಡಗಿದ್ದು ಬಡರೋಗಿಗಳಿಗೆ ಆಶಾದಾಯಕವಾಗಿದೆ ಎಂದು ಕೃಷಿ ಇಲಾಖೆ ಸಹಾಯಕ ನಿರ್ದೇಶಕ ಶಶಿಧರ್ ಮೆಚ್ಚುಗೆ ವ್ಯಕ್ತಪಡಿಸಿದರು.

ಪಟ್ಟಣದ ಸರ್ಕಾರಿ ನೌಕರರ ಭವನದಲ್ಲಿ ಶನಿವಾರ ಕರ್ನಾಟಕ ಮಾಧ್ಯಮ ಪತ್ರಕರ್ತರ ಸಂಘ ಹಾಗೂ ಬೆಂಗಳೂರಿನ ನಿರಂಜನ್ ಮತ್ತು ಕ್ಯೂರಾವಾಂಟೀಸ್ ಪೌಂಡೇಶನ್ ಅಮೇರಿಕಾ ಇವರ ಸಹಭಾಗಿತ್ವದೊಂದಿಗೆ ಆಯೋಜನೆ ಮಾಡಲಾಗಿದ್ದ ಉಚಿತ ಕಣ್ಣಿನ ತಪಾಸಣೆ ಶಿಬಿರಕ್ಕೆ ಗಿಡ ನೆಡುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ತಾಲ್ಲೂಕಿನಲ್ಲಿ ಕಣ್ಣಿಗೆ ಸಂಬಂಧಪಟ್ಟ ಆಸ್ಪತ್ರೆಗಳ ಅಭಾವವಿದ್ದು ಬಡವರು ಕಣ್ಣಿನ ಆರೋಗ್ಯ ಕಾಪಾಡಿಕೊಳ್ಳಲು ಸವಾಲಿನ ಪರಿಸ್ಥಿತಿ ಎದುರಿಸುವಂತಾಗಿದೆ, ಇಂತಹ ಸಂದಿಗ್ಧ ಸ್ಥಿತಿಯಲ್ಲಿ ಶಿಬಿರಗಳನ್ನ ಆಯೋಜನೆ ಮಾಡುವ ಮುಖೇನ ಬಡಜನರಿಗೆ ಸಂಘ ನೆರವಾಗುತ್ತಿದೆ.


ಉದಯವಾಹಿನಿ ಚಿತ್ರ

ಉಚಿತ ತಪಾಸಣಾ ಶಿಬಿರ

ಅರವಿಂದ ಕಣ್ಣಾಸ್ಪತ್ರೆಯ ಬಿ.ವಿಜಯಕಾಂತ್ ಮಾತನಾಡಿ ಆಸ್ಪತ್ರೆಯು ಸಂಘ ಸಂಸ್ಥೆಗಳು ಹಾಗೂ ಸ್ವಯಂಸೇವಾ ಸಂಸ್ಥೆಗಳ ಸಹಕಾರದಲ್ಲಿ ಗ್ರಾಮಾಂತರ ಪ್ರದೇಶಗಳಲ್ಲಿ ತಪಾಸಣಾ ಶಿಬಿರ ಆಯೋಜಿಸಿ ಉಚಿತವಾಗಿ ಶಸ್ತ್ರಚಿಕಿತ್ಸೆ ಮಾಡಿಕೊಡುತ್ತಿದೆ, ಪಟ್ಟಣದಲ್ಲಿ ಪತ್ರಕರ್ತರ ಸಂಘದ ನೆರವಿನಿಂದ ಪ್ರತಿ ತಿಂಗಳ ಮೊದಲ ಶನಿವಾರ ಉಚಿತ ತಪಾಸಣಾ ಶಿಬಿರ ಆಯೋಜಿಸುತ್ತಿದ್ದು ಜನವರಿಯಿಂದ ಇಲ್ಲಿಯವರೆಗೆ 765 ಹೊರರೋಗಿಗಳ ಕಣ್ಣು ತಪಾಸಣೆ ನಡೆಸಿ 208 ಮಂದಿಗೆ ಉಚಿತವಾಗಿ ಶಸ್ತ್ರಚಿಕಿತ್ಸೆ ಮಾಡಲಾಗಿದೆ ಹಾಗಾಗಿ ಇಂತಹ ಶಿಬಿರಗಳನ್ನ ಸದುಪಯೋಗಪಡೆದುಕೊಳ್ಳಬೇಕು ಎಂದು ತಿಳಿಸಿದರು. ಶಿಬಿರದಲ್ಲಿ ತಜ್ಞ ವೈದ್ಯರಾದ ಡಾ.ರಘುರಾಂ , ಡಾ.ಶಿವಂಗೋಯಲ್, ಡೆನ್ನಿಪ್ರಸಾದ್, ಡಾ.ಅಮರ್ ಸಿದ್ದಿಕ್, ಅವರ ತಂಡವು 150 ಹೊರರೋಗಿಗಳನ್ನ ತಪಾಸಣೆಗೊಳಪಡಿಸಿ ಶಸ್ತ್ರಚಿಕಿತ್ಸೆ ಅಗತ್ಯವಿದ್ದ 52 ರೋಗಿಗಳನ್ನ ಕೊಯಂಬತ್ತೂರಿಗೆ ಕರೆದೊಯ್ಯಲಾಯಿತು.

ಈ ಸಂದರ್ಭದಲ್ಲಿ ಕ್ಯೂರಾವಾಂಟಿಸ್ ಪೌಂಡೇಶನ್ ನಿಖಿಲ್ ಭಾರದ್ವಾಜ್, ರಚನಾ, ರಾಜಶೇಖರ್, ಅರವಿಂದ ಪ್ರಕಾಶ್, ಸವಿತಾಕುಮಾರ್, ಸ್ವರ್ಣರೇಖಾ, ರಶ್ಮಿ, ಭವ್ಯ, ಶ್ರೀಕ್ಷೇತ್ರ ಧರ್ಮಸ್ಥಳ ಸಂಸ್ಥೆಯ ಚೈತ್ರಾ, ಕರ್ನಾಟಕ ಮಾಧ್ಯಮ ಪತ್ರಕರ್ತರ ಸಂಘ ತಾ.ಅಧ್ಯಕ್ಷ ಮಹದೇವಸ್ವಾಮಿ, ಜಿಲ್ಲಾ ಸಂಚಾಲಕ ರಾ.ಬಾಬು, ಪ್ರದಾನ ಕಾರ್ಯದರ್ಶಿ ಬೈರೇಶ್, ಖಜಾಂಚಿ ಮಲ್ಲು, ನಿರ್ದೇಶಕ ಸಿದ್ದಪ್ಪ,ಲಯನ್ಸ್ ಸಂಸ್ಥೆ ಮಾಜಿ ಅಧ್ಯಕ್ಷ ಶಂಕರನಾರಾಯಣ ಜೋಯಿಸ್, ಉದ್ಯಮಿ ರಾಘವೇಂದ್ರ, ಅನುಗ್ರಹ ಸಂಸ್ಥೆ ಮಂಜುನಾಥ್ , ಪುಟ್ಟತಾಯಮ್ಮ, ಚಿಕ್ಕತಾಯಮ್ಮ ಹಾಜರಿದ್ದರು.

# ಮನಸು ಅರಳಿಸುವ ಪುಸ್ತಕಗಳ ಓದು

• ಉದಯವಾಹಿನಿ, ಮಂಡ್ಯ

ಓದದೆಯೂ ರಾಮಾಯಣ, ಮಹಾಭಾರತದಂತಹ ಮಹಾ ಕಾವ್ಯಗಳನ್ನು ನಮ್ಮ ಹಳ್ಳಿಗರು ಚೆನ್ನಾಗಿ ಅರ್ಥ ಮಾಡಿಕೊಂಡಿದ್ದಾರೆ. ನಿತ್ಯ ನಡೆಯುತ್ತಿದ್ದ ಪಾರಾಯಣ ಕೇಳಿ ಮನನ ಮಾಡಿಕೊಂಡಿದ್ದಾರೆ. ಆದರೆ, ಓದಿನ ಪ್ರಯೋಜನ ಅಪಾರ' ಎಂದು ಕರ್ನಾಟಕ ಸಂಘದ ಅಧ್ಯಕ್ಷ ಪ್ರೊ.ಜಯಪ್ರಕಾಶಗೌಡ ಅಭಿಪ್ರಾಯಪಟ್ಟರು. ಜೂನ್ 1ರಂದು ಅನ್ನಪೂರ್ಣೇಶ್ವರಿ ನಗರದ ನಿವಾಸಿ ನಿವೃತ್ತ ಕ್ಷೇತ್ರ ಶಿಕ್ಷಣಾಧಿಕಾರಿ ಚಿಕ್ಕಸ್ವಾಮಿ ಅವರ ನಿವಾಸದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕನ್ನಡ ಪುಸ್ತಕ ಪ್ರಾಧಿಕಾರ ಹಾಗೂ ಜಿಲ್ಲಾ ಜಾಗೃತ ಸಮಿತಿ ಸಂಯುಕ್ತಾಶ್ರಯದಲ್ಲಿ ಮನೆಗೊಂದು ಗ್ರಂಥಾಲಯ ಅನುಷ್ಠಾನ' ಸಮಾರಂಭ ಉದ್ಘಾಟಿಸಿ ಮಾತನಾಡಿದರು.

ಓದಿನ ಶಕ್ತಿಯನ್ನು ಅರಿತಿದ್ದ ದಾನ ಚಿಂತಾಮಣಿ ಅತ್ತಿಮಬ್ಬೆ 1000 ಹಸ್ತ ಪ್ರತಿಗಳನ್ನು ಬರೆಯಿಸಿ ಹಂಚಿದ್ದು, ಅಂದಿನ ಕಾಲದಲ್ಲಿ ಓದಿಗೆ ನೀಡಿದ ಮಹತ್ವವನ್ನು ಸಾರುತ್ತದೆ. ಪುಸ್ತಕಗಳನ್ನು ಶೋಕೇಸ್ ನಲ್ಲಿ ಇಟ್ಟು ಬೀಗ ಹಾಕುವುದಲ್ಲ. ವೀಣೆಯನ್ನು ಮನೆಯಲ್ಲಿ ಇಟ್ಟು ಸುಮ್ಮನೆ ಮೀಟಿದರೂ, ಪುಸ್ತಕಗಳನ್ನು ಸವರಿದರೂ ಹಿತಾನುಭವ ನೀಡುತ್ತದೆ


ಉದಯವಾಹಿನಿ ಚಿತ್ರ

ಎಂದು ತಿಳಿಸಿದರು. ಮಂಡ್ಯ ವಿವಿ ಕನ್ನಡ ಉಪನ್ಯಾಸಕ ಉಮೇಶ್ ದಡಮಹಳ್ಳಿ 'ನಾ ಮೆಚ್ಚಿದ ಪುಸ್ತಕ ಕೆ.ಪಿ. ಪೂರ್ಣಚಂದ್ರ ತೇಜಸ್ವಿ ಅವರ ಪರಿಸರದ ಕಥೆಗಳು' ಕುರಿತು ಮಾತನಾಡಿದರು.

ಅಲಯನ್ಸ್ ಕೆ.ಟಿ. ಹನುಮಂತು ಮಾತನಾಡಿದರು. ಜಿಲ್ಲಾ ಜಾಗೃತ ಸಮಿತಿ ವತಿಯಿಂದ ಚಿಕ್ಕಸ್ವಾಮಿ ದಂಪತಿಯನ್ನು ಅಭಿನಂದಿಸಲಾಯಿತು. ಸಮಿತಿ ಸಂಚಾಲಕ ಕಾರಸವಾಡಿ ಮಹದೇವ್ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಸಮಿತಿಯ ಸದಸ್ಯರಾದ ಎಂ. ಕೆಂಪಮ್ಮ, ಚಂದ್ರಶೇಖರ ದ.ಕೋ. ಹಳ್ಳಿ, ಮಂಚಶೆಟ್ಟಿ ಎಂ, ಕವಿ ಸಬ್ಬನಹಳ್ಳಿ ಶಶಿಧರ, ಮಹೇಶ್ ಕೆ.ಎಂ. ನಾರಾಯಣಸ್ವಾಮಿ ಭಾಗವಹಿಸಿದ್ದರು.

# ಲಕ್ಕೂರು ಗೇಟ್ ಬಳಿ ಬಸ್ ನಿಲುಗಡೆಯಿಲ್ಲದೆ ತೊಂದರೆ : ಖುದ್ದು ಭೇಟಿ ನೀಡಿದ ಸಂಚಾರ ನಿಯಂತ್ರಕ

• ಉದಯವಾಹಿನಿ, ಗುಂಡ್ಲುಪೇಟೆ

ತಾಲ್ಲೂಕಿನ ಲಕ್ಕೂರು ಗೇಟ್ ಬಳಿ ಕೆ ಎಸ್ ಆರ್ಟಿಸಿ ಬಸ್ಗಳು ನಿಲುಗಡೆ ನೀಡದೆ ತೆರಳುತ್ತಿದ್ದರಿಂದ ವಿದ್ಯಾರ್ಥಿಗಳಿಗೆ ಜನಸಾಮಾನ್ಯರಿಗೆ ತೊಂದರೆಯಾಗುತ್ತಿದ್ದರ ಕುರಿತು ದೂರು ಕೇಳಿ ಬಂದ ಹಿನ್ನೆಲೆ ಖುದ್ದು ಭೇಟಿ ನೀಡಿದ ತೆರಕಣಾಂಬಿ ವಿಭಾಗ ಸಂಚಾರ ನಿಯಂತ್ರಕ ಎಸ್.ವಿಠಲ್ ಪರಿಶೀಲನೆ ನಡೆಸಿ ಚಾಲಕ ಹಾಗೂ ನಿರ್ವಾಹಕರಿಗೆ ಸೂಕ್ತ ನಿರ್ದೇಶನ ನೀಡಿದರು. ಲಕ್ಕೂರು ಹಾಗೂ ಸುತ್ತಲಿನ ಗ್ರಾಮಾಂತರ ಪ್ರದೇಶಗಳಿಂದ ಗುಂಡ್ಲುಪೇಟೆ ಪಟ್ಟಣ , ತೆರಕಣಾಂಬಿ ಹಾಗೂ ಚಾಮರಾಜನಗರಕ್ಕೆ ತೆರಳಲು ಸಾರಿಗೆ ಸಂಸ್ಥೆಯ ಬಸ್ಸುಗಳನ್ನ ಅವಲಂಭಿಸಿದ್ದರೂ ಸಹ ಚಾಲಕರ ನಿರ್ಲಕ್ಷ್ಯಕ್ಕೆ ಬೇಸತ್ತು ಹೋಗಿದ್ದರು, ಶಾಲಾ ಕಾಲೇಜುಗಳಿಗೆ ತೆರಳುವ ವಿದ್ಯಾರ್ಥಿಗಳು ಪ್ರತಿನಿತ್ಯ ತರಗತಿಗಳಿಗೆ ತಡವಾಗಿ ತೆರಳುವಂತ ಪರಿಸ್ಥಿತಿ ನಿರ್ಮಾಣವಾಗಿದ್ದರೆ ಇತ್ತ ದಿನನಿತ್ಯ ಕೆಲಸಗಳಿಗೆ ಪಟ್ಟಣಗಳಿಗೆ ಹೋಗಬೇಕಾಗಿದ್ದ ಜನಸಾಮಾನ್ಯರಿಗೆ ಬಸ್ ಸೇವೆಯು ಲಭ್ಯವಾಗದ ಕುರಿತಾದ ನಿರಂತರ ದೂರಿನ ಮೇರೆಗೆ ಭೇಟಿ ನೀಡಿ ಪರಿಶೀಲಿಸಿದ ಸಂಚಾರ ನಿಯಂತ್ರಕ ವಿಠಲ್ ಅವರ ನಡೆಗೆ ವ್ಯಾಪಕ ಪ್ರಶಂಸೆ ವ್ಯಕ್ತವಾಗಿದೆ. ಈಗಾಗಲೇ ಜಿಲ್ಲಾ ಸಂಚಾರ ನಿಯಂತ್ರಕರು ಸೂಕ್ತ ನಿರ್ದೇಶನ ನೀಡಿದ್ದು ಕಟ್ಟುನಿಟ್ಟಾಗಿ ಪಾಲನೆ ಮಾಡಬೇಕು ಎಂದು ಸೂಚಿಸಿದರು.


ಉದಯವಾಹಿನಿ ಚಿತ್ರ

## ಜನ ಸಾಮಾನ್ಯರಿಗೆ ಅನುಕೂಲ

ಲಕ್ಕೂರು ಗೇಟ್ ಬಳಿ ಬಸ್ ನಿಲುಗಡೆಯಿಲ್ಲದೆ ವಿದ್ಯಾರ್ಥಿಗಳಿಗೆ ಸಾರ್ವಜನಿಕರಿಗೆ ತೊಂದರೆಯಾಗಿತ್ತು ಈ ಕುರಿತಾಗಿ ರೈತ ಸಂಘದವರು ಸಹ ಸಾರಿಗೆ ಇಲಾಖೆ ಅಧಿಕಾರಿಗಳಿಗೆ ದೂರು ನೀಡಿದ್ದನ್ನ ಪರಿಗಣಿಸಿದ ಸಂಚಾರ ನಿಯಂತ್ರಕರು ಖುದ್ದು ಭೇಟಿ ನೀಡುವ ಮೂಲಕ ಜನ ಸಾಮಾನ್ಯರಿಗೆ ಅನುಕೂಲವಾಗುವಂತೆ ಮಾಡಿರುವುದು ಸ್ವಾಗತಾರ್ಹ

# ಮಿನಿ ನ್ಯೂಸ್

## ಡಿಕೆಶಿ ಸಿಎಂ ಒಕ್ಕಲಿಗ ಸಮುದಾಯದಲ್ಲಿ ಸಂತಸ : ಚೂಡಲಿಂಗೇಶ್ವರಯ್ಯ


ಉದಯವಾಹಿನಿ ಚಿತ್ರ

• ಉದಯವಾಹಿನಿ, ರಾಮನಗರ :

ರಾಜ್ಯದ 25ನೇ ಮುಖ್ಯಮಂತ್ರಿಯಾಗಿ ಡಿ.ಕೆ.ಶಿವಕುಮಾರ್ ಅಧಿಕಾರ ಸ್ವೀಕರಿಸಿರುವುದು ಒಕ್ಕಲಿಗ ಸಮುದಾಯಕ್ಕೆ ಸಂತಸದ ವಿಚಾರವಾಗಿದ್ದು, ಒಕ್ಕಲಿಗರು ಸೇರಿದಂತೆ ಎಲ್ಲಾ ಸಮುದಾಯದ ಸಮಗ್ರ ಅಭಿವೃದ್ಧಿಗೆ ಶ್ರಮಿಸುವ ಜೊತೆಗೆ ಪಾರದರ್ಶಕ ಹಾಗೂ ಜನಪರ ಆಡಳಿತ ನೀಡುವ ವಿಶ್ವಾಸ ಇದೆ ಎಂದು ತಾಲ್ಲೂಕು ಒಕ್ಕಲಿಗರ ಸಂಘದ ಅಧ್ಯಕ್ಷ ಚೂಡಲಿಂಗೇಶ್ವರಯ್ಯ ತಿಳಿಸಿದರು.

ನಗರದ ಮಿನಿ ವಿಧಾನಸೌದ ಎದುರಿನ ತಾಲ್ಲೂಕು ಒಕ್ಕಲಿಗರ ಸಂಘದ ಕಚೇರಿಯಲ್ಲಿ ಪದಾಧಿಕಾರಿಗಳು ಹಾಗೂ ಸದಸ್ಯರು ಸಭೆ ನಡೆಸಿ ನೂತನ ಸಿಎಂ ಡಿಕೆಶಿಗೆ ಶುಭ ಹಾರೈಸಿದರು. ಬಳಿಕ ಸುದ್ದಿಗಾರರ ಜೊತೆ ಮಾತನಾಡಿದ ಚೂಡಲಿಂಗೇಶ್ವರಯ್ಯ, ಒಕ್ಕಲಿಗ ಸಮುದಾಯಕ್ಕೆ ಸುವರ್ಣಯುಗ ಆರಂಭವಾಗಿದ್ದು, ಸಮಾಜದ ಆಗೂ ಹೋಗುಗಳಿಗೆ ಮುಂಬರುವ ಡಿಕೆಶಿ ನೇತೃತ್ವದ ಸರ್ಕಾರ ಸ್ಪಂದಿಸಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ಡಿಕೆಶಿ ಅವರಿಗೆ ಸಿಎಂ ಸ್ಥಾನ ನೀಡಬೇಕು ಎಂಬುದು ಮಠಾಧೀಶರು ಸೇರಿದಂತೆ ಒಕ್ಕಲಿಗರ ಸಂಘದ ಮುಖಂಡರ ಆಶಯವಾಗಿತ್ತು. ಇದೀಗ ಡಿ.ಕೆ.ಶಿವಕುಮಾರ್ ನಾಡಿನ ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಿದ್ದಾರೆ. ಕೊನೆಗೂ ಸಮುದಾಯದ ನಾಯಕನಿಗೆ ಮನ್ನಣೆ ಸಿಕ್ಕಿರುವುದು ಒಕ್ಕಲಿಗರಲ್ಲಿ ಸಂತಸ ತಂದಿದೆ ಎಂದರು.

ಉಪಾಧ್ಯಕ್ಷ ಚನ್ನಮಾನಹಳ್ಳಿ ರೇವುಲಿಂಗಯ್ಯ ( ಅಪ್ಪಾಜಣ್ಣ) ಮಾತನಾಡಿ, ಡಿ.ಕೆ.ಶಿವಕುಮಾರ್ ಅವರ 4 ದಶಕಗಳ ರಾಜಕೀಯ ಹೋರಾಟಕ್ಕೆ ಕೊನೆಗೂ ಫಲ ದೊರೆತಿದೆ. ಅವರು ಮುಖ್ಯಮಂತ್ರಿಯಾಗಿ ಅಧಿಕಾರ ಸ್ವೀಕರಿಸಿರುವುದು ಒಕ್ಕಲಿಗ ಸಮುದಾಯಕ್ಕೆ ಖುಷಿ ತಂದಿದೆ. ಜಿಲ್ಲೆಯ ಜೊತೆಗೆ ನಾಡಿನ ಸಮಗ್ರ ಅಭಿವೃದ್ಧಿಗೆ ಶ್ರಮಿಸಲಿದ್ದಾರೆ. ಅವರಿಗೆ ಜನಪರ ಆಡಳಿತ, ಎಲ್ಲಾ ಜನಾಂಗದ ಏಳ್ಗೆಗೆ ಶ್ರಮಿಸಲು ದೇವರು ಆಯುರಾರೋಗ್ಯ, ಯಶಸ್ಸು, ಶಕ್ತಿ ನೀಡಲೆಂದು ಪ್ರಾರ್ಥಿಸುತ್ತೇವೆ ಎಂದು ಶುಭ ಕೋರಿದರು. ಈ ಸಂದರ್ಭದಲ್ಲಿ ಒಕ್ಕಲಿಗ ಸಂಘದ ಕಾರ್ಯದರ್ಶಿ ಎಮ್. ರೇವಣ್ಣ, ಸಹ ಕಾರ್ಯದರ್ಶಿ ಮರಿಸ್ವಾಮಿ, ನಿರ್ದೇಶಕರಾದ ಪ್ರೇಮ್ ಕುಮಾರ್, ಶಿವಸ್ವಾಮಿ, ಜಯರಾಮಯ್ಯ, ಭದ್ರಯ್ಯ, ನರಸಿಂಹಯ್ಯ, ಕಾಂತರಾಜು, ಹನುಮೇಶ್, ಗಂಗರಾಜು ಸೇರಿದಂತೆ ಹಲವರಿದ್ದರು.

## ಡಿಕೆಶಿ ಸಿಎಂ ಆಗಲೆಂದು ಹರಕೆ ತೊಟ್ಟ ಮುತ್ತುರಾಯಪ್ಪ ಅವರಿಂದ ಪಾದಯಾತ್ರೆ

• ಉದಯವಾಹಿನಿ, ರಾಮನಗರ


ಉದಯವಾಹಿನಿ ಚಿತ್ರ

ಡಿ.ಕೆ. ಶಿವಕುಮಾರ್ ಮುಖ್ಯಮಂತ್ರಿಯಾಗಬೇಕೆಂದು ದೇವರಿಗೆ ಹರಕೆ ಹೊತ್ತಿದ್ದ ಮುತ್ತುರಾಯಪ್ಪ ಎಂಬ ಡಿಕೆಶಿ ಅಭಿಮಾನಿಯೊಬ್ಬರು ಗಾಂಧೀಜಿ ವೇಷ ಧರಿಸಿ ರಾಮನಗರದಿಂದ ಶನಿವಾರ ಬೆಂಗಳೂರಿನ ಕಡೆ ಪ್ರಯಾಣ ಬೆಳೆಸಿದರು.

ತುಮಕೂರುಜಿಲ್ಲೆ ಪಾವಗಡ ತಾಲ್ಲೂಕು ಬೂದಿಬೆಟ್ಟ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಎತ್ತಿನಹಳ್ಳಿ ಗ್ರಾಮದ ಮುತ್ತುರಾಯಪ್ಪ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರಾಗಿದ್ದು ಡಿಕೆಶಿವಕುಮಾರ್ ಅಭಿಮಾನಿಯಾಗಿದ್ದಾರೆ. ಕನಕಪುರದಿಂದಬೆಂಗಳೂರಿನ ಸದಾಶಿವನಗರದ ಡಿ.ಕೆ. ಶಿವಕುಮಾರ್ ಮನೆವರೆಗೆ ನಡೆಸಿರುವಪಾದಯಾತ್ರೆ ಶುಕ್ರವಾರ ರಾತ್ರಿ ರಾಮನಗರ ತಲುಪಿ ಶನಿವಾರ ಬೆಳಿಗ್ಗೆ ರಾಮನಗರದ ಕನಕಪುರ ಸರ್ಕಲ್‌ನಿಂದ ಪಾದಯಾತ್ರೆ ಆರಂಭಿಸಿದರು. ಈಸಂಧರ್ಭದಲ್ಲಿ ಮಾರ್ಗದುದ್ದಕ್ಕೂ ಸಾರ್ವಜನಿಕರು, ಕಾಂಗ್ರೆಸ್ ಕಾರ್ಯಕರ್ತರು ಅವರಿಗೆ ಶುಭಕೋರಿ ಹಸ್ತಲಾಘವ ನೀಡಿ ಅವರ ಪಾದಯಾತ್ರೆಗೆ ಶುಭಾಶಯ ಕೋರಿದರು.

ಪಾದಯಾತ್ರಿ ಮುತ್ತುರಾಯಪ್ಪ ಈ ಸಂಧರ್ಭದಲ್ಲಿ ಪತ್ರಿಕೆಯೊಂದಿಗೆ ಮಾತನಾಡಿ ಡಿ.ಕೆ. ಶಿವಕುಮಾರ್ ಅವರು ಕಾಂಗ್ರೆಸ್ ಪಕ್ಷವನ್ನು ಸಂಘಟಿಸಿ ಅಧಿಕಾರಕ್ಕೆ ತರುವಲ್ಲಿ ಮುಖ್ಯಮಂತ್ರಿ ಆಗಬೇಕೆಂದು ಬಯಸಿ ಕೇರಳದ ವಯನಾಡ್ ಶಿವನ ದೇವಸ್ಥಾನ, ಅವರ ಮನೆ ದೇವತೆ ಕೆಂಕೇರಮ್ಮ ದೇವತೆಯಲ್ಲಿ ಕಳೆದ ವರ್ಷ ಹರಕೆ ಹೊತ್ತಿದ್ದೆ. ತಮ್ಮ ಹರಕೆಯಂತೆ ಡಿ.ಕೆ. ಶಿವಕುಮಾರ್ ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಿದ್ದಾರೆ. ಡಿ.ಕೆ. ಶಿವಕುಮಾರ್ ನೇತೃತ್ವದಲ್ಲಿ ನಡೆಸಿದ ಮೇಕೆದಾಟು ಪಾದಯಾತ್ರೆ, ಭಾರತ್ ಜೋಡೋ ಬೆಂಗಳೂರಿನಿಂದ ಬಳ್ಳಾರಿವರೆಗೆ ನಡೆದ ಪಾದಯಾತ್ರೆಯಲ್ಲಿ ಗಾಂಧೀಜಿ ವೇಷ ಧರಿಸಿ ಪಾದಯಾತ್ರೆಯಲ್ಲಿ ಪಾಲ್ಗೊಂಡಿದ್ದೇನೆ ಎಂದರು.

ಕನಕಪುರದ ಕೆಂಕೆರಮ್ಮ ದೇವಸ್ಥಾನದಲ್ಲಿ ಪೂಜೆ ಸಲ್ಲಿಸಿ ಡಿ.ಕೆ. ಶಿವಕುಮಾರ್ ಅವರ ಕನಕಪುರ ಮನೆಯಿಂದ ಪಾದಯಾತ್ರೆ ಪ್ರಾರಂಭಿಸಲಾಗಿದೆ. ಐದು ದಿನಗಳ ಕಾಲ ಪಾದಯಾತ್ರೆ ರಾಮನಗರ, ಬಿಡದಿ, ಕೆಂಗೇರಿ ಮೂಲಕ ನಡೆಯಲಿದೆ ಎಂದು ತಿಳಿಸಿದರು.

## ಜಂಗಮಕೋಟೆ ಹೋಬಳಿಯಲ್ಲೇ ಕೈಗಾರಿಕೆ ಸ್ಥಾಪಿಸಬೇಕು ಎಂದು ಉಪವಾಸ ಸತ್ಯಾಗ್ರಹ

• ಉದಯವಾಹಿನಿ, ಚಿಕ್ಕಬಳ್ಳಾಪುರ

ಜಂಗಮಕೋಟೆ ಹೋಬಳಿಗೆ ಸೇರಿದ 13 ಹಳ್ಳಿಗಳ ಭೂಮಿಯಲ್ಲೇ ಸರಕಾರ ಉದೇಶಿಸಿರುವ ಕೈಗಾರಿಕೆ ಅಭಿವೃದ್ದಿ ಪ್ರಾರಂಭಿಸಬೇಕು. ಕೆಐಎಡಿಬಿ ರೈತರ ಭೂಮಿಗೆ ದರ ನಿಗದಿ ಪಡಿಸಬೇಕು. ಹಣ ಬೇಡ ಎನ್ನುವ ರೈತರಿಗೆ ಭೂಮಿ ಕೊಡಬೇಕು. ಒಂದೇ ಕಂತಿನಲ್ಲಿ ರೈತರ ಖಾತೆ ಗಳಿಗೆ ಹಣ ನೀಡಬೇಕು ಎಂದು ಆಗ್ರಹಿಸಿ ರೈತರ ಮತ್ತೊಂದು ಬಣ ಉಪವಾಸ ಸತ್ಯಾಗ್ರಹ ಹಮ್ಮಿಕೊಂಡಿದೆ.

ನಗರ ಹೊರವಲಯ ಜಿಲ್ಲಾಡಳಿತ ಭವನದ ಎದುರು ಕೆಐಎಡಿಬಿ ಪರ ಭೂಮಿ ಕೊಡಲು ಒಪ್ಪಿರುವ ರೈತ ಸಂಘಟನೆ ಮತ್ತು ಸಮಾನ ಮನಸ್ಕ ಸಂಘಟನೆಗಳ ಮುಖಂಡರು ಕಳೆದ 76ನೇ ದಿನದ ಪ್ರತಿಭಟನೆಯ ಭಾಗವಾಗಿ ಉಪವಾಸ ಸತ್ಯಾಗ್ರಹ ಹಮ್ಮಿಕೊಂಡಿದ್ದಾರೆ.

## ಎಂಇಎಸ್ ರದ್ದಿಗೆ ಆಗ್ರಹಿಸಿ ಪ್ರತಿಭಟನೆ

• ಉದಯವಾಹಿನಿ, ರಾಮನಗರ

ರಾಜ್ಯದಲ್ಲಿ ಎಂಇಎಸ್ ರದ್ದು ಪಡಿಸುವಂತೆ ಒತ್ತಾಯಿಸಿ ನಗರದ ಐಜೂರು ವೃತ್ತದಲ್ಲಿ ಕನ್ನಡಪರ ಹೋರಾಟಗಾರ ವಾಟಾಳ್ ನಾಗರಾಜು ಪ್ರತಿಭಟನೆ ನಡೆಸಿದರು. ಬೆಳಗಾವಿಯಲ್ಲಿ ಎಂಇಎಸ್ ಪುಂಡಾಟ ಹೆಚ್ಚಾಗಿದೆ. ಬೆಳಗಾವಿ ಅಭಿವೃದ್ಧಿಗೆ ಎಂಇಎಸ್ ಅಡ್ಡಗಾಲು ಹಾಕುತ್ತಿದೆ. ಗಡಿಭಾಗದಲ್ಲಿ ಶಿವಸೇನೆ ದಾಂದಲೆ ನಡೆಸುತ್ತಿದೆ. ಇಷ್ಟಾದರೂ ಎಂಇಎಸ್ ವಿರುದ್ಧ ರಾಜ್ಯ ಸರ್ಕಾರ ಯಾವುದೇ ಕ್ರಮ ವಹಿಸುತ್ತಿಲ್ಲ ಎಂದು ಕಿಡಿಕಾಡಿದರು.ಬೆಳಗಾವಿ ಕರ್ನಾಟಕ ಅವಿಭಾಜ್ಯ ಅಂಗ. ಮಹಾಜನ್ ವರದಿಯಲ್ಲಿ ಸ್ಪಷ್ಟವಾಗಿ ಹೇಳಲಾಗಿದೆ. ಬೆಳಗಾವಿ ಮಹಾನಗರ ಪಾಲಿಕೆಯವರು ಬೆಳಗಾವಿಯನ್ನು ಕರ್ನಾಟಕದ ಅವಿಭಾಜ್ಯ ಅಂಗ ಎಂದು ನಿರ್ಣಯ ಮಾಡಬೇಕು ಎಂದು ಹೇಳಿದರು.

# ಜಿಲ್ಲೆಯಲ್ಲಿ ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆ ಆರಂಭ

## ಅಂತಿಮ ಮತದಾರರ ಪಟ್ಟಿಯ ಪ್ರಕಟಣೆಯನ್ನು ಅಕ್ಟೋಬರ್ 7 ರಂದು ಚುನಾವಣಾ ಆಯೋಗವು ಬಿಡುಗಡೆ ಮಾಡಲಿದೆ ಎಂದರು.

• **ಉದಯವಾಹಿನಿ, ಹೊಸಪೇಟೆ.**

1. ರಾಜಕೀಯ ಪಕ್ಷಗಳ ಸಹಭಾಗಿತ್ವ
2. ಎಸ್.ಐ.ಆರ್. ಪೂರ್ವ ಪೂಜಿಣಿ ಮತ್ತು ಮ್ಯಾಪಿಂಗ್ ಪ್ರಗತಿ
3. ಎಸ್.ಐ.ಆರ್.ಗೆ ಮತದಾರರ ಸಹಾಯ ಕೇಂದ್ರ
4. ಆನ್ಲೈನ್ ಅರ್ಜಿ ಸಲ್ಲಿಕೆಗೆ ಅವಕಾಶ



ಉದಯವಾಹಿನಿ ಚಿತ್ರ

ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ವಿಜಯನಗರ ಜಿಲ್ಲೆಯಲ್ಲಿ ಜೂ.20 ರಿಂದ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಪ್ರಕ್ರಿಯೆ ಆರಂಭವಾಗಲಿದೆ ಎಂದು ಜಿಲ್ಲಾಧಿಕಾರಿ ಕವಿತಾ ಎಸ್.ಮನ್ನಿಕೇರಿ ತಿಳಿಸಿದರು.

ಜಿಲ್ಲಾಧಿಕಾರಿ ಕಚೇರಿಯಲ್ಲಿ ಜರುಗಿದ ಪತ್ರಿಕಾಗೋಷ್ಠಿಯಲ್ಲಿ ಈ ಕುರಿತು ಮಾಹಿತಿ ನೀಡಿದ ಅವರು, ಮತದಾರರ ಪಟ್ಟಿಗೆ ಹೆಸರು ಸೇರಿಸಲು, ತೆಗೆದುಹಾಕಲು ಹಾಗೂ ಪೂಜಿಣಿ ಮ್ಯಾಪಿಂಗ್ ಮಾಡಲು ಜೂನ್ 16 ರವರೆಗೆ ಅವಕಾಶವಿರುತ್ತದೆ. ಆ ಬಳಿಕ ಪೋರ್ಟಲ್ ಫ್ರೀಜ್ ಆಗಲಿದ್ದು, ಕರಡು ಮತದಾರರ ಪಟ್ಟಿ ಪ್ರಕಟ ಆಗುವವರೆಗೆ ಯಾವುದೇ ಬದಲಾವಣೆಗಳಿಗೆ ಅವಕಾಶವಿರುವುದಿಲ್ಲ. ಎಸ್.ಐ.ಆರ್. ಪ್ರಕ್ರಿಯೆ ಆರಂಭವಾಗಿದ್ದು ಮತಗಟ್ಟೆ ಅಧಿಕಾರಿಗಳಿಗೆ

**ಸಾರ್ವಜನಿಕರು ಹಾಗೂ 18 ವರ್ಷ ತುಂಬಿದ ಯುವ ಮತದಾರರು ಹೆಸರು ಸೇರ್ಪಡೆಗಾಗಿ ಇನ್ನು ಮುಂದೆ ಭೌತಿಕವಾಗಿ ಅರ್ಜಿ ಸಲ್ಲಿಸುವ ಅವಶ್ಯಕತೆಯಿರುವುದಿಲ್ಲ. ಚುನಾವಣಾ ಆಯೋಗದ ವೈಬ್ ಸೈಟ್ ನಲ್ಲಿ ಲಭ್ಯವಿರುವ ಆಯಾ ಭಾಗದ ಬಿಎಲ್‌ಒಗಳ ದೂರವಾಣಿ ಸಂಖ್ಯೆಯನ್ನು ಸಂಪರ್ಕಿಸಿ, ಆನ್ಲೈನ್ ಮೂಲಕವೇ ಸುಲಭವಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಹೆಸರು ಮತ್ತು ಸಣ್ಣಪುಟ್ಟ ತಿದ್ದುಪಡಿಗಳಿಗೂ ಇದರಲ್ಲಿ ಅವಕಾಶ ಕಲ್ಪಿಸಲಾಗಿದೆ ಎಂದು ತಿಳಿಸಿದರು.**

**-ಜಿಲ್ಲಾಧಿಕಾರಿ ಕವಿತಾ ಎಸ್.ಮನ್ನಿಕೇರಿ**

ಸಿದ್ದತೆ, ತರಬೇತಿ ಮತ್ತು ಮುದ್ರಣವು ಜೂನ್ 20 ರಿಂದ 29 ವರೆಗೆ

**ಗೊಂದಲ ಹಾಗೂ ತಾಂತ್ರಿಕ ಸಮಸ್ಯೆಗಳ ನಿವಾರಣೆ**

**ಸಾರ್ವಜನಿಕರ ಗೊಂದಲ ಹಾಗೂ ತಾಂತ್ರಿಕ ಸಮಸ್ಯೆಗಳ ನಿವಾರಣೆಗಾಗಿ ಗ್ರಾಮ ಆಡಳಿತಾಧಿಕಾರಿಗಳ ಕಚೇರಿ, ಸ್ಥಳೀಯ ಸಂಸ್ಥೆ, ತಹಶೀಲ್ದಾರ್ ಕಚೇರಿ, ನಾಡ ಕಚೇರಿಗಳಲ್ಲಿ ವೋಟರ್ ಫೆಸಿಲಿಟೇಶನ್ ಸೆಂಟರ್ ಗಳನ್ನು ತೆರೆಯಲಾಗುತ್ತಿದೆ. ಇಂಟರ್ನೆಟ್ ಅಥವಾ ಕಂಪ್ಯೂಟರ್ ಜ್ಞಾನವಿಲ್ಲದವರು ಈ ಕೇಂದ್ರಗಳಿಗೆ ಭೇಟಿ ನೀಡಿ ತಮ್ಮ ಸಮಸ್ಯೆಗಳನ್ನು ಬಗೆಹರಿಸಿಕೊಳ್ಳಬಹುದು.**

ನಡೆಯಲಿದೆ. ನಂತರ ಮತಗಟ್ಟೆ ಮಟ್ಟದ ಬಿಎಲ್‌ಒಗಳು 2026 ರ ಜೂನ್ 30 ರಿಂದ ಜುಲೈ 29 ರವರೆಗೆ ಒಟ್ಟು 3 ಬಾರಿ ಭೇಟಿ ನೀಡಿ ಪರಿಶೀಲನಾ ಪಟ್ಟಿ ನೀಡಿ ಮತದಾರರಿಂದ ಸಹಿ ಪಡೆಯಲಿದ್ದಾರೆ. ನಂತರ ಕರಡು ಮತದಾರರ ಪಟ್ಟಿಯನ್ನು ಆಗಸ್ಟ್ 5 ರಂದು ಪ್ರಕಟಿಸಲಿದ್ದು ಆಕ್ಷೇಪಣೆಗಳಿದ್ದಲ್ಲಿ ಆಗಸ್ಟ್ 5 ರಿಂದ ಸೆಪ್ಟೆಂಬರ್ 4 ರವರೆಗೆ ಸಲ್ಲಿಸಬಹುದು.

ಅಂತಿಮ ಮತದಾರರ ಪಟ್ಟಿಯ ಪ್ರಕಟಣೆಯನ್ನು ಅಕ್ಟೋಬರ್ 7 ರಂದು ಚುನಾವಣಾ ಆಯೋಗವು ಬಿಡುಗಡೆ ಮಾಡಲಿದೆ

**ಈಗಾಗಲೇ ಜಿಲ್ಲೆಯ ಎಲ್ಲಾ ರಾಜಕೀಯ ಪಕ್ಷಗಳ ಪ್ರಮುಖರೊಂದಿಗೆ ಸಭೆ ನಡೆಸಿ ಸೂಕ್ತ ಮಾಹಿತಿ ನೀಡಲಾಗಿದೆ. ಬಿಎಲ್‌ಒಗಳಿಗೆ ಸಹಕರಿಸಲು ಹಾಗೂ ಮತದಾರರ ಪಟ್ಟಿ ಪರಿಷ್ಕರಣೆಯಲ್ಲಿ ಪಾರದರ್ಶಕತೆ ಕಾಯ್ದುಕೊಳ್ಳಲು ಪ್ರತಿ ರಾಜಕೀಯ ಪಕ್ಷಗಳು ತಮ್ಮ ಬಿಎಲ್‌ಎ ಗಳನ್ನು ನೇಮಕ ಮಾಡಿಕೊಳ್ಳಲು ಸೂಚಿಸಲಾಗಿದೆ ಎಂದರು.**

**-ಜಿಲ್ಲಾಧಿಕಾರಿ ಕವಿತಾ ಎಸ್.ಮನ್ನಿಕೇರಿ**

ಎಂದರು. ಜಿಲ್ಲೆಯಲ್ಲಿ ಪ್ರಸ್ತುತ ಪ್ರಿ-ಎಸ್‌ಐಆರ್ ಚಟುವಟಿಕೆಗಳು ಯಶಸ್ವಿಯಾಗಿ ನಡೆಯುತ್ತಿವೆ.

ಮ್ಯಾಪಿಂಗ್ ಪ್ರಗತಿ ಶೇ 75.78, ಪೂಜಿಣಿ ಪ್ರಗತಿ ಶೇ 110.07, ಒಟ್ಟಾರೆ ಪ್ರಗತಿ ಮ್ಯಾಪಿಂಗ್ ಪೂಜಿಣಿ ಶೇ 92.59 ರಷ್ಟಾಗಿದೆ. ಕ್ಷೇತ್ರವಾರು ಮ್ಯಾಪಿಂಗ್ ವಿವರ ನೋಡುವುದಾದರೆ, ಹಡಗಲಿ ಶೇ 89.30, ಹಾಗು ಹಗರಿಬೊಮ್ಮನಹಳ್ಳಿ ಕ್ಷೇತ್ರದಲ್ಲಿ ಶೇ 91.05, ವಿಜಯನಗರ ಶೇ 98.58, ಕೂಡ್ಲಿಗಿ 95.70, ಹರಪನಹಳ್ಳಿ ಶೇ 87.58 ರಷ್ಟು ಪ್ರಗತಿಯಾಗಿದೆ. ಪ್ರಸ್ತುತ ಜಿಲ್ಲೆಯಲ್ಲಿನ ಐದು ವಿಧಾನಸಭಾ ಕ್ಷೇತ್ರಗಳಿಂದ 1234 ಮತಗಟ್ಟೆಗಳಿದ್ದು 5,65,999 ಪುರುಷ, 5,76,735 ಮಹಿಳಾ, 127 ಇತರೆ ಸೇರಿ 11,42,861 ಮತದಾರರಿದ್ದಾರೆ.

## ಜಮೀರ್ ಖಾನ್ ಗೆ ಸಚಿವ ಸ್ಥಾನಕ್ಕೆ ಒತ್ತಾಯಿಸಿ-ಪ್ರತಿಭಟನೆ

• **ಉದಯವಾಹಿನಿ, ಹೊಸಪೇಟೆ.**

ಮಾಜಿ ಸಚಿವ ಹಾಗೂ ಶಾಸಕ ಬಿ.ಜೆಡ್.ಜಮೀರ್ ಅಹಮದ್ ಖಾನ್ ಗೆ ಸಚಿವ ಸ್ಥಾನ ನೀಡುವಂತೆ ಒತ್ತಾಯಿಸಿ, ನಗರದಲ್ಲಿ ಮುಸ್ಲಿಂ ಸಮುದಾಯದಿಂದ ಪ್ರತಿಭಟನೆ ನಡೆಸಲಾಯಿತು. ನಗರದ ಡಾ.ಪುನೀತ್ ರಾಜ್ ಕುಮಾರ್ ವೃತ್ತದಲ್ಲಿ ಮುಸ್ಲಿಂ ಬಾಂಧವರು ಹೊಸಪೇಟೆ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಹೆಚ್.ಎನ್.ಮೊಹಮದ್ ಇಮಾಮ್ ನಿಯಾಜಿ ನೇತೃತ್ವದಲ್ಲಿ ಜಮೀರ್ ಅಹಮದ್ ಖಾನ್ ಗೆ ಸಚಿವ ಸ್ಥಾನ ನೀಡುವಂತೆ ಒತ್ತಾಯಿಸಿ ರಸ್ತೆತಡೆ ಪ್ರತಿಭಟನೆ ನಡೆಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಹುಡಾ ಅಧ್ಯಕ್ಷ ಹೆಚ್.ಎನ್.ಮೊಹಮದ್ ಇಮಾಮ್ ನಿಯಾಜಿ, ರಾಜ್ಯದ ಮುಸ್ಲಿಂ ಸಮುದಾಯದ ಮುಖಂಡರಾದ ಜಮೀರ್ ಅಹಮದ್ ಖಾನ್, ಕಾಂಗ್ರೆಸ್ ಪಕ್ಷದ ಶಿಸ್ತಿನ ಸಿಪಾಯಿ ಆಗಿದ್ದಾರೆ. ಪಕ್ಷ ಸಂಘಟನೆ, ಚುನಾವಣೆ ಸೇರಿದಂತೆ ತಮಗೆ ವಹಿಸಿದ ಪಕ್ಷದ ಎಲ್ಲಾ ಕೆಲಸಗಳನ್ನು ಉತ್ತಮವಾಗಿ ನಿಭಾಯಿಸಿ ಸಮರ್ಥ ನಾಯಕ ಎನಿಸಿಕೊಂಡಿದ್ದಾರೆ. ಎಲ್ಲಾ ಸಮಾಜದ ಬಡವರಿಗೂ ಆರ್ಥಿಕ ನೆರವು ನೀಡುವ ಮೂಲಕ



ಉದಯವಾಹಿನಿ ಚಿತ್ರ

ಎಲ್ಲಾ ಸಮಾಜದ ಮುಖಂಡರೊಂದಿಗೆ ಉತ್ತಮ ಬಾಂಧವ್ಯ ಹೊಂದಿದ್ದಾರೆ. ಈ ಹಿನ್ನಲೆಯಲ್ಲಿ ಜಮೀರ್ ಅಹಮದ್ ಅವರಿಗೆ ಸಚಿವ ಸ್ಥಾನ ನೀಡುವ ಜೊತೆಗೆ ಉಪಮುಖ್ಯಮಂತ್ರಿ ಸ್ಥಾನ ನೀಡಬೇಕು ಎಂದು ಒತ್ತಾಯಿಸಿದರು.


ಜಮೀರ್ ಅಹಮದ್ ಅವರಿಗೆ ಸಚಿವ ಸ್ಥಾನ ನೀಡದೆ ಹೋದರೆ ಅದು ಕಾಂಗ್ರೆಸ್ ಪಕ್ಷಕ್ಕೆ ನಷ್ಟವನ್ನುಂಟು ಮಾಡಲಿದೆ. ಈ ದೃಷ್ಟಿಯಿಂದ ಎರಡನೇ ಕಂತಿನ ಸಚಿವ ಸಂಪುಟದಲ್ಲಿ ಸಚಿವ ಸ್ಥಾನ ನೀಡಬೇಕು ಎಂದು ಕಾಂಗ್ರೆಸ್ ಪಕ್ಷದ ಹೈಕಮಾಂಡನ್ನು ಒತ್ತಾಯಿಸಿದರು.

## ‘ಸಂಸ್ಕಾರ-ಸಂಸ್ಕೃತಿ’ ಶಿಕ್ಷಣ ಇಂದಿನ ಅಗತ್ಯ - ಡಿವಿಎಸ್

• **ಉದಯವಾಹಿನಿ, ಪುತ್ತೂರು**

ಹಣ ಮಾಡುವ ಉದ್ದೇಶದಿಂದ ಶಿಕ್ಷಣ ಸಂಸ್ಥೆಗಳನ್ನು ಮಾಡಿದರೆ ಅವರು ಸಮಾಜಕ್ಕೆ ದ್ರೋಹ ಬಗೆದಂತೆ. ಇಂದಿನ ವೇಗದ ಜೀವನದಲ್ಲಿ ಇಂಗ್ಲೀಷ್ ಭಾಷೆಯ ಶಿಕ್ಷಣ ಅಗತ್ಯ. ಹಾಗಂತ ಕನ್ನಡವನ್ನು ದೂರ ಇಡಬಾರದು. ಹೊಸ ಕಲ್ಪನೆಗಳ ಸಾಕಾರಕ್ಕೆ ಸಂಸ್ಕೃತಿ ಮತ್ತು ಸಂಸ್ಕಾರಗಳನ್ನು ಒಳಗೊಂಡ ಶಿಕ್ಷಣ ಅತೀ ಅಗತ್ಯವಾಗಿದೆ. ಕೇಂದ್ರದ ಹೊಸಶಿಕ್ಷಣ ನೀತಿ ಗುಲಾಮಗಿರಿ ಮನೋಭಾವನೆಯಿಂದ ನಾವು ಹೊರಬರಲು ಮಾಡಿದ್ದಾಗಿದೆ ಎಂದು ಮಾಜಿ ಮುಖ್ಯಮಂತ್ರಿ ಡಿ.ವಿ.ಸದಾನಂದ ಗೌಡ ಅಭಿಪ್ರಾಯಪಟ್ಟರು. ಅವರು ಬನ್ನೂರು ಕೃಷ್ಣನಗರದ ಅಲುಂಬುಡ ಎವಿಜಿ ಆಂಗ್ಲ ಮಾಧ್ಯಮ ಶಾಲೆಯ 2026-27ನೇ ಸಾಲಿನ ಶೈಕ್ಷಣಿಕ ಸಾಲಿನ ಆರಂಭೋತ್ಸವವನ್ನು ಉದ್ಘಾಟಿಸಿ ಮಾತನಾಡಿದರು.

ದೇಶದ ಮಕ್ಕಳ ವ್ಯಕ್ತಿತ್ವ ವಿಕಸನದ ಜತೆಗೆ ಮಾನವ ಸಂಪನ್ಮೂಲವನ್ನು ಸಾಮಾಜಿಕ ಶಕ್ತಿಯಾಗಿ ಪರಿವರ್ತಿಸುವ ಪ್ರಯತ್ನವಾಗಬೇಕಿದೆ. ನಮ್ಮ ಅಸ್ತಿತ್ವವನ್ನು ಉಳಿಸಲು ಸವಾಲುಗಳನ್ನು ಎದುರಿಸುವ ಗುಣವನ್ನು ಹೊಂದಬೇಕಿದ್ದು, ಹಣ ಸಂಪಾದನೆಯೇ ಶಿಕ್ಷಣದ





ಉದಯವಾಹಿನಿ ಚಿತ್ರ

ಉದ್ದೇಶವಾಗಬಾರದು. ಒಂದು ಕನಸನ್ನು ನನಸು ಮಾಡುವ ನಿಟ್ಟಿನಲ್ಲಿ ಎವಿಜಿ ವಿದ್ಯಾಸಂಸ್ಥೆಯ ಪ್ರಯತ್ನ ವಿಶೇಷವಾಗಿದ್ದು, ಉನ್ನತ ಶಿಕ್ಷಣ ಸಂಸ್ಥೆಯಾಗಿ ಬೆಳೆಯಲಿ ಎಂದರು.

ಅಧ್ಯಕ್ಷತೆ ವಹಿಸಿದ್ದ ಶಾಲೆಯ ಆಡಳಿತ ಮಂಡಳಿ ಅಧ್ಯಕ್ಷ ವೆಂಕಟ್ರಮಣ ಗೌಡ ಕಳುವಾಜೆ ಮಾತನಾಡಿ, ಗ್ರಾಮೀಣ ಭಾಗದ ಮಕ್ಕಳಿಗೆ ಪಠ್ಯದ ಜತೆಗೆ ಸಂಸ್ಕಾರಯುತ ಶಿಕ್ಷಣ, ರಾಷ್ಟ್ರ ಮೊದಲು ಎಂಬ ಮೌಲ್ಯದ ಬೋಧನೆಯನ್ನು ನೀಡಲಾಗುತ್ತಿದೆ. ಅಂಕಕ್ಕಿಂತಲೂ ಸಂಸ್ಕೃತಿ, ಸಂಸ್ಕಾರಯುತ ವ್ಯಕ್ತಿಯನ್ನು ರಾಷ್ಟ್ರಕ್ಕೆ ಸಮರ್ಪಿಸುವ ಕಾರ್ಯವನ್ನು ಸಂಸ್ಥೆ ಮಾಡಲಿದೆ ಎಂದರು.

## ಕಡ್ಡಾಯ ಬೀಜೋಪಚಾರದಿಂದ ಅಧಿಕ ಇಳುವರಿ ಸಾಧ್ಯ

• **ಉದಯವಾಹಿನಿ, ಬೀದರ್**

ಬೀದರ ಜಿಲ್ಲೆಯಲ್ಲಿ ಉತ್ತಮ ಮಳೆಯಾಗಿದ್ದು, ಅನೇಕ ರೈತರು ಮುಂಗಾರು ಹಂಗಾಮಿನ ಬಿತ್ತನೆಕಾರ್ಯವನ್ನುಕೈಗೊಂಡಿದ್ದಾರೆ. ಇನ್ನೂ ಹಲವಾರುರೈತರು ಬಿತ್ತನೆಗೆ ಸಿದ್ಧತೆ ನಡೆಸುತ್ತಿದ್ದಾರೆ.

ಬದಲಾಗುತ್ತಿರುವ ಹವಾಮಾನ ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು, ನಮ್ಮ ಪ್ರದೇಶಕ್ಕೆ ಸೂಕ್ತವಾದ ಬೆಳೆಗಳು ಹಾಗೂ ಅಧಿಕ ಇಳುವರಿ ನೀಡುವ ತಳಿಗಳನ್ನು ಆಯ್ಕೆ ಮಾಡಿಕೊಂಡು, ನೂತನ ಕೃಷಿ ತಂತ್ರಜ್ಞಾನಗಳನ್ನು ಅಳವಡಿಸಿಕೊಂಡಲ್ಲಿ ಉತ್ತಮ ಉತ್ಪಾದನೆ ಪಡೆಯಲು ಸಾಧ್ಯವಾಗುತ್ತದೆ ಎಂದು ಬೀದರ ಐಸಿಎಆರ್ ಕೃಷಿ ವಿಜ್ಞಾನ ಕೇಂದ್ರ ಹಿರಿಯ ವಿಜ್ಞಾನಿ ಮತ್ತು ಮುಖ್ಯಸ್ಥರು ಅವರು ತಿಳಿಸಿದ್ದಾರೆ. ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ ಹೆಸರು ಹಾಗೂ ಉದ್ದು ಬೆಳೆಗಳನ್ನು ಬಿತ್ತನೆ ಮಾಡಲು ಸಿದ್ಧತೆ ನಡೆಸುತ್ತಿರುವರೈತರು, ಉತ್ತಮ ಇಳುವರಿ ಹಾಗೂ ರೋಗಮುಕ್ತ ಬೆಳೆ ಪಡೆಯಲುಕಡ್ಡಾಯವಾಗಿ ಬೀಜೋಪಚಾರ ಕೈಗೊಳ್ಳಬೇಕು. ಬಿತ್ತನೆಗೆ ಮುನ್ನ ಬೀಜಗಳಿಗೆ ಜೈವಿಕ ಗೊಬ್ಬರಗಳು ಹಾಗೂ ಕೀಟನಾಶಕಗಳಿಂದ ಉಪಚರಿಸುವುದರಿಂದಆರಂಭಿಕ ಹಂತದಲ್ಲಿಕಂಡುಬರುವರೋಗ ಹಾಗೂ ಕೀಟಗಳ ಬಾಧೆಯನ್ನು ಪರಿಣಾಮಕಾರಿಯಾಗಿತಡೆಗಟ್ಟಬಹುದು. ಜೊತೆಗೆಜೈವಿಕ ಗೊಬ್ಬರಗಳ ಬಳಕೆಯು ಮಣ್ಣಿನ ಫಲವತ್ತತೆಯನ್ನು ಹೆಚ್ಚಿಸಿ ಸಸ್ಯಗಳಿಗೆ ಅಗತ್ಯ ಪೋಷಕಾಂಶಗಳ ಲಭ್ಯತೆಯನ್ನು ಸುಧಾರಿಸುತ್ತದೆ. ಜೈವಿಕ ಹಾಗೂ ರಾಸಾಯನಿಕಗಳ ಸಂಯೋಜಿತ ಬೀಜೋಪಚಾರದಿಂದ ಬೀಜಗಳ ಮೊಳಕೆ ಪ್ರಮಾಣ ಹೆಚ್ಚುವುದರಜೊತೆಗೆ, ಸಸಿಗಳು ಆರೋಗ್ಯಕರವಾಗಿ ಬೆಳೆಯಲು ನೆರವಾಗುತ್ತದೆ. ರೋಗ ಹಾಗೂ



ಉದಯವಾಹಿನಿ ಚಿತ್ರ

**ಹೆಸರು ಹಾಗೂ ಉದ್ದು ಬೆಳೆಗಳಿಗೆ ಪ್ರತಿಎಕರೆಗೆ ಬೇಕಾಗುವ ಬೀಜಕ್ಕೆ ಜೈವಿಕ ಗೊಬ್ಬರಗಳಾದ ರೈಜೋಬಿಯಂ ಮತ್ತು ರಂಜಕ ಕರಗಿಸುವ ಅಣುಜೀವಿ ಗೊಬ್ಬರ (ಪಿ.ಎಸ್.ಬಿ.) ತಲಾ 200 ಗ್ರಾಂ ಪ್ರಮಾಣದಲ್ಲಿ ಮಿಶ್ರಣ ಮಾಡಿ ಬೀಜೋಪಚಾರ ಮಾಡಬೇಕು. ಇದರೊಂದಿಗೆಜೈವಿಕ ಶಿಲೀಂಧ್ರನಾಶಕವಾದ ಟ್ರೈಕೋಡರ್ಮಾವನ್ನು ಪ್ರತಿಎಕರೆಗೆ ಬೇಕಾಗುವ ಬೀಜಕ್ಕೆ 20 ಗ್ರಾಂ ಪ್ರಮಾಣದಲ್ಲಿ ಉಪಚರಿಸುವುದು ಅತ್ಯಗತ್ಯವಾಗಿದೆ. ಕೃಷಿ ಹಿರಿಯ ವಿಜ್ಞಾನಿ ಕಡ್ಡಾಯ ಬೀಜೋಪಚಾರದಿಂದ ಅಧಿಕ ಇಳುವರಿ ಸಾಧ್ಯ.**

ಕೀಟಗಳ ಬಾಧೆಕಡಿಮೆಯಾಗುವುದರಿಂದಉತ್ತಮ ಇಳುವರಿ ಪಡೆಯಲು ಸಾಧ್ಯವಾಗುತ್ತದೆ. ರೈತ ಬಾಂಧವರು ಹೆಸರು ಹಾಗೂ ಉದ್ದು ಬೆಳೆಗಳಲ್ಲಿ ಈ ಸುಧಾರಿತ ಬೀಜೋಪಚಾರ ತಂತ್ರಜ್ಞಾನವನ್ನು ಕಡ್ಡಾಯವಾಗಿ ಅಳವಡಿಸಿಕೊಂಡು, ಉತ್ತಮ ಉತ್ಪಾದನೆ ಹಾಗೂ ಹೆಚ್ಚಿನಆದಾಯವನ್ನು ಪಡೆಯುವಂತೆ ಕೃಷಿ ತಜ್ಞರು ಮನವಿ ಮಾಡಿದ್ದಾರೆ.

## ಬಾವಿ ಸ್ವಚ್ಚಗೊಳಿಸುತ್ತಿದ್ದಾಗ ಆಯತಪ್ಪಿ ಬಿದ್ದ ವ್ಯಕ್ತಿ

• **ಉದಯವಾಹಿನಿ, ಸುಳ್ಯ**

ತಾಲ್ಲೂಕಿನ ಸುಳ್ಯ ಪಟ್ಟಣದ ದುಗಲಡ್ಕ ಸಮೀಪದ ಕಂದಡ್ಕ ಎಂಬಲ್ಲಿ ಆಕಸ್ಮಿಕವಾಗಿ 40 ಅಡಿ ಆಳದ ಬಾವಿಗೆ ಬಿದ್ದ ವ್ಯಕ್ತಿಯೊಬ್ಬರನ್ನು ಅಗ್ನಿಶಾಮಕ ಸಿಬ್ಬಂದಿ ಅತ್ಯಂತ ಯಶಸ್ವಿ ತುರ್ತು ಕಾರ್ಯಾಚರಣೆಯ ಮೂಲಕ ರಕ್ಷಿಸಿದ ಘಟನೆ ನಡೆದಿದೆ.ದುಗಲಡ್ಕ ವಾರ್ಡ್‌ನ ಕಂದಡ್ಕ ನಿವಾಸಿ ನವೀನ್ ಕುಮಾರ್ ಎಂಬುವವರು ತಮ್ಮ ಮನೆಯ ಸುಮಾರು 40 ಅಡಿ ಆಳದ ಬಾವಿಯನ್ನು ಸ್ವಚ್ಚಗೊಳಿಸುತ್ತಿದ್ದಾಗ ಆಯತಪ್ಪಿ ಬಿದ್ದಿದ್ದರು. ವಿಷಯ ತಿಳಿಯುತ್ತಿದ್ದಂತೆ ತಕ್ಷಣ ಕಾರ್ಯಪ್ರವೃತ್ತರಾದ ಸುಳ್ಯ ಅಗ್ನಿಶಾಮಕ ಠಾಣೆಯ ಅಧಿಕಾರಿಗಳು ಮತ್ತು ಸಿಬ್ಬಂದಿ ಸ್ಥಳಕ್ಕೆ ಧಾವಿಸಿದ್ದಾರೆ. ಬಾವಿಯಲ್ಲಿ ಜೀವನ್ಮರಣದ ಹೋರಾಟ ನಡೆಸುತ್ತಿದ್ದ ನವೀನ್ ಕುಮಾರ್ ಅವರನ್ನು ಅಗ್ನಿಶಾಮಕ ಸಿಬ್ಬಂದಿ ಅತ್ಯಂತ ಜಾಗರೂಕತೆಯಿಂದ, ಸುರಕ್ಷಿತವಾಗಿ ಬಾವಿಯಿಂದ ಮೇಲಕ್ಕೆತ್ತುವಲ್ಲಿ ಯಶಸ್ವಿಯಾಗಿದ್ದಾರೆ. ಬಾವಿಯಿಂದ ಹೊರತೆಗೆದ ತಕ್ಷಣವೇ ಅವರನ್ನು ಹೆಚ್ಚಿನ ಚಿಕಿತ್ಸೆಗಾಗಿ ಸರಕಾರಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಸದ್ಯ ನವೀನ್ ಕುಮಾರ್ ಅವರು ಚೇತರಿಸಿಕೊಳ್ಳುತ್ತಿದ್ದಾರೆ ಸುಳ್ಯ ಅಗ್ನಿಶಾಮಕ ಠಾಣಾಧಿಕಾರಿ ಕಿರಣ್ ಕುಮಾರ್ ಅವರ ನೇತೃತ್ವದಲ್ಲಿ ಈ ಯಶಸ್ವಿ ರಕ್ಷಣಾ ಕಾರ್ಯಾಚರಣೆ ನಡೆದಿದೆ.

## ಪ್ಲಾಸ್ಟಿಕ್ ಮಾಲಿನ್ಯವನ್ನು ಕೊನೆಗಾಣಿಸೋಣ, ಹಸಿರನ್ನು ಬೆಳೆಸೋಣ: ನಾರಾಯಣ ಶಾಸ್ತ್ರಿ

• **ಉದಯವಾಹಿನಿ, ಜಮಖಂಡಿ:**

ಪ್ಲಾಸ್ಟಿಕ್ ಮಾಲಿನ್ಯವು ಇಂದಿನ ಜಗತ್ತಿನ ಅತಿದೊಡ್ಡ ಸಮಸ್ಯೆಯಾಗಿದ್ದು, ವಿದ್ಯಾರ್ಥಿಗಳು ಪ್ಲಾಸ್ಟಿಕ್ ಬಳಕೆಯನ್ನು ನಿಷೇಧಿಸುವ ಸಂಕಲ್ಪದೊಂದಿಗೆ ಪರಿಸರ ಸಂರಕ್ಷಣೆಗೆ ಮುಂದಾಗಬೇಕು ಎಂದು ಕುಂಬಾರಹಳ್ಳ ಪಿಎಂ ಶ್ರೀ ಕರ್ನಾಟಕ ಪಬ್ಲಿಕ್ ಶಾಲೆಯ ಮುಖ್ಯೋಪಾಧ್ಯಾಯ ನಾರಾಯಣ ಶಾಸ್ತ್ರಿ ಹೇಳಿದರು.ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಶಾಲೆಯ ಚಾರ್ಲ್ಸ್ ಡಾರ್ವಿನ್ ಇಕೋ ಕ್ಲಬ್ ವತಿಯಿಂದ ಆಯೋಜಿಸಲಾದ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಪರಿಸರ ಚೆನ್ನಾಗಿದ್ದರೆ ಮಾತ್ರ ಮಾನವ ಜೀವನ ಸುಖಮಯವಾಗಿರಲು ಸಾಧ್ಯ.

ಮರಗಳು ದೇವರು ಕೊಟ್ಟ ಅಮೂಲ್ಯ ವರಗಳಾಗಿದ್ದು,



ಉದಯವಾಹಿನಿ ಚಿತ್ರ

ಪ್ರತಿಯೊಬ್ಬರೂ ಒಂದೊಂದು ಗಿಡ ನೆಟ್ಟು ಅದನ್ನು ಪ್ರೀತಿಯಿಂದ ಪೋಷಿಸಬೇಕು ಎಂದು ಕರೆ ನೀಡಿದರು.

ಶಿಕ್ಷಕ ಸಂಗನಬಸವ ಉಟಗಿ ಮಾತನಾಡಿ, ಇಂದು ನೆಟ್ಟ ಗಿಡ ಮುಂದಿನ ದಿನಗಳಲ್ಲಿ ಮರವಾಗಿ ಬೆಳೆದು ಹಣ್ಣು, ನೆರಳು ಮತ್ತು ಶುದ್ಧ ಗಾಳಿಯನ್ನು ನೀಡುತ್ತದೆ. ವಿದ್ಯಾರ್ಥಿಗಳ ಬೌದ್ಧಿಕ, ಮಾನಸಿಕ ಹಾಗೂ ದೈಹಿಕ ಬೆಳವಣಿಗೆಯಲ್ಲಿ ಪರಿಸರದ ಪಾತ್ರ ಮಹತ್ವದ್ದಾಗಿದೆ ಎಂದರು.

ಇಕೋ ಕ್ಲಬ್ ಮಾರ್ಗದರ್ಶಕ ಶಿಕ್ಷಕಿ ಆಸೀಫಾಬಾನು ಮೋಮಿನ್ ಮಾತನಾಡಿ, ನಮಗಿರುವ ಒಂದೇ ಒಂದು ಪರಿಸರವನ್ನು ರಕ್ಷಿಸಿ ಮುಂದಿನ ಪೀಳಿಗೆಗೆ ಉಳಿಸುವ ಜವಾಬ್ದಾರಿ ಪ್ರತಿಯೊಬ್ಬರ ಮೇಲಿದೆ. ಪರಿಸರ ಸಂರಕ್ಷಣೆಯ ಕುರಿತು ಎಲ್ಲರೂ ಜಾಗೃತಿ ಮೂಡಿಸಬೇಕು ಎಂದು ಹೇಳಿದರು. ಶಿಕ್ಷಕ ಅಶೋಕ್ ಬಿರಾದಾರ ಪಾಟೀಲ ಮಾತನಾಡಿ, ಪರಿಸರ ನಮಗೆ ಬದುಕಿಗೆ ಅಗತ್ಯವಾದ ಎಲ್ಲವನ್ನೂ ನೀಡಿದೆ.

ಆದ್ದರಿಂದ ಅದನ್ನು ಸ್ವಚ್ಛ ಹಾಗೂ ಶುದ್ಧವಾಗಿ ಕಾಪಾಡಲು ಎಲ್ಲರೂ ಕೈಜೋಡಿಸಬೇಕು ಎಂದು ತಿಳಿಸಿದರು. ವಿದ್ಯಾರ್ಥಿಗಳಾದ ಸುಧಾ ದಡ್ಡಿಮನಿ ಹಾಗೂ ಮಧು ತೋಳಮಟ್ಟಿ ಪರಿಸರ ದಿನಾಚರಣೆಯ ಮಹತ್ವದ ಕುರಿತು ಮಾತನಾಡಿದರು.

## ಮುಂಗಾರು ಪೂರ್ವ ಮಳೆ, ಗಾಳಿಯಿಂದ ಮೆಸ್ಕಾಂಗೆ 11.73 ಕೋಟಿ ರೂ. ನಷ್ಟ

• **ಉದಯವಾಹಿನಿ, ಮಂಗಳೂರು**



ಉದಯವಾಹಿನಿ ಚಿತ್ರ

ಏಪ್ರಿಲ್ 1 ರಿಂದ ಜೂನ್ 1 ರವರೆಗೆ ತನ್ನ ವ್ಯಾಪ್ತಿಯಲ್ಲಿ ಮುಂಗಾರು ಪೂರ್ವ ಮಳೆ ಮತ್ತು ಬಲವಾದ ಗಾಳಿಯಿಂದ ಉಂಟಾದ ವ್ಯಾಪಕ ಹಾನಿಯಿಂದಾಗಿ ಮಂಗಳೂರು ವಿದ್ಯುತ್ ಸರಬರಾಜು ಕಂಪನಿ ಲಿಮಿಟೆಡ್ (ಮೆಸ್ಕಾಂ) 11.73 ಕೋಟಿ ರೂ. ನಷ್ಟವನ್ನು ಅನುಭವಿಸಿದೆ.

ದಕ್ಷಿಣ ಕನ್ನಡ, ಉಡುಪಿ, ಚಿಕ್ಕಮಗಳೂರು ಮತ್ತು ಶಿವಮೊಗ್ಗ ಜಿಲ್ಲೆಗಳಲ್ಲಿ ಕಂಬಗಳು, ಟ್ರಾನ್ಸ್‌ಫಾರ್ಮರ್‌ಗಳು ಮತ್ತು ವಿದ್ಯುತ್ ಲೈನ್‌ಗಳು ಸೇರಿದಂತೆ ವಿದ್ಯುತ್ ಮೂಲಸೌಕರ್ಯಗಳಿಗೆ ಗಮನಾರ್ಹ ಹಾನಿಯಾಗಿದೆ ಎಂದು ಮೆಸ್ಕಾಂ ಪ್ರಕಟಣೆಯಲ್ಲಿ ತಿಳಿಸಿದೆ.

ಚಿಕ್ಕಮಗಳೂರು ಜಿಲ್ಲೆಯಲ್ಲಿ ಅತಿ ಹೆಚ್ಚು ಆರ್ಥಿಕ ನಷ್ಟ ವರದಿಯಾಗಿದ್ದು, ಅಲ್ಲಿ 321.40 ಲಕ್ಷ ರೂ. ಮೌಲ್ಯದ ಆಸ್ತಿ ಹಾನಿಯಾಗಿದೆ, ನಂತರ ದಕ್ಷಿಣ ಕನ್ನಡದಲ್ಲಿ 318.66 ಲಕ್ಷ ರೂ. ನಷ್ಟವಾಗಿದೆ. ಶಿವಮೊಗ್ಗದಲ್ಲಿ 312 ಲಕ್ಷ ರೂ. ನಷ್ಟವಾಗಿದ್ದರೆ, ಉಡುಪಿ ಜಿಲ್ಲೆಯಲ್ಲಿ 221.62 ಲಕ್ಷ ರೂ. ನಷ್ಟ ಸಂಭವಿಸಿದೆ. ಈ ಅವಧಿಯಲ್ಲಿ ಒಟ್ಟು 8,147 ವಿದ್ಯುತ್ ಕಂಬಗಳು ಹಾನಿಗೊಳಗಾಗಿವೆ.

ಶಿವಮೊಗ್ಗ ಜಿಲ್ಲೆಯಲ್ಲಿ ಅತಿ ಹೆಚ್ಚು 2,797 ಕಂಬಗಳು ಹಾನಿಗೊಳಗಾಗಿದ್ದು, ದಕ್ಷಿಣ ಕನ್ನಡದಲ್ಲಿ 2,438 ಕಂಬಗಳು, ಉಡುಪಿಯಲ್ಲಿ 1,031 ಕಂಬಗಳು ಮತ್ತು ಚಿಕ್ಕಮಗಳೂರಿನಲ್ಲಿ 881 ಕಂಬಗಳು ಹಾನಿಯಾಗಿವೆ. ಹಾನಿಗೊಳಗಾದ ಎಲ್ಲಾ ಕಂಬಗಳನ್ನು ಬದಲಾಯಿಸಲಾಗಿದೆ ಎಂದು ಮೆಸ್ಕಾಂ ತಿಳಿಸಿದೆ.ವಿದ್ಯುತ್ ಪರಿವರ್ತಕಗಳಿಗೂ ಹಾನಿಯಾಗಿದೆ ಎಂದು ಯುಟಿಲಿಟಿ ವರದಿ ಮಾಡಿದೆ, ದಕ್ಷಿಣ ಕನ್ನಡ ಜಿಲ್ಲೆಯಲ್ಲಿ 12,ಶಿವಮೊಗ್ಗ ಜಿಲ್ಲೆಯಲ್ಲಿ 17 ಟ್ರಾನ್ಸ್‌ಫಾರ್ಮರ್‌ಗಳು ಹಾನಿಗೊಳಗಾಗಿವೆ.

## ಶಿವಮೊಗ್ಗ ನಗರದಲ್ಲಿ ಯಶಸ್ವಿ ಮಾಕ್ ಡ್ರಿಲ್

• **ಉದಯವಾಹಿನಿ, ಶಿವಮೊಗ್ಗ**

ದೇಶದ ರಕ್ಷಣಾ ಸಿದ್ಧತೆಯನ್ನು ಬಲಪಡಿಸುವ ಹಾಗೂ ತುರ್ತು ಪರಿಸ್ಥಿತಿಗಳನ್ನು ಎದುರಿಸುವ ಸಿದ್ಧತೆಯ ಭಾಗವಾಗಿ, ಶಿವಮೊಗ್ಗ ನಗರದಲ್ಲಿ ವೈಮಾನಿಕ ದಾಳಿ ಹಾಗೂ ತುರ್ತು ಸಂದರ್ಭದಲ್ಲಿ ಕೈಗೊಳ್ಳಬೇಕಾದ ಸುರಕ್ಷತಾ ಕ್ರಮಗಳ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಮತ್ತು ಇಲಾಖೆಗಳ ಸನ್ನದ್ಧತೆಯನ್ನು ಪರಿಶೀಲಿಸಲು ನಗರದ ನೆಹರು ಕ್ರೀಡಾಂಗಣದಲ್ಲಿ ಏರ್ಪಡಿಸಲಾಗಿದ್ದ 'ಮಾಕ್ ಡ್ರಿಲ್' (ಅಣಕು ಪ್ರದರ್ಶನ) ಯಶಸ್ವಿಯಾಗಿ ಜರುಗಿತು. 2026 ನೇ ಸಾಲಿನಲ್ಲಿ ರಾಷ್ಟ್ರಮಟ್ಟದಲ್ಲಿ ನಾಗರೀಕ ರಕ್ಷಣೆ, ವೈಮಾನಿಕ ದಾಳಿ ಮತ್ತು ಕರಾಳ ರಾತ್ರಿ ಅಣಕು ಪ್ರದರ್ಶನ ನಡೆಸಲು ಈ ಪ್ರದರ್ಶನವನ್ನು ಯಶಸ್ವಿಯಾಗಿ ಕೈಗೊಳ್ಳಲಾಯಿತು. ಅಣಕು ಪ್ರದರ್ಶನದ ಆರಂಭದಲ್ಲಿ ಶತ್ರುಗಳ ವಾಯುದಾಳಿಯ ಮುನ್ಸೂಚನೆ ನೀಡುವಂತೆ ‘ಕೋಡ್ ರೆಡ್’ ಎಚ್ಚರಿಕೆಯ 2 ನಿಮಿಷಗಳ ಸೈರನ್ ಮೊಳಗಿಸಲಾಯಿತು. ದಾಳಿಯಿಂದ ಕಟ್ಟಡಗಳು ಧರಾಶಾಯಿಯಾದಾಗ ಸಾರ್ವಜನಿಕರನ್ನು ಸುರಕ್ಷಿತವಾಗಿ ಸ್ಥಳಾಂತರಿಸುವುದು, ಅವಶೇಷಗಳಡಿ ಸಿಲುಕಿದವರನ್ನು ಹುಡುಕಿ ರಕ್ಷಿಸುವುದು ಹಾಗೂ ಗಾಯಾಳುಗಳಿಗೆ ತಕ್ಷಣವೇ ತಾತ್ಕಾಲಿಕ ವೈದ್ಯಕೀಯ ಶಿಬಿರದಲ್ಲಿ ಪ್ರಥಮ ಚಿಕಿತ್ಸೆ ನೀಡಿ, ಆಂಬ್ಯುಲೆನ್ಸ್ ಮೂಲಕ ಆಸ್ಪತ್ರೆಗೆ ರವಾನಿಸುವ , ನಂತರ ಸ್ಥಳ ಪರಿಶೀಲನೆ ಕೈಗೊಳ್ಳುವ, ಐಇಡಿ ಲಭ್ಯವಾಗಿದ್ದು, ಬಾಂಬ್ ಕಿಲ್ಲರ್ ನ್ನು ತೆಗೆದು ಸೇಫ್ ಡಿಸ್ ಪೋಸಬಲ್ ಏರಿಯಾಗೆ ತರಲಾದ ಹಾಗೂ ಬಿಡಿಎಸ್ ಅಧಿಕಾರಿಗಳುಮತ್ತು ಸೊಕೊ ತಂಡ ಕಾರ್ಯಾಚರಣೆ ಕುರಿತು ಉನ್ನತ ಅಧಿಕಾರಿಗಳಿಗೆ ವರದಿ ನೀಡಿದ ಹಾಗೂ ಉನ್ನತ ಅಧಿಕಾರಿಗಳು ಹೆಚ್ಚಿನ ತನಿಖೆಗೆ ಆದೇಶಿದ ಪ್ರಾತ್ಯಕ್ಷಿಕೆ ನಡೆಸಲಾಯಿತು.

# ರಾಜ್ಯಕ್ಕೆ ಮುಂಗಾರು ಪ್ರವೇಶ : ರೈತರಿಗೆ ಬಿತ್ತನೆ ಕಾರ್ಯಕ್ಕೆ ಸೂಚನೆ

## ರಾಜ್ಯಕ್ಕೆ ಮುಂಗಾರು ಆಗಮನಕ್ಕೆ ಕ್ಷಣಗಣನೆ ಆರಂಭ , ರೈತರು ಬಿತ್ತನೆ ಕಾರ್ಯ ಮಾಡಲು ಹವಾಮಾನ ಇಲಾಖೆ ವಿಜ್ಞಾನಿಗಳು ಸೂಚನೆ

• **ಉದಯವಾಹಿನಿ, ಧಾರವಾಡ:**

ರಾಜ್ಯಕ್ಕೆ ಮುಂಗಾರು ಪ್ರವೇಶವಾಗಿದ್ದು, ರೈತರು ಬಿತ್ತನೆ ಕಾರ್ಯ ಮಾಡಲು ಹವಾಮಾನ ಇಲಾಖೆ ವಿಜ್ಞಾನಿಗಳು ಸೂಚನೆ ನೀಡಿದ್ದಾರೆ.ಕೇರಳಕ್ಕೆ ಮುಂಗಾರು ಮಳೆ ತಡವಾಗಿ ಪ್ರವೇಶವಾದರೂ, ರಾಜ್ಯಕ್ಕೆ ಸಮಯಕ್ಕೆ ಸರಿಯಾಗಿ ಪ್ರವೇಶವಾಗಿದೆ. ಮುಂದಿನ ನಾಲ್ಕೈದು ದಿನಗಳಲ್ಲಿ ಕರಾವಳಿ ಮತ್ತು ಮಲೆನಾಡು ಪ್ರದೇಶದಲ್ಲಿ ವ್ಯಾಪಕ ಮಳೆಯಾಗುವ ಸಾದ್ಯತೆ ಇದೆ.

1 : ರಾಜ್ಯಕ್ಕೆ ಮುಂಗಾರು ಆಗಮನಕ್ಕೆ ಕ್ಷಣಗಣನೆ ಆರಂಭವಾಗಿದೆ
2 : ಕೇರಳಕ್ಕೆ ಮುಂಗಾರು ಮಳೆ ತಡವಾಗಿ ಪ್ರವೇಶ
3 : ದಕ್ಷಿಣ ಕನ್ನಡ ಜಿಲ್ಲೆಯ ಹಲವೆಡೆ ಭಾರೀ ಮಳೆ

ಉಳಿದ ಕಡೆ ಸಾಧಾರಣ ಮಳೆಯಾಗುವ ಸಾಧ್ಯತೆ ಇದೆ ಎಂದು ಧಾರವಾಡ ಕೃಷಿ ವಿವಿಯ ಹವಾಮಾನ ಇಲಾಖೆ ವರದಿ ಮಾಡಿದೆ. ರಾಜ್ಯಕ್ಕೆ ಮುಂಗಾರು ಆಗಮನಕ್ಕೆ ಕ್ಷಣಗಣನೆ ಆರಂಭವಾಗಿದೆ.

ಕೇರಳಂ ರಾಜ್ಯಕ್ಕೆ ಈಗಾಗಲೇ ಮುಂಗಾರು ಮಾರುತಗಳು ಅಪ್ಪಳಿಸಿದ್ದು, ರಾಜ್ಯಕ್ಕೆ ಮುಂಗಾರು ಆಗಮನಕ್ಕೆ ಕೌಂಟ್‌ಡೌನ್



ಉದಯವಾಹಿನಿ ಚಿತ್ರ

ಶುರುವಾಗಿದೆ. ಹೀಗಾಗಿ ದಕ್ಷಿಣ ಕನ್ನಡ ಜಿಲ್ಲೆಯ ಜಿಲ್ಲಾಡಳಿತ ಭಾರೀ ಮಳೆಯನ್ನು ಎದುರಿಸಲು ಸಜ್ಜಾಗಿದೆ. ಈ ನಡುವೆ ಹಲವೆಡೆ ಸುರಿದ ಭಾರೀ ಮಳೆಗೆ ಹಲವು ಅವಾಂತರಗಳು ಸೃಷ್ಟಿಯಾಗಿದೆ. ದಕ್ಷಿಣ ಕನ್ನಡ ಜಿಲ್ಲೆಯ ಹಲವೆಡೆ ಭಾರೀ ಮಳೆಯಾಗಿದ್ದು ಕೆಲವೆಡೆ ಅವಾಂತರವನ್ನೇ ಸೃಷ್ಟಿಸಿದೆ. ಮೊದಲ ಮಳೆಗೆ ರಾಷ್ಟ್ರೀಯ ಹೆದ್ದಾರಿಯ ಕಳಪೆ ಕಾಮಗಾರಿ ಅನಾವರಣಗೊಂಡಿದೆ. ಮಂಗಳೂರು-ಕಾರ್ಕಳ ರಾಷ್ಟ್ರೀಯ ಹೆದ್ದಾರಿಯ ಮಿಜಾರಿನಲ್ಲಿ ನೀರಿನ ರಭಸಕ್ಕೆ ಮಣ್ಣು ಕುಸಿದು ಜಲ್ಲಿಕಲ್ಲು ನೀರುಪಾಲಾಗಿದೆ. ಯಾವುದೇ ಕ್ಷಣದಲ್ಲೂ ಮತ್ತಷ್ಟು ಕುಸಿತ ಆಗೋ ಭೀತಿ ಎದುರಾಗಿದೆ.

ಅಪಾಯದ ನಡುವೆಯೂ ವಾಹನ ಸಂಚಾರ ಆಗುತ್ತಿದೆ. ಮೊದಲ ಮಳೆಯನ್ನೇ ತಡೆದುಕೊಳ್ಳದ ಕಾಮಗಾರಿಯ ಗುಣಮಟ್ಟ ಹೇಗಿರಬಹುದೆಂದು ಜನ ಡಿಬಿಎಲ್ ಕಂಪನಿಯ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ. ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಈಗಾಗಲೇ ಒಟ್ಟು 92 ಪ್ರವಾಹ ಪೀಡಿತ ಪ್ರದೇಶಗಳನ್ನು ಗುರುತಿಸಲಾಗಿದೆ. ಬೆಳ್ತಂಗಡಿಯಲ್ಲಿ ಗರಿಷ್ಠ 32 ಹಾಗೂ ಉಳ್ಳಾಲದಲ್ಲಿ ಕನಿಷ್ಠ 3 ಸಂಭವನೀಯ ಪ್ರವಾಹ ಪೀಡಿತ ಪ್ರದೇಶಗಳನ್ನು ಗುರುತಿಸಲಾಗಿದೆ. 88 ಕಡೆ ಸಂಭವನೀಯ ಭೂಕುಸಿತ ಪ್ರದೇಶವೆಂದು ಗುರುತಿಸಲಾಗಿದೆ. ಇದು ಕೂಡಾ ಬೆಳ್ತಂಗಡಿಯಲ್ಲಿ ಗರಿಷ್ಠ 35 ಹಾಗೂ ಪುತ್ತೂರಿನಲ್ಲಿ ಕನಿಷ್ಠ 3 ಕಡೆ ಭೂ ಕುಸಿತ ಪ್ರದೇಶಗಳನ್ನು ಗುರುತಿಸಲಾಗಿದೆ.

**ಈ ಬಗ್ಗೆ ಪ್ರತಿಕ್ರಿಯಿಸಿದ ಜಿಲ್ಲಾಧಿಕಾರಿಗಳು, ಕಳೆದ ಬಾರಿಯ ಮಳೆಗಾಲದಲ್ಲಿ ಸಾಕಷ್ಟು ಸಾವು-ನೋವುಗಳನ್ನು ಕಂಡಿದ್ದ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಈ ಬಾರಿಯೂ ಮಳೆಗಾಲ ನಡುಕ ಹುಟ್ಟಿಸಿದೆ. ಒಟ್ಟಿನಲ್ಲಿ ಉತ್ತಮ ಮಳೆಯಾಗಲಿ, ಆದರೆ ಜನರ ಬದುಕಲ್ಲಿ ಕಾರ್ಮೋಡ ಆವರಿಸದಿರಲಿ ಅನ್ನೋದೇ ನಮ್ಮ ಆಶಯ ಎಂದಿದ್ದಾರೆ**

**-ಜಿಲ್ಲಾಧಿಕಾರಿ ದರ್ಶನ್ ಹೆಚ್.ವಿ**

**ಇನ್ಸಿಡೆಂಟ್ ಕಮಾಂಡರ್‌ಗಳಾಗಿ ನೇಮಕ**

ಅಧಿಕಾರಿಗಳು ಸರ್ವ ಸನ್ನದ್ಧ ಸ್ಥಿತಿಯಲ್ಲಿ ಇರಬೇಕೆಂದು ಜಿಲ್ಲಾಧಿಕಾರಿ ದರ್ಶನ್ ಹೆಚ್.ವಿ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಮಹಾ ನಗರ ಪಾಲಿಕೆಯ 60 ವಾರ್ಡ್‌ಗಳಿಗೆ ಇಂಜಿನಿಯರ್‌ಗಳನ್ನು, 223 ಗ್ರಾಪಂ ವ್ಯಾಪ್ತಿಯಲ್ಲಿ ಪಿಡಿಒಗಳು, 13 ಸ್ಥಳೀಯ ಸಂಸ್ಥೆಗಳಲ್ಲಿ ಮುಖ್ಯಾಧಿಕಾರಿಗಳನ್ನು ಇನ್ಸಿಡೆಂಟ್ ಕಮಾಂಡರ್‌ಗಳಾಗಿ ನೇಮಕ ಮಾಡಲಾಗಿದೆ.

ಜಿಲ್ಲಾಡಳಿತದಿಂದ ವಿವಿಧ ಪ್ರದೇಶಗಳಿಗೆ ನೇಮಿಸಲಾಗಿರುವ ಇನ್ಸಿಡೆಂಟ್ ಕಮಾಂಡರ್‌ಗಳು ಜಾಗೃತರಾಗಿದ್ದು, ಸಾರ್ವಜನಿಕ ದೂರುಗಳಿಗೆ ಸ್ಪಂದಿಸುವುದು ಮತ್ತು ಜಿಲ್ಲಾಧಿಕಾರಿ ಕಚೇರಿಯ ನಿಯಂತ್ರಣ ಕೊಠಡಿಯೊಳಗೆ ನಿರಂತರ 25 ಸಿಬ್ಬಂದಿಯನ್ನೊಳಗೊಂಡ ಎನ್‌ಡಿಆರ್‌ಎಫ್ ತಂಡ ಪುತ್ತೂರು ತಾಲ್ಲೂಕಿನಲ್ಲಿ ನಿಯೋಜಿಸಲಾಗಿದ್ದು, 10 ಸಿಬ್ಬಂದಿಯ ಎನ್‌ಡಿಆರ್‌ಎಫ್ ತಂಡವನ್ನು ಸುಬ್ರಹ್ಮಣ್ಯದಲ್ಲಿ ನಿಯೋಜಿಸಲಾಗಿದೆ. ತುರ್ತು ಸಂದರ್ಭದಲ್ಲಿ ಕಾರ್ಯನಿರ್ವಹಿಸಲು 28 ಬೋಟ್ ಕಟ್ಟರ್, ಲೈಫ್ ಜಾಕೆಟ್, ಜೀವ ರಕ್ಷಕರು, ಜೆಸಿಬಿ ಯಂತ್ರ, ಟಿಪ್ಪರ್, ಕ್ರೇನ್‌ಗಳನ್ನು ಸಿದ್ಧಗೊಳಿಸಲಾಗಿದೆ.



**ಮಿನಿ ನ್ಯೂಸ್**

## ಶಾರ್ಟ್ ಸರ್ಕ್ಯೂಟ್‌ನಿಂದ ಧಗಧಗನೇ ಹೊತ್ತಿ ಉರಿದ ಬಸ್

• **ಉದಯವಾಹಿನಿ, ಶಿವಮೊಗ್ಗ:**

ವಿದ್ಯುತ್ ಶಾರ್ಟ್ ಸರ್ಕ್ಯೂಟ್‌ನಿಂದ ಖಾಸಗಿ ಬಸ್ ಧಗಧಗನೇ ಹೊತ್ತಿ ಉರಿದ ಘಟನೆ ಶಿವಮೊಗ್ಗ- ಉಡುಪಿಯ ಗಡಿಭಾಗದ ಹುಲಿಕಲ್ ಘಾಟ್‌ನಲ್ಲಿ ನಡೆದಿದೆ. ಶಿವಮೊಗ್ಗದ ಹೊಸನಗರ ತಾಲ್ಲೂಕಿನ ಮಾಸ್ತಿಕಟ್ಟೆ ಬಳಿಯ ಹುಲಿಕಲ್ ಘಾಟ್‌ನಲ್ಲಿ ಘಟನೆ ನಡೆದಿದ್ದು, ಅಗ್ನಿ ಅವಘಡದಲ್ಲಿ 17 ಜನ ಪ್ರಯಾಣಿಕರು ಅಪಾಯದಿಂದ ಪಾರಾಗಿದ್ದಾರೆ.

ಶಾರ್ಟ್ ಸರ್ಕ್ಯೂಟ್ ಆಗುತ್ತಿದ್ದಂತೆ ಪ್ರಯಾಣಿಕರನ್ನ ಚಾಲಕ ಹಾಗೂ ನಿರ್ವಾಹಕ ಕೆಳಗಿಳಿಸಿದ್ದಾರೆ. ನೋಡ ನೋಡುತ್ತಿದ್ದಂತೆ ಖಾಸಗಿ ಬಸ್ ಸಂಪೂರ್ಣ ಸುಟ್ಟು ಹೋಗಿದೆ. ಬಸ್ ಶಿವಮೊಗ್ಗದ ಹುಲಿಕಲ್‌ನಿಂದ ಉಡುಪಿಗೆ ತೆರಳುತ್ತಿತ್ತು. ಹುಲಿಕಲ್ ಘಾಟ್ ಕುಸಿತದ ನಂತರ ಬಸ್‌ಗಳು ಕನೆಕ್ಟಿಂಗ್ ಆಗಿ ಕಾರ್ಯನಿರ್ವಹಿಸುತ್ತಿತ್ತು. ಹುಲಿಕಲ್‌ನಿಂದ ಹೊರಟ ಬಸ್ ಕೆಲವು ಕಿ.ಮೀ ಸಾಗುವಷ್ಟರಲ್ಲೇ ಅಗ್ನಿ ಅವಘಡ ಸಂಭವಿಸಿದೆ. ಘಟನಾ ಸ್ಥಳಕ್ಕೆ ನಗರ ಠಾಣೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಅಗ್ನಿ ಅವಘಡದಿಂದ ಹುಲಿಕಲ್ ಘಾಟ್‌ನ ಸಂಚಾರದಲ್ಲಿ ವ್ಯತ್ಯಯ ಉಂಟಾಗಿದೆ. ನಗರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

## ದತ್ತಪೀಠದಲ್ಲಿ ಮಾಂಸಾಹಾರ ಸೇವನೆ ಆರೋಪ; ಹಿಂದೂ ಸಂಘಟನೆಗಳಿಂದ ಆಕ್ರೋಶ

• **ಉದಯವಾಹಿನಿ, ಚಿಕ್ಕಮಗಳೂರು**

ವಿವಾದಿತ ದತ್ತಪೀಠದಲ್ಲಿ ಮತ್ತೆ ಮಾಂಸಾಹಾರ ಸೇವನೆ ನಡೆದಿರುವ ಆರೋಪ ಕೇಳಿಬಂದಿದೆ. ಈ ಕುರಿತು ಹಿಂದೂ ಸಂಘಟನೆಗಳ ಮುಖಂಡರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಹಿಂದೂ ಹಾಗೂ ಮುಸ್ಲಿಂ ಸಮುದಾಯಗಳ ಧಾರ್ಮಿಕ ಭಾವೈಕ್ಯತೆಯ ಕ್ಷೇತ್ರವೆಂದು ಗುರುತಿಸಲ್ಪಟ್ಟಿರುವ ದತ್ತಪೀಠದ ಹಕ್ಕುದಾರಿಕೆ ವಿಚಾರವಾಗಿ ಎರಡೂ ಸಮುದಾಯಗಳು ನ್ಯಾಯಾಲಯದಲ್ಲಿ ಹೋರಾಟ ನಡೆಸುತ್ತಿರುವ ನಡುವೆಯೇ ಈ ಆರೋಪ ಹೊಸ ವಿವಾದಕ್ಕೆ ಕಾರಣವಾಗಿದೆ.

ದತ್ತಪೀಠದ ಯಾಗಶಾಲೆ ಸಮೀಪದಲ್ಲೇ ಕೆಲವರು ಮಾಂಸಾಹಾರ ಸೇವನೆ ನಡೆಸಿರುವುದಾಗಿ ಹಿಂದೂ ಸಂಘಟನೆ ಮುಖಂಡ ರಘು ಸಕಲೇಶಪುರ ಆರೋಪಿಸಿದ್ದಾರೆ.

ದತ್ತಪೀಠದ 200 ಮೀಟರ್ ವ್ಯಾಪ್ತಿಯಲ್ಲಿ ಮಾಂಸಾಹಾರ ಸೇವನೆ ನಿಷೇಧವಿದ್ದರೂ ನಿಯಮ ಉಲ್ಲಂಘನೆ ನಡೆದಿದ್ದು, ಇದಕ್ಕೆ ಜಿಲ್ಲಾಡಳಿತದ ನಿರ್ಲಕ್ಷ್ಯ ಹಾಗೂ ವೈಫಲ್ಯವೇ ಕಾರಣ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಹುಣ್ಣಿಮೆ ಪೂಜೆಗೆ ತೆರಳಿದ್ದ ವೇಳೆ ಈ ಘಟನೆ ಗಮನಕ್ಕೆ ಬಂದಿದೆ. ಸಂಬಂಧಪಟ್ಟ ಅಧಿಕಾರಿಗಳು ತಕ್ಷಣದ ಕ್ರಮ ಕೈಗೊಂಡು ಇಂತಹ ಘಟನೆಗಳು ಮರುಕಳಿಸದಂತೆ ನೋಡಿಕೊಳ್ಳಬೇಕು ಎಂದು ಹಿಂದೂ ಸಂಘಟನೆಗಳು ಒತ್ತಾಯಿಸಿವೆ. ಈ ಕುರಿತು ಜಿಲ್ಲಾಡಳಿತ ಅಥವಾ ಸಂಬಂಧಿತ ಅಧಿಕಾರಿಗಳ ಅಧಿಕೃತ ಪ್ರತಿಕ್ರಿಯೆ ಈ ವರೆಗೆ ನೀಡಿಲ್ಲ. ಕಳೆದ ವರ್ಷ ನವೆಂಬರ್‌ನಲ್ಲಿ ಈ ರೀತಿಯ ಘಟನೆ ನಡೆದಿತ್ತು.

ನಿಷೇಧಿತ ಹೋಮ ಮಂಟಪದ ಪಕ್ಕದಲ್ಲೇ ಮುಸ್ಲಿಂ ಕುಟುಂಬ ಮಾಂಸಾಹಾರ ಸೇವಿಸುತ್ತಿರುವ ವಿಡಿಯೋ ವೈರಲ್ ಆಗಿತ್ತು. ಜಿಲ್ಲಾಡಳಿತ ಈ ವಿವಾದಿತ ಪ್ರದೇಶದ 200 ಮೀಟರ್ ವ್ಯಾಪ್ತಿಯಲ್ಲಿ ಮಾಂಸಾಹಾರ ಸೇವನೆಗೆ ಪೂರ್ವದಲ್ಲೇ ನಿಷೇಧ ಹೇರಿದೆ. ಆದರೂ ಅದನ್ನು ಕೆಲವರು ಗಾಳಿಗೆ ತೂರಿದ್ದಾರೆ ಎಂದು ಹೇಳಲಾಗುತ್ತಿದೆ.

## ಮುಸ್ಲಿಂ ಯುವಕನ ಕಿರುಕುಳ ಅಪ್ರಾಪ್ತ ಹಿಂದೂ ಬಾಲಕಿ ಆತ್ಮಹತ್ಯೆ

• **ಉದಯವಾಹಿನಿ, ಬೆಳಗಾವಿ**

ಮುಸ್ಲಿಂ ಯುವಕನ ನಿರಂತರ ಕಿರುಕುಳಕ್ಕೆ ಬೇಸತ್ತು ಅಪ್ರಾಪ್ತ ಹಿಂದೂ ಬಾಲಕಿ ಆತ್ಮಹತ್ಯೆ ಮಾಡಿಕೊಂಡ ಘಟನೆ ಐಗಳಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ. ಬಂಧಿತ ಆರೋಪಿಯನ್ನು ಪಿರಾಜ್ ಕಾಳೆ ಎಂದು ಗುರುತಿಸಲಾಗಿದೆ. ಹಿಂದೂ ಯುವತಿಯ ಮನೆಗೆ ಪದೇ, ಪದೇ ಬರುತ್ತಿದ್ದ ಯುವಕ ನಿರಂತರ ಕಿರುಕುಳ ನೀಡುತ್ತಿದ್ದ. ಈ ಕಾರಣಕ್ಕೆ ಬೇಸತ್ತು ತಮ್ಮ ಮಗಳು ಆತ್ಮಹತ್ಯೆ ಮಾಡಿಕೊಂಡಿದ್ದಾಳೆ ಎಂದು ಪೋಷಕರು ದೂರು ದಾಖಲಿಸಿದ್ದಾರೆ. ಮನೆ ಕಟ್ಟಡ ಕಟ್ಟುವಲ್ಲಿ ಕೆಲಸ ಮಾಡುತ್ತಿದ್ದ ಪಿರಾಜ್ ಕಾಳೆ ಎಂಬಾತ ಮೃತ ಯುವತಿಗೆ ಪರಿಚಯವಾಗಿದ್ದ.

ಇಬ್ಬರ ನಡುವೆ ಪ್ರೀತಿ ಶುರುವಾಗಿತ್ತು. ಇದನ್ನು ಗಮನಿಸಿದ ಮನೆಯವರು ಯುವತಿಯ ಮೊಬೈಲ್ ಕಸಿದಿದ್ದರು. ಆದರೆ ಯುವಕ ಯುವತಿಯ ಮನೆ ಹತ್ತಿರ ಬಂದು ಕಿರುಕುಳ ನೀಡುತ್ತಿದ್ದ ಎಂದು ಪೋಷಕರು ಆರೋಪಿಸಿದ್ದಾರೆ. ಸದ್ಯ ಅಪ್ರಾಪ್ತ ಬಾಲಕಿಯ ಪೋಷಕರು ನೀಡಿರುವ ದೂರಿನ ಅನ್ವಯ ಆರೋಪಿ ಯುವಕನನ್ನು ಪೊಲೀಸರು ಬಂಧಿಸಿದ್ದಾರೆ.

ಐಗಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಯುವತಿ ಆತ್ಮಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಲವ್ ಜಿಹಾದ್ ಶಂಕೆ ವ್ಯಕ್ತವಾಗಿದೆ. ಆದರೆ ಪೊಲೀಸರ ತನಿಖೆಯಿಂದ ಹೆಚ್ಚಿನ ಮಾಹಿತಿ ತಿಳಿದು ಬರಬೇಕಿದೆ. ಪಿಯುಸಿ ಓದುತ್ತಿದ್ದ ಬಾಲಕಿಯನ್ನು ಕಳೆದುಕೊಂಡು ಕುಟುಂಬದವರು ಕಣ್ಣೀರು ಹಾಕುತ್ತಿದ್ದಾರೆ.

## ಸ್ಥಾನಕ್ಕಾಗಿ ಹಠ ಹಿಡಿದವನಲ್ಲ

• **ಉದಯವಾಹಿನಿ, ಶಿರಸಿ:**



ಉದಯವಾಹಿನಿ ಚಿತ್ರ

ನಾನು ಯಾವುದೇ ಸಂದರ್ಭದಲ್ಲೂ ಸ್ಥಾನಕ್ಕಾಗಿ ಹಠ ಹಿಡಿದವನಲ್ಲ. ಜಿಲ್ಲಾಧ್ಯಕ್ಷನಾಗಿ ಸುದೀರ್ಘ 13 ವರ್ಷಗಳ ಕಾಲ ಎಲ್ಲಾ ಹಿರಿಯ, ಕಿರಿಯ ಮುಖಂಡರನ್ನು ಮತ್ತು ಕಾರ್ಯಕರ್ತರನ್ನು ಒಟ್ಟಿಗೆ ಕರೆದೊಯ್ಯುವ ಮೂಲಕ ಪಕ್ಷವನ್ನು ಸಂಘಟಿಸಿದ್ದೇನೆ ಎಂದು ಶಾಸಕ ಭೀಮಣ್ಣ ನಾಯ್ಕ್ ತಿಳಿಸಿದ್ದಾರೆ. ಪತ್ರಕರ್ತರೊಂದಿಗೆ ಮಾತನಾಡಿದ ಅವರು, ತಮ್ಮ ರಾಜಕೀಯ ನಡೆ ಮತ್ತು ಪಕ್ಷದ ಜವಾಬ್ದಾರಿಗಳ ಕುರಿತು ಮಹತ್ವದ ವಿಷಯಗಳನ್ನು ಹಂಚಿಕೊಂಡರು.

ಕಳೆದ ಐದು ವರ್ಷಗಳಲ್ಲಿ ಮೂರ್ನಾಲ್ಕು ಚುನಾವಣೆಗಳನ್ನು ಎದುರಿಸಿದ್ದೇವೆ. ಪ್ರತಿಯೊಂದು ಚುನಾವಣೆಯಲ್ಲೂ ಪಕ್ಷದ ಬಲವರ್ಧನೆಗಾಗಿ ಪ್ರಾಮಾಣಿಕವಾಗಿ ಶ್ರಮಿಸಿದ್ದೇನೆ.

ಲೋಕಸಭಾ ಚುನಾವಣೆ ಹಾಗೂ ವಿಧಾನಸಭಾ ಚುನಾವಣೆಗಳ ಸಂದರ್ಭದಲ್ಲಿ ಪಕ್ಷದ ವರಿಷ್ಠರು ಮತ್ತು ರಾಜ್ಯ ಅಧ್ಯಕ್ಷರ ಸೂಚನೆಯಂತೆ ಎಲ್ಲರೊಂದಿಗೆ ಚರ್ಚಿಸಿ, ಒಮ್ಮತದ ನಿರ್ಧಾರಗಳ ಮೂಲಕ ಕೆಲಸ ಮಾಡಲಾಗಿದೆ. ಜನರ ಸಹಕಾರದೊಂದಿಗೆ ಕ್ಷೇತ್ರಕ್ಕೆ ಹೆಚ್ಚಿನ ಅನುದಾನವನ್ನು ತಂದು ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ. ಮುಂದಿನ ದಿನಗಳಲ್ಲೂ ಕ್ಷೇತ್ರದ ಜನತೆಯ ಆಶೋತ್ತರಗಳಿಗೆ ಸ್ಪಂದಿಸಿ, ಇನ್ನಷ್ಟು ಅಭಿವೃದ್ಧಿ ಕೆಲಸಗಳನ್ನು ಮಾಡಲು ಬದ್ಧನಾಗಿದ್ದೇನೆ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದರು.

